ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 183 ಸಂಚಿಕೆ- 183 | PAGE-8 ಪುಟ-8 | ಮಂಗಳವಾರ 02.09.2025 | RS.2/- ಬೆಲೆ 2/-

## ಬ್ರಿಮ್ಸ್ ಆಸ್ಪತ್ರೆಯ ಅವಾಂತರ
### ಪೌರಾಡಳಿತ ಸಚಿವರೇ ಇತ್ತ ಗಮನ ಹರಿಸುವಿರಾ?





ಮಲ್ಲಮ್ಮನುಡಿ ವಾರ್ತೆ ಬೀದರ್:ಸೆ.1: ಬೀದರ್ ಜಿಲ್ಲೆಯ ಬ್ರಿಮ್ಸ್ ಆಸ್ಪತ್ರೆ ಹೆಸರುವಾಸಿ ಆದ ಆಸ್ಪತ್ರೆ, ಈ ಆಸ್ಪತ್ರೆಯ ಅವರಣದಲ್ಲಿ ಸ್ವಚ್ಚತೆಗೆ ಅದ್ಯತೆ ನೀಡಲಾಗುತ್ತಿಲ್ಲ. ಕ್ಷೇತ್ರದ ಶಾಸಕರು. ಪೌರಾಡಳಿತ ಸಚಿವರಾದ ರಹಿಂ ಖಾನ ಇದ್ದಾರೆ. ಆದರೇ ಬ್ರಿಮ್ಸ್ ಆಸ್ಪತ್ರೆಯ ಅವರಣದಲ್ಲಿ ರಾಜಾರೋಷವಾಗಿ. ರೋಗಿಗಳು ಬಳಸಿದ್ದ ಗಲೀಜು ತಂದು ಆಸ್ಪತ್ರೆಯ ಅವರಣದಲ್ಲಿ ಹಾಕಲಾಗುತ್ತಿದೆ. ಪೌರಾಡಳಿತ ಸಚಿವರಾದ ರಹಿಂ ಖಾನ್ ರವರು ಯಾಕೆ ಈ ಕಡೆ ಗಮನ ಹರಿಸುತ್ತಿಲ್ಲ ಎಂಬ ಪ್ರಶ್ನೆ ಜನಸಾಮಾನ್ಯರದ್ದಾಗಿದೆ. ಬ್ರಿಮ್ಸ್ ಆಸ್ಪತ್ರೆಯವರು ಹಾಕುವ ಕಸದಿಂದ ಇಂದಿರಾ ಕ್ಯಾಂಟಿನ್ ನಲ್ಲಿ ಊಟ ಮಾಡುವ ಬಡ ಜನರು ನರಕಯಾತನೆ ಅನುಭವಿಸಬೇಕಾಗಿದೆ. ರಾಜ್ಯದ ಮುಖ್ಯ ಮಂತ್ರಿಗಳ ಬಹು ನಿರಿಕ್ಷಿತವಾದ ಇಂದಿರಾ ಕ್ಯಾಂಟಿನ್‌ನ್ನು ಬ್ರಿಮ್ಸ್‌ರವರು ಇದೆ ರೀತಿ ಕಸ ತಂದು ಹಾಕುತ್ತಿದ್ದರೆ ಕ್ಯಾಂಟಿನಿಗೆ ಜನರು ಯಾರೂ ಬರುವುದಿಲ್ಲ, ಕ್ಯಾಂಟಿನ್ ಬಂದ್ ಮಾಡಬೇಕಾಗುತ್ತದೆ. ದುರ್ವಾಸನೆಯಿಂದ ಜನರು ತತ್ತರಿಸುತ್ತಿದ್ದಾರೆ, ಅಲ್ಲದೆ ಕಸವನ್ನು 10 ಹಾಸಿಗೆ ಇರುವ ವೃದ್ದರ ಆಸ್ಪತ್ರೆ ಎದುರಿಗೆ ಹಾಕುತ್ತಿರುವದು ವಿಪರ್ಯಾಸದ ಸಂಗತಿಯಾಗಿದೆ. ಈಗಲಾದರೊ ಕ್ಷೇತ್ರದ ಶಾಸಕರು ಪೌರಾಡಳಿತ ಸಚಿವರು ಆದ ರಹಿಂ ಖಾನ್ ರವರು ಬ್ರಿಮ್ಸ್ ಆಸ್ಪತ್ರೆಯ ಅವರಣದಲ್ಲಿ ಹಾಕಲಾಗುತ್ತಿರುವ ಕಸವನ್ನು ಬೇರೆ ಕಡೆ ಸ್ಥಳಾಂತರಿಸುವುದರ ಮೂಲಕ ಇಂದಿರಾ ಕ್ಯಾಂಟಿನ್ ಗೆ ಬರುವ ಬಡ ಜನರ ನೆರವಿಗೆ ಧಾವಿಸುವದು ಅತಿ ಅವಶ್ಯಕವಾಗಿದೆ.

## ಕೌನ್ಸಿಲಿಂಗ್ ಮೂಲಕ ಪಿಡಿಒ ವರ್ಗಾವಣೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.1:ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು, ಪ್ರಸಕ್ತ ಸಾಲಿನಲ್ಲಿ ಒಂದು ಬಾರಿಗೆ ಅನ್ವಯಿಸುವಂತೆ ಒಂದೇ ಸ್ಥಳದಲ್ಲಿ 5 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ. 2025ರ ಸೆಪ್ಟೆಂಬರ್ 10 ರಿಂದ 2025ರ ಸೆಪ್ಟೆಂಬರ್ 20 ರವರೆಗೆ ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್ ಹಾಗೂ ಸೆಪ್ಟೆಂಬರ್ 23 ಹಾಗೂ 24ರಂದು ಸಾಮಾನ್ಯ ಕೋರಿಕೆ ವರ್ಗಾವಣೆಗಳ ಕೌನ್ಸಿಲಿಂಗ್ ಪ್ರಕ್ರಿಯೆಗಳು ಜರುಗಲಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು (ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-1 & ಗ್ರೇಡ್-2) ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆಗಳ ನಿಯಂತ್ರಣ) ನಿಯಮಗಳು 2024ನ್ನು ರಚಿಸಿ, ಅಧಿಸೂಚಿಸಲಾಗಿದೆ. ಈ ನಿಯಮಗಳಿಗೆ ಸೂಕ್ತ ತಿದ್ದುಪಡಿಗಳನ್ನು ತಂದು, ಒಂದೇ ಸ್ಥಳದಲ್ಲಿ 5 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕೌನ್ಸಿಲಿಂಗ್ ಮೂಲಕ ಕಡ್ಡಾಯವಾಗಿ ವರ್ಗಾವಣೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂಬ ಮಾಹಿತಿಯನ್ನು ಸಚಿವರು ಹಂಚಿಕೊಂಡಿದ್ದಾರೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಈಗಾಗಲೇ ಆನ್ ಲೈನ್ ಮೂಲಕ ವಿಶೇಷ ಪ್ರಕರಣಗಳ ಅಡಿಯಲ್ಲಿ 515 ಅರ್ಜಿಗಳು ಹಾಗೂ ಸಾಮಾನ್ಯ ಕೋರಿಕೆಯ ಅಡಿಯಲ್ಲಿ 1,215 ಅರ್ಜಿಗಳು ಸೇರಿದಂತೆ ಒಟ್ಟು 1,730 ಅರ್ಜಿಗಳು ಸ್ವೀಕೃತಗೊಂಡಿವೆ, ಪ್ರಸ್ತುತ ಖಾಲಿ ಹುದ್ದೆಗಳ, ಕಡ್ಡಾಯ ವರ್ಗಾವಣೆಗಳ ರಾಜ್ಯವಾರು ಅಂತಿಮ ಪಟ್ಟಿ ಹಾಗೂ ವರ್ಗಾವಣೆಯಿಂದ ವಿನಾಯತಿಗಾಗಿ ಕೋರಿಕೆ ಸಲ್ಲಿಸಿದವರ ಪಟ್ಟಿಯನ್ನು www.rdprtransfer.karnataka.gov.in ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದ್ದು, ಕಳೆದ 29ರಂದು ವಿಶೇಷ ಪ್ರಕರಣಗಳ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿಯನ್ನು ಸೆಪ್ಟೆಂಬರ್ 1ರಂದು ಸಾಮಾನ್ಯ ಕೋರಿಕೆ ಮತ್ತು ಕಡ್ಡಾಯ ವರ್ಗಾವಣೆಯ ಅಂತಿಮ ಆದ್ಯತಾ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ತಿಳಿಸಿರುವ ಸಚಿವರು ಈ ತಿಂಗಳ 3 ರಿಂದ 8ರವರೆಗೆ ವಿಶೇಷ ಪ್ರಕರಣಗಳ ಮೊದಲ ಸುತ್ತಿನ ಕೌನ್ಸಿಲಿಂಗ್ ಹಾಗೂ ಈ ತಿಂಗಳ 8ರಂದು ವಿಶೇಷ ಪ್ರಕರಣಗಳ ಎರಡನೇ ಸುತ್ತಿನ ಕೌನ್ಸಿಲಿಂಗ್ ಕೈಗೊಳ್ಳಲಾಗುತ್ತದೆ ಎಂದು ಹೇಳಿದ್ದಾರೆ.

2024-25ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ, ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ತ್ವರಿತ ಸೇವಾ ಪೂರೈಕೆ, ಭ್ರಷ್ಟಾಚಾರ ನಿಯಂತ್ರಣ ಮತ್ತು ದಕ್ಷತೆಯನ್ನು

(2ನೇ ಪುಟ ನೋಡಿ)

## ವರವಟ್ಟಿ ಜನರ ಸಮಸ್ಯೆ ಆಲಿಸಿದ ಮಾಜಿ ಸಚಿವ ಪಾಟೀಲ್



ಮಲ್ಲಮ್ಮನುಡಿ ವಾರ್ತೆ ಹುಮನಾಬಾದ್:ಸೆ.1: ಪಟ್ಟಣದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಭಾನುವಾರ ವರವಟ್ಟಿ (ಕೆ) ಗ್ರಾಮಸ್ಥರ ಸಮಸ್ಯೆಗಳನ್ನು ಮಾಜಿ ಸಚಿವ ರಾಜಶೇಖರ ಪಾಟೀಲ್ ಆಲಿಸಿದರು. ಬಳಿಕ ವರವಟ್ಟಿ (ಕೆ) ಗ್ರಾಮದ ಕೆಲ ಮುಖಂಡರು ಮಾತನಾಡಿ,

(2ನೇ ಪುಟ ನೋಡಿ)

## ಹೃದಯಘಾತದಿಂದ ಸಾವಿನಲ್ಲೂ ಒಂದಾದ ಸಹೋದರರು





ಮಲ್ಲಮ್ಮನುಡಿ ವಾರ್ತೆ ಕೆಂಭಾವಿ:ಸೆ.1: ರಾಜ್ಯದಲ್ಲಿ ಹೃದಯಘಾತ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಪ್ರಕರಣಗಳು ವರದಿಯಾಗುತ್ತಿರುವ ಬೆನ್ನಲ್ಲೆ ಸಿಟಿ ಜನ್ರ ಅಂಟು ರೋಗವಾಗಿದ್ದ ಹೃದಯಘಾತ ಈಗ ಗ್ರಾಮೀಣ ಭಾಗಕ್ಕೂ ಕಾಲಿಟ್ಟಿದೆ ಒಂದೇ ಮನೆಯಲ್ಲಿ ಅಣ್ಣತಮ್ಮರ ಇಬ್ಬರಿಗೂ ಉಸಿರು ನಿಲ್ಲಿಸಿದ ಹೃದಯ ಇದ-ರಿಂದ ಮುಂಜಾನೆ ಎದ್ದ ಇಬ್ಬರು

(2ನೇ ಪುಟ ನೋಡಿ)

## 2.20 ಕೋಟಿ ರೂ. ಮೌಲ್ಯದ ನಕಲಿ ತಂಬಾಕು ವಸ್ತುಗಳ ಜಪ್ತಿ, 8 ಜನರ ಬಂಧನ



ಮಲ್ಲಮ್ಮನುಡಿ ವಾರ್ತೆ ಬೀದರ. ಸೆ. 01 : ಗುಟ್ಕಾ, ಪಾನ್ ಮಸಾಲಾ ನಕಲು ಮಾಡಿ ಮಾರುತ್ತಿದ್ದ ಜಾಲವನ್ನು ಬೀದರ್ ಜಿಲ್ಲೆಯಲ್ಲಿ ಪೊಲೀಸರು ಎರಡು ಕಡೆ ದಾಳಿ ನಡೆಸಿ ಒಟ್ಟು

(2ನೇ ಪುಟ ನೋಡಿ)

## ಹಬ್ಬಗಳು ಭಾಷೆಗಳ ನಡುವಣ ಸೌಹಾರ್ದ ಸೇತುವೆಗಳು:ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಸೆ.1- ಓಣಂ ಕೇರಳದ ಸಾಂಪ್ರದಾಯಿಕ ಸುಗ್ಗಿ ಹಬ್ಬವಾಗಿದೆ. ಅನ್ಯರಾಜ್ಯದ ಹಬ್ಬವನ್ನು ಕನ್ನಡದ ನೆಲದಲ್ಲಿ ಆಚರಿಸುತ್ತಿರುವ ಸಂದರ್ಭದಲ್ಲಿ ಹಬ್ಬಗಳು ಭಾಷೆಗಳ ನಡುವಣ ಸೌಹಾರ್ದ ಸೇತುವೆಗಳಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು. ನಗರದ ಎಸ್.ನಿಜಲಿಂಗಪ್ಪ

(2ನೇ ಪುಟ ನೋಡಿ)

## ಡಿ.ಕೆ.ಶಿ, ಬಿ.ವೈ.ವಿ ಸೇರಿದರೂ ಸಿದ್ಧರಾಮಯ್ಯ ಸರ್ಕಾರ ಸುಭದ್ರ: ಯತ್ನಾಳ್




ಮಲ್ಲಮ್ಮನುಡಿ ವಾರ್ತೆ ಕಲಬುರಗಿ:ಸೆ.1-ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಬ್ಬರೂ ಸೇರಿದರೂ ಸಹ ರಾಜ್ಯದಲ್ಲಿನ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿನ ಕಾಂಗ್ರೆಸ್ ಸರ್ಕಾರ ಪತನಗೊಳ್ಳದು ಎಂದು ಬಿಜೆಪಿ ಉಚ್ಛಾಟಿತ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಹೇಳಿದರು.

ನಗರದಲ್ಲಿ ಲಿಂಗೈಕ್ಯ ಶರಣಬಸಪ್ಪ ಅಪ್ಪಾ ಅವರ ಸಮಾಧಿಗೆ ಭೇಟಿ ನೀಡಿದ ನಂತರ ಮಾಧ್ಯಮವರೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರು ಒಂದು ಕಾಲನ್ನು ಬಿಜೆಪಿಯಲ್ಲಿ ಇಟ್ಟಿದ್ದು, ಈಗಾಗಲೇ ಬಿಜೆಪಿ ಜೊತೆ ಸಹ ಶಿವಕುಮಾರ್ ಅವರೂ ಸಹ ಒಂದು ಚರ್ಚೆ ಮಾಡಿದ್ದಾರೆ ಎಂದರು.

ಬಿಜೆಪಿ ಜೊತೆ ಸೇರಿ ಸರ್ಕಾರ ಮಾಡಲು ದೆಹಲಿಯಲ್ಲಿ ವಿಜಯೇಂದ್ರ ಜೊತೆ ಸೇರಿ ಒಂದು ಚರ್ಚೆ ಮಾಡಿದ್ದರು. 60ರಿಂದ 70 ಕಾಂಗ್ರೆಸ್ ಶಾಸಕರನ್ನು ಕರೆತಂದು ನಮಸ್ತೆ ಸದಾ ವತ್ಸಲೇ ಹಾಡ್ತೀವಿ ಅಂತಾ ಹೇಳಿದ್ದಾರೆ. ಈ ಮೂಲಕ ಡಿ.ಕೆ. ಶಿವಕುಮಾರ್ ಅವರು ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿದ್ದರು. ಆದರೆ ನಮ್ಮ ಆಂತರಿಕ ವರದಿಯಲ್ಲಿ ಡಿ.ಕೆ. ಶಿವಕುಮಾರ್ ಅವರ ಕಡೆ 12 ಶಾಸಕರು ಇಲ್ಲ ಅಂತಾ ವರದಿ ಬಂತು. ಹೀಗಾಗಿ ನಾವು ಸರ್ಕಾರ

(2ನೇ ಪುಟ ನೋಡಿ)

## ಅಫ್ಘಾನಿಸ್ತಾನದಲ್ಲಿ ಭೂಕಂಪ: 800ರ ಗಡಿ ದಾಟಿದ ಸಾವಿನ ಸಂಖ್ಯೆ 2,500 ಜನರಿಗೆ ಗಾಯ



ಮಲ್ಲಮ್ಮ ನುಡಿ ವಾರ್ತೆ ಕಾಬೂಲ್:ಸೆ.1: ಅಫ್ಘಾನಿಸ್ತಾನದಲ್ಲಿ ಸಂಭವಿಸಿದ 6.0 ತೀವ್ರತೆಯ ಪ್ರಬಲ ಭೂಕಂಪದಿಂದಾಗಿ ಈವರೆಗೆ 800 ಮಂದಿ ಬಲಿಯಾಗಿದ್ದು, 2000ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಭಾನುವಾರ ಮಧ್ಯರಾತ್ರಿ (ಆ.31) ಜಲಾಲಾಬಾದ್‌ನ ಪೂರ್ವ ಈಶಾನ್ಯಕ್ಕೆ ಸುಮಾರು 27 ಕಿ.ಮೀ ದೂರದಲ್ಲಿ 6.0 ತೀವ್ರತೆಯ ಭೂಕಂಪ ದಾಖಲಾಗಿದೆ. ಪೂರ್ವ ಅಫ್ಘಾನಿಸ್ತಾನದಾದ್ಯಂತ

(2ನೇ ಪುಟ ನೋಡಿ)

## ಮತಗಳವು:ಮೋದಿ ವಿರುದ್ಧ ರಾಹುಲ್ ಹೈಡ್ರೋಜನ್ ಬಾಂಬ್



ಮಲ್ಲಮ್ಮ ನುಡಿ ವಾರ್ತೆ ಪಾಟ್ನಾ:ಸೆ.1: ಮತಗಳವು ಬಗ್ಗೆ ಆಟಂ ಬಾಂಬ್ ಹಾಕ್ತೇನೆ ಅಂತ ಮಹದೇವಪುರ, ಮಹಾರಾಷ್ಟ್ರದ ಬಗ್ಗೆ ದಾಖಲೆ ರಿಲೀಸ್ ಮಾಡಿದ್ದ ರಾಹುಲ್ ಗಾಂಧಿ ಈಗ ಬಿಹಾರದಲ್ಲಿ ಹೈಡ್ರೋಜನ್ ಬಾಂಬ್ ಸಿಡಿಸ್ತೇನೆ ಅಂದಿದ್ದಾರೆ. ಈ ಬಾರಿ ಹೈಡ್ರೋಜನ್ ಬಾಂಬ್ ಸಿಡಿಸಿದರೆ ಪಿಎಂ ಮೋದಿ ಮುಖ ಕೂಡ ತೋರಿಸಲಾಗಲ್ಲ ಎಂದಿದ್ದಾರೆ. ಬಿಹಾರದ ಮತದಾರರ ಅಧಿಕಾರ ರ್ಯಾಲಿ ಸಮಾರೋಪದಲ್ಲಿ ಮಾತಾಡಿರುವ ರಾಹುಲ್ ಗಾಂಧಿ, ಶೀಘ್ರದಲ್ಲೇ ದೊಡ್ಡ ವಿಷಯವನ್ನು ಬಹಿರಂಗಪಡಿಸುತ್ತೇನೆ ಅಂದಿದ್ದಾರೆ.

(2ನೇ ಪುಟ ನೋಡಿ)

## ಟಂಟಂ ಪಲ್ಟಿ:ಮಹಿಳೆ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ನಗರದ ಬಸವೇಶ್ವರ ಸರ್ಕಲ್ ಬಳಿ ಹೊಳೆ ಆಂಜನೇಯ ದೇವಸ್ಥಾನದ ಮುಂದೆ ಟಂಟಂ ವಾಹನ ಪಲ್ಟಿಯಾಗಿ ಓರ್ವ ಮಹಿಳೆ ಸಾವನ್ನಪ್ಪಿದ ಘಟನೆ ಸೋಮವಾರ ಸಂಜೆ ನಡೆದಿದೆ.

(2ನೇ ಪುಟ ನೋಡಿ)


## ಕನ್ನಡ ಕಲಿಯಲು ಯತ್ನ ರಾಷ್ಟ್ರಪತಿ ಮುರ್ಮು

ಮೈಸೂರು:ಸೆ.1: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೋಮವಾರ ಕನ್ನಡ ಕಲಿಯಲು ಪ್ರಯತ್ನಿಸುವುದಾಗಿ ತಿಳಿಸಿದ್ದಾರೆ ಮತ್ತು ದೇಶದ ಪ್ರತಿಯೊಂದು ಭಾಷೆ, ಸಂಸ್ಕೃತಿ ಮತ್ತು ಸಂಪ್ರದಾಯದ ಬಗ್ಗೆ ತಮಗೆ ಆಳವಾದ ಗೌರವವಿದೆ ಎಂದು ಒತ್ತಿ ಹೇಳಿದ್ದಾರೆ.

ಇಂದು ಮೈಸೂರಿನಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ(ಎಐಐಎಸ್‌ಎಚ್)ಯ

(2ನೇ ಪುಟ ನೋಡಿ)

## ಪಹಲ್ಗಾಮ್ ಭಯೋತ್ಪಾದ ದಾಳಿಗೆ ಎಸ್‌ಸಿಓ ಖಂಡನೆ



ಮಲ್ಲಮ್ಮ ನುಡಿ ವಾರ್ತೆ ಬೀಜಿಂಗ್:ಸೆ.1: ಭಯೋತ್ಪಾದನೆ ವಿರುದ್ಧ ಭಾರತ ನಡೆಸುತ್ತಿರುವ ಹೋರಾಟಕ್ಕೆ ಈಗ ಬಹುದೊಡ್ಡ ರಾಜತಾಂತ್ರಿಕ ಯಶಸ್ಸು ಸಿಕ್ಕಂತಾಗಿದೆ.

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಮಾಜಿ ಸಚಿವ ಪಾಟೀಲ್

ಮಳೆಗಾಲ ಬಂದರೆ ಸಾಕು ವರವಟ್ಟಿ ಗ್ರಾಮದಲ್ಲಿ ರೈತರು ತಮ್ಮ ಹೊಲಗಳಿಗೆ ಹೊಗಬೇಕಾದರೆ ಸೂಕ್ತ ರಸ್ತೆ ಸಂಪರ್ಕವಿಲ್ಲದ ಕಾರಣ ದಿನನಿತ್ಯ ಪರದಾಡುವ ಪರಿಸ್ಥಿತಿ ಎದುರಾಗಿದೆ. ಹೀಗಾಗಿ ನಮ್ಮ ಸಮಸ್ಯೆ ಬಗೆಹರಿಸಿಕೊಡಬೇಕು ಎಂದು ಮನವಿ ಮಾಡಿದರು.

ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ವರವಟ್ಟಿ (ಕೆ) ಗ್ರಾಮಸ್ಥರ ಸಮಸ್ಯೆ ಕುರಿತು ತಹಸೀಲ್ದಾರ್ ಹಾಗೂ ತಾಪಂ. ಇಒ ಅವರ ಜತೆಯಲ್ಲಿ ಮಾತನಾಡಿದ್ದೇನೆ. ಅಲ್ಲದೇ ಈ ಹಿಂದೆ ತಹಸೀಲ್ದಾರ್ ನೇತೃತ್ವದಲ್ಲಿ ಅಧಿಕಾರಗಳ ತಂಡ ಸ್ಥಳ ಕೂಡಾ ಪರಿಶೀಲನೆ ಮಾಡಿದ್ದಾರೆ. ಹೀಗಾಗಿ ಶೀಘ್ರದಲ್ಲೇ ಸಮಸ್ಯೆ ಬಗೆಹರಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನೀಲಕಂಠ ಶಟ್ಟಿ, ಹುಸೇನ ಶಟ್ಟಿ, ಸೋಮನಾಥ ಸ್ವಾಮಿ, ಬಸವರಾಜ ಉತ್ತಮ, ರಮೇಶ ಪಾಟೀಲ್, ರಾಜಪ್ಪ ಪಾಟೀಲ್, ಶಂಕರ ಮೇತ್ರೆ, ಅಂಬಣ್ಣ ಕೇರಿ, ಹಣಮಂತ ವಾಡೇಕರ, ಹನೀಫ್ ಭಟ್ಟಿ, ಸುನೀಲ್ ಉತ್ತಮ, ಲಕ್ಷ್ಮಣ ಹಲಗೆ, ಸಂಬಣ್ಣ ಉತ್ತಮ, ರಾಜಕುಮಾರ ಬೆಳಗೆ, ಸಂಗಮೇಶ ಬೆಳಗೆ, ರಾಜಕುಮಾರ ತೆಲಂಗ, ಮಲ್ಲಿಕಾರ್ಜುನ ಬೆಳಗೆ, ಮಲ್ಲಪ್ಪರೆಡ್ಡಿ, ಅಡೇಯ್ಯಸ್ವಾಮಿ, ಬಸಲಿಂಗ ಬೆಳಗೆ ಸೇರಿ ಅನೇಕರಿದ್ದರು.

# ಸೌಹಾರ್ದ ಸೇತುವೆಗಳು:ಚರಂತಿಮಠ

ವೈದ್ಯಕೀಯ ಮಹಾವಿದ್ಯಾಲಯದ ಶಿವಾಲಯ ಆವರಣದಲ್ಲಿ ಸೋಮವಾರ ಕೇರಳದ ಸಾಂಪ್ರದಾಯಿಕ ಓಣಂ ಹಬ್ಬಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಬಿ.ವಿ.ವಿ ಸಂಘದ ನರ್ಸಿಂಗ್ ಕಾಲೇಜುಗಳಲ್ಲಿ ಕೇರಳದ ಸುಮಾರು 500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಈ ಓಣಂ ಹಬ್ಬದ ಆಚರಣೆಗೆ ಅಲ್ಲಿಗೆ ತೆರಳಲು ಸಮಯದ ಅಭಾವದ ಕಾರಣ ಆ ವಿದ್ಯಾರ್ಥಿಗಳಿಗೆ ಬಾಗಲಕೋಟೆಯಲ್ಲೆ ಓಣಂ ಹಬ್ಬವನ್ನು ಅದ್ದೂರಿಯಾಗಿ ಆಚರಿಸುವ ವ್ಯವಸ್ಥೆ ಮಾಡಿಕೊಡಲಾಗಿದೆ ಎಂದು ಹೇಳಿದರು.

ಕೇರಳದ ಚಂಡಮದ್ದಳೆ ತಂಡ, ಬಾಣಸಿಗರ ತಂಡ ಮತ್ತು ಸ್ಥಬ್ದಚಿತ್ರಗಳು ಓಣಂ ಹಬ್ಬದ ಸಂಭ್ರಮವನ್ನು ಹೆಚ್ಚಿಸಿದೆ. ಇಂಥ ಆಚರಣೆಗಳ ಮೂಲಕ ಕರ್ನಾಟಕದ ವಿದ್ಯಾರ್ಥಿಗಳಿಗೆ ಅನ್ಯರಾಜ್ಯದ ಸಂಪ್ರದಾಯ ಮತ್ತು ಸಂಸ್ಕೃತಿಯ ಪರಿಚಯ ಮಾಡಿಸಿದಂತಾಗುತ್ತದೆ. ಅದೇರೀತಿ ಈ ನೆಲದ ಹಬ್ಬಗಳು ಮತ್ತು ರಾಜ್ಯೋತ್ಸವದ ಆಚರಣೆಯ ಮೂಲಕ ಅನ್ಯಭಾಷಿಕರಿಗೆ ಕನ್ನಡದ ವಿಶಿಷ್ಠತೆಯನ್ನು ಪರಿಚಯಿಸಲಾಗುತ್ತಿದೆ ಎಂದು ಚರಂತಿಮಠ ಹೇಳಿದರು.

ಸಜ್ಜಲಶ್ರೀ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿನಿಯರು ಸಾಂಪ್ರದಾಯಿಕ ಉಡುಗೆ ತೊಟ್ಟು ಓಣಂ ನೃತ್ಯ ಪ್ರದರ್ಶಿಸಿದರು. ಮಹಾಬಲಿ ಮತ್ತು ಇನಸ್ಟಾಗ್ರಾಂ ನಲ್ಲಿ ಅತೀ ಹೆಚ್ಚು ವೀಕ್ಷಣೆಗಾಗಿ ಗಿನ್ನಿಸ್ ವರ್ಲ್ಡ ರೆಕಾರ್ಡ ಹೊಂದಿರುವ ಕಾವಾಡಿ ದ್ರುವಂ ಕಲಸ್ಮತಿ ಕಲಾವಿದರ ತಂಡದವರಿಂದ ಹಾಗೂ 500 ಜನ ವಿದ್ಯಾರ್ಥಿನಿಯರಿಂದ ಅದ್ದೂರಿ ಮೆರವಣಿಗೆ ಜರುಗಿತು. ನಂತರ ಕೇರಳದ 24 ಪ್ರಕಾರದ ವಿವಿಧ ಓಣಂ ಖಾದ್ಯಗಳನ್ನು ಸೇವಿಸಿ ಸಂಭ್ರಮಿಸಲಾಯಿತು.

ಕಾರ್ಯಕ್ರಮದಲ್ಲಿ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಎನ್.ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಹಾಸ್ಟೆಲ್ ಕಮಿಟಿ ಕಾರ್ಯಾಧ್ಯಕ್ಷ ಕುಮಾರಸ್ವಾಮಿ ಹಿರೇಮಠ, ಬಿ.ವಿ.ವಿ ಸಂಘದ ಸದಸ್ಯರಾದ ಮಹೇಶ ಅಂಗಡಿ, ಅಶೋಕ ಕಲ್ಯಾಣಶೆಟ್ಟರ, ಆಡಳಿತ ಮಂಡಳಿಯ ಸದಸ್ಯ ಡಾ.ಸುಭಾಷ ಪಾಟೀಲ, ನರ್ಸಿಂಗ್ ಕಾಲೇಜುಗಳ ಪ್ರಾಚಾರ್ಯರಾದ ಡಾ.ದಿಲೀಪ್ ನಾಟೆಕರ್, ಡಾ.ಜಯಶ್ರೀ ಈಟ್ಟಿ ಮತ್ತು ಡಾ.ಪ್ರವೀಣ ಪಾಟೀಲ, ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ, ದಂತ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಶ್ರೀನಿವಾಸ ವನಕಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಫಿಜಿಯೋಥೆರಪಿ ಕಾಲೇಜಿನ ಮಹಾಂತೇಶ ಬಿರಡಿ ಉಪಸ್ಥಿತರಿದ್ದರು.

# ಒಂದಾದ ಸಹೋದರರು

ಹೃದಯಘಾತದಿಂದ ಸಾವನ್ನಪ್ಪಿದ ಘಟನೆ ಜರುಗಿದೆ

ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಕೆಂಭಾವಿಯಲ್ಲಿ ಘಟನೆ ನಡೆದಿದೆ ಕೆಂಭಾವಿ ಪಟ್ಟಣದ ಜನತಾ ಕಾಲೋನಿ ನಿವಾಸಿಗಳಾದ ಶಮ್ಮಶುದ್ದಿನ್ ಪೇಶಮಾಮ( 42 ) ಇರ್ಫಾನ್ ಪೇಶಮಾಮ್ ( 38): ಇಬ್ಬರು ಸಾವನ್ನಪ್ಪಿದ ಸಹೋದದರು ಸಾವಿನಲ್ಲೂ ಕೂಡ ಸಹೋದರರಿಬ್ಬರ ಸಾವು ಜನತೆ ಆತಂಕ ಉಂಟು ಮಾಡಿದೆ ಬದಲಾಗುತ್ತಿರುವ ಜೀವನ ಶೈಲಿ ವಾತವಾರಣದಿಂದ ಜನ್ರರಿಗೆ ಹೃದಯಘಾತದ ಕಾಯಿಲೆಗಳು ಉಲ್ಬಣಗೊಂಡು ಕ್ಷಣ ಮಾತ್ರ ಉಸಿರು ನಿಲ್ಲುವಂತೆ ಮಾಡುತ್ತಿದೆ ಇನ್ನೂ ಅಣ್ಣ ನಿಗೆ ಹೃದಯಘಾತದಿಂದ ಮೃತಪಟ್ಟ ವಿಷಯ ತಿಳಿಯುತ್ತಿದಂತೆ ತಮ್ಮನಿಗೂ ಹೃದಯಘಾತದ ಅನುಭವವಾಗಿದೆ ಎದೆನೋವು ಕಾಣಿಸಿಕೊಂಡ ಮೇಲೆ ನಂತರ ಆಸ್ಪತ್ರೆಗೆ ಚಿಕಿತ್ಸೆ ರವಾನಿಸಿದರು ಚಿಕಿತ್ಸೆ ಪಲಕಾರಿಯಾಗದೆ ಒಂದೇ ಇಬ್ಬರು ಹೃದಯಘಾತದಿಂದ ಸಾವನ್ನಪ್ಪಿದ ಘಟನೆ ಜರುಗಿದೆ .

# ತಂಬಾಕು ವಸ್ತುಗಳ ಜಪ್ತಿ, 8 ಜನರ ಬಂಧನ

2.20 ಕೋಟಿ ರೂ. ಮೌಲ್ಯದ ನಕಲಿ ತಂಬಾಕು ವಸ್ತುಗಳನ್ನು ಜಪ್ತಿ ಮಾಡಿ 8 ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತರನ್ನು ಹೈದರಾಬಾದ್ ಮೂಲದ ತನ್ವೀರ್, ಬೀದರ್ ಮೂಲದ ರಿಜ್ವಾನ್, ತನ್ವೀರ್ ಶೇರಿಕಾರ್, ಬಸೀರುದ್ದೀನ್, ಮಣಿಪುರ ಮೂಲದ ಯಾಸೀನ್, ಎಂ.ಡಿ. ಸಿರಾಜ್?, ಶರೀಫ್,ಅನಾಸ್, ರೋಹಿತ್, ಚೇಸಾನ್, ಮೊಹದ್ ಅನಾಸ್ ಎಂದು ಎಸ್‌ಪಿ ಪ್ರದೀಪ್ ಗುಂಟೆ ಮಾಹಿತಿ ನೀಡಿದ್ದಾರೆ.

ಗಾಂಧಿಗಂಜ್ ಪೊಲೀಸ್ ಠಾಣೆಯ ವ್ಯಾಪ್ತಿಯ ಚಿದ್ರಿಬುತ್ತಿ ಬಸವಣ್ಣ ಹತ್ತಿರದ ಮನೆಯಲ್ಲಿ ಅಕ್ರಮವಾಗಿ ಪಾನ್ ಮಸಾಲಾ, ಕಲಬೆರಕೆ ಮಾಡಿದ ಗುಟ್ಕಾ ಸಾಮಗ್ರಿಯನ್ನು ಸಂಗ್ರಹಿಸಿಡಲಾಗಿತ್ತು ಇದನ್ನು ಪತ್ತೆ ಮಾಡಿ ನಮ ಪೊಲೀಸರು ದಾಳಿ ನಡೆಸಿದ್ದಾರೆ ಎಂದು ತಿಳಿಸಿದ್ದಾರೆ.

ನೂತನ ನಗರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಕೋಳಾರ ಕೈಗಾರಿಕಾ ಪ್ರದೇಶದಲ್ಲಿ ಶೇಡ್‌ವೊಂದರ ಮೇಲೂ ದಾಳಿ ನಡೆಸಲಾಗಿದೆ. ಹೊರಗೆ ಟು ಲೆಟ್ ಬೋರ್ಡ್ ಹಾಕಿ, ಒಳಗಡೆ ಪರವಾನಗಿ ಇಲ್ಲದೆ, ಮಾನವನ ಆರೋಗ್ಯಕ್ಕೆ ಹಾನಿಕಾರಕವಾದಂಥ ರಾಸಾಯನಿಕ ಪದಾರ್ಥಗಳನ್ನ ಸಂಗ್ರಹಿಸಿಟ್ಟಿರುವುದು ಕಂಡುಬಂದಿತ್ತು. ಸದ್ಯ 43.30 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ಬಂಧಿತರ ವಿರುದ್ಧ ಬಿಎನ್‌ಎಸ್ ಕಾಯ್ದೆ 2023 ರ ಕಲಂ 7, ಕೋಟ್ಪಾ ಕಾಯ್ದೆಯಡಿ ಪ್ರಕರಣ ದಾಖಲಿಸಿ ಎಂದು ಎಸ್‌ಪಿ ತಿಳಿಸಿದ್ದಾರೆ. ಬೇರೆ ರಾಜ್ಯದವರು ಕರ್ನಾಟಕದಲ್ಲಿ ಬಂದು ಕಲಬೆರಕೆ ಗುಟ್ಕಾ ತಯಾರಿಸಿ,ಕಳ್ಳ ದಂಧೆ ನಡೆಸುತ್ತಿರುವುದು ಗೊತ್ತಾಗಿದೆ.

# ಸರ್ಕಾರ ಸುಭದ್ರ: ಯತ್ನಾಳ್

ಮಾಡಲು ಪ್ರಯತ್ನಿಸಿಲ್ಲ ಎಂದು ಬಿಜೆಪಿ ವರಿಷ್ಠರು ಹೇಳಿದರು. ವಿಜಯೇಂದ್ರ ಹಾಗೂ ಡಿ.ಕೆ. ಶಿವಕುಮಾರ್ ಅವರಿಬ್ಬರು ಕುಳಿತುಬಿಟ್ಟಿದ್ದರೆ ಕರ್ನಾಟಕವನ್ನು ಮಾರಾಟ ಮಾಡುತ್ತಿದ್ದರು ಎಂದು ಅವರು ಹೇಳಿದರು.

ಹೀಗಾಗಿ ಡಿ.ಕೆ. ಶಿವಕುಮಾರ್ ಅವರು ಬೇಡ ಎಂದು ನಮ್ಮವರು ಅಂದಿದ್ದರು ಎಂದು ತಿಳಿಸಿದ ಅವರು, ಡಿ.ಕೆ. ಶಿವಕುಮಾರ್ ಅವರು ಪಾಪ ನಮಸ್ತೆ ಸದಾ ವತ್ಸಲೆ ಅಂತಾ ಹೇಳಿದ್ರು ನಮಸ್ತೆ ಸೋನಿಯಾ ಮಾತೆ ಇಟಲಿ ಕಾ ಪುತ್ರ ಅಂತಾ ಹಾಡಿದ್ರೆ, ಸಿದ್ಧರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ತೆಗೆದು ಸೋನಿಯಾ ಗಾಂಧಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುತ್ತಿದ್ದರು. ಭಾರತ ಮಾತೆಗೆ ನಮಸ್ತೆ ಅಂದ್ರೆ ಅವರಿಗೆ ನೋವಾಗುತ್ತದೆ. ಇಟಲಿ ಮಾತೆಗೆ ಒಂದು ಹಾಡು ಕಟ್ಟಿ ಹಾಡಬೇಕು. ಸೋನಿಯಾ ಮಾತೆ ಅಂತಾ ಹಾಡಿದ್ರೆ ಡಿ.ಕೆ. ಶಿವಕುಮಾರ್ ಅವರು 24 ಗಂಟೆಯಲ್ಲಿ ಮುಖ್ಯಮಂತ್ರಿ ಆಗುತ್ತಾರೆ ಎಂದು ಅವರು ಲೇವಡಿ ಮಾಡಿದರು.

ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆ ಆಯ್ಕೆ ಮಾಡೋ ಬದಲು ಸನಾತನ ಧರ್ಮದ ಮೇಲೆ ನಂಬಿಕೆ ಇರುವ ಸಾಧನೆ ಮಾಡಿದ ದಲಿತ ಅಥವಾ ಇತರೆ ಮಹಿಳೆಯರನ್ನು ಆಯ್ಕೆ ಮಾಡಬೇಕಾಗಿತ್ತು. ಸಿದ್ಧರಾಮಯ್ಯ ಅವರಿಗೆ ಸದ್ಯ ಮುಸ್ಲಿಮರೇ ಮತ ಹಾಕಿದಂತೆ ಮಾಡುತ್ತಿದ್ದಾರೆ. ಹಿಂದುಗಳು ವೋಟ್ ಹಾಕಿಲ್ವಾ? ಎಂದು ಪ್ರಶ್ನಿಸಿದ ಅವರು, ಚಾಮುಂಡಿ ದೇವಿಯ ಆರಾಧನೆ ಹಿಂದೂಗಳು ಮಾಡುತ್ತಾರೆ. ಡಿ.ಕೆ. ಶಿವಕುಮಾರ್ ಅವರು ಇದು ಸಾರ್ವಜನಿಕ ಅಂತಾ ಹೇಳ್ತಾರೆ, ಹಾಗಿದ್ರೆ ದರ್ಗಾ, ಮಸೀದಿಗಳನ್ನು ಸಾರ್ವಜನಿಕ ಅಂತಾ ಹೇಳಿ. ಸಿದ್ಧರಾಮಯ್ಯ ತಮ್ಮ ಜಾತಿಗೆ ಏನು ಮಾಡಿಲ್ಲ. ಎಲ್ಲಾ ಮುಸ್ಲಿಮರಿಗೇ ಮಾಡ್ತಿದ್ದಾರೆ. ಹಿಂದುಗಳಿಗೆ ಮಾಡುವ ಅಪಮಾನಕ್ಕೆ ಜನ ಬುದ್ಧಿ ಕಲಿಸ್ತಾರೆ ಎಂದು ವಾಗ್ದಾಳಿ ಮಾಡಿದರು.

# ಸಾವಿನ ಸಂಖ್ಯೆ 2,500 ಜನರಿಗೆ ಗಾಯ

ಮೊದಲು ಭೂಕಂಪ ಸಂಭವಿಸಿದ ನಂತರ 30 ನಿಮಿಷಗಳ ಅವಧಿಯಲ್ಲಿಯೇ ಮತ್ತೆ ಮೂರರಿಂದ ನಾಲ್ಕು ಕಂಪನಗಳು ಸಂಭವಿಸಿವೆ. ಅವುಗಳ ತೀವ್ರತೆ 4 ರಿಂದ 5ರವರೆಗೆ

ಇತ್ತು ಎಂದು ಮೂಲಗಳು ತಿಳಿಸಿವೆ.

ಈ ಕುರಿತು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ಮಾಹಿತಿ ಪ್ರಕಾರ, ಸ್ಥಳೀಯ ಕಾಲಮಾನ ರಾತ್ರಿ 11:47ಕ್ಕೆ ಭೂಕಂಪ ಸಂಭವಿಸಿದೆ. ಭೂಕಂಪದ ಕೇಂದ್ರಬಿಂದುವು ಆಗ್ನೇಯ ಅಫ್ಘಾನಿಸ್ತಾನದಲ್ಲಿ 160 ಕಿ.ಮೀ ಆಳದಲ್ಲಿ 34.50ಓ ಅಕ್ಷಾಂಶ ಮತ್ತು 70.81ಇ ರೇಖಾಂಶದಲ್ಲಿದೆ ಎಂದು ತಿಳಿಸಿದೆ.

ಭೂಕಂಪದಿಂದಾಗಿ ಕುನಾರ್ ಪ್ರಾಂತ್ಯದ ಮೂರು ಗ್ರಾಮಗಳು ಸಂಪೂರ್ಣವಾಗಿ ನೆಲಸಮವಾಗಿದ್ದು, ನುರ್ಗಲ್, ಚಾವ್ಕೇ ಮತ್ತು ವಾಟಪುರ್ ಜಿಲ್ಲೆಗಳಲ್ಲಿ ತೀವ್ರ ಹಾನಿಯಾಗಿದೆ. ಜೊತೆಗೆ ಹಲವರು ಮನೆಯ ಛಾವಣಿ ಅಡಿಯಲ್ಲಿಯೇ ಸಿಲುಕಿ ಸಾವನ್ನಪ್ಪಿದ್ದಾರೆ. ಸದ್ಯ ಪಾಕಿಸ್ತಾನದ ಖೈಬರ್ ಪಖ್ತುನ್ವಾ ಪ್ರದೇಶದ ಗಡಿಯಲ್ಲಿ ರಕ್ಷಣಾ ತಂಡಗಳು ಕಾರ್ಯಾಚರಣೆ ನಡೆಸಿವೆ. ಪಾಕಿಸ್ತಾನ ಮತ್ತು ಉತ್ತರ ಭಾರತದ ಕೆಲವು ಪ್ರದೇಶಗಳಲ್ಲಿಯೂ ಭೂಕಂಪದ ಅನುಭವವಾಗಿದೆ. ದೆಹಲಿಯ ಎನ್‌ಸಿಆರ್ ಮತ್ತು ಇತರ ನಗರಗಳ ನಿವಾಸಿಗಳು ಕಂಪನದ ಅನುಭವವಾಗಿ ಭಯದಿಂದ ಮನೆಯಿಂದ ಹೊರಗೆ ಓಡಿದ್ದಾರೆ ಎಂದು ವರದಿಯಾಗಿದೆ.

ಇನ್ನೂ ಈ ಸಂಬಂಧ ಪ್ರಧಾನಿ ಮೋದಿ ಅಫ್ಘಾನಿಸ್ತಾನಕ್ಕೆ ಅಗತ್ಯ ನೆರವು ಕೊಡ್ತೇವೆ ಎಂದು ಹೇಳಿದ್ದಾರೆ. ಅಫ್ಘಾನಿಸ್ತಾನದಲ್ಲಿ ಸಂಭವಿಸಿದ ಭೂಕಂಪದಿಂದ ಉಂಟಾದ ಜೀವಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ಇಂತಹ ಸಮಯದಲ್ಲಿ ಮೃತರ ಕುಟುಂಬಸ್ಥರಿಗಾಗಿ ನಾವು ಪಾರ್ಥಿಸುತ್ತೇವೆ. ಗಾಯಗೊಂಡವರು ಶೀಘ್ರವಾಗಿ ಗುಣಮುಖರಾಗಲಿ. ಮಾನವೀಯ ದೃಷ್ಟಿಯಿಂದ ಅಗತ್ಯವಿರುವ ಎಲ್ಲಾ ರೀತಿಯ ಸಹಾಯ ಮಾಡಲು ಸಿದ್ಧವಿದ್ದೇನೆ ಎಂದು ತಿಳಿಸಿದ್ದಾರೆ. ಇದರ ಬೆನ್ನಲ್ಲೇ 15 ಟನ್ ಪರಿಹಾರ ಸಾಮಾಗ್ರಿ ತೆರಳಿದೆ.

# ರಾಹುಲ್ ಹೈಡ್ರೋಜನ್ ಬಾಂಬ್

ಆಗಸ್ಟ್ 17 ರಂದು ಎಸ್‌ಐಆರ್ ಮತ್ತು ಬಿಹಾರದ ಮತಗಳ್ಳತನದ ವಿರುದ್ಧ ಪ್ರಾರಂಭಿಸಲಾಗಿತ್ತು. ಬಿಹಾರದ ಸುಮಾರು 25 ಜಿಲ್ಲೆಗಳ ಮೂಲಕ 1,300 ಕಿ.ಮೀ ದೂರವನ್ನು ಕ್ರಮಿಸಿ ಪಾಟ್ನಾದಲ್ಲಿ ಸಮಾರೋಪಗೊಂಡಿದೆ.

ಎಐಸಿಸಿ ಅಧ್ಯಕ್ಷ ಖರ್ಗೆ ಮಾತಾಡಿ, ಮೋದಿಗೆ ಮತ ಕಳವು ಅಭ್ಯಾಸವಾಗಿಬಿಟ್ಟಿದೆ. ಬಿಹಾರದಲ್ಲೂ ಮತಗಳವು ಮೂಲಕ ಗೆಲ್ಲೋದಿಕ್ಕೆ ಮೋದಿ ಪ್ಲಾನ್ ಮಾಡಿದ್ದರು ಅಂತ ಆರೋಪಿಸಿದ್ದಾರೆ.

ರಾಹುಲ್ ವಿರುದ್ಧ ಬಿಜೆಪಿಯ ರವಿಶಂಕರ್ ಪ್ರಸಾದ್ ಕಿಡಿಕಾರಿದ್ದು, ಇದು ಮತದಾರರಿಗೆ ಮಾಡಿದ ಅತಿದೊಡ್ಡ ಅವಮಾನ. ಇವಿಎಂ ಬದಲಿಗೆ ಮತಪತ್ರಕ್ಕೆ ಆಗ್ರಹಿಸುತ್ತಿರುವ ಇವರ ಉದ್ದೇಶ ಚುನಾವಣಾ ಪ್ರಕ್ರಿಯೆಯಲ್ಲಿ ಗೋಲ್ಮಾಲ್ ಮಾಡೋದೇ ಆಗಿದೆ ಅಂದಿದ್ದಾರೆ.

ಈ ಮಧ್ಯೆ, ಬಿಹಾರದಲ್ಲಿ ಮತಪರಿಷ್ಕರಣೆ ದಿನಾಂಕ ವಿಸ್ತರಣೆಗೆ ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಅಲ್ಲದೆ, ವಿಶ್ವಾಸದ ವಿಷಯವಾಗಿರೋದ್ರಿಂದ ರಾಜಕೀಯ ಪಕ್ಷಗಳು ಭಾಗಿಯಾಗ್ಬೇಕು ಅಂತ ಸಲಹೆ ಕೊಟ್ಟಿದೆ.

# ದಾಳಿಗೆ ಎಸ್‌ಸಿಓ ಖಂಡನೆ

ಚೀನಾದ ಟಿಯಾಂಜಿನ್‌ನಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಒಕ್ಕೂಟದ ಶೃಂಗ ಸಭೆಯಲ್ಲಿ ಸದಸ್ಯ ರಾಷ್ಟ್ರಗಳು ಒಮ್ಮತವಾಗಿ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನ ಖಂಡಿಸಿವೆ. ಜೊತೆಗೆ ಭಯೋತ್ಪಾದನೆ ತಡೆಯುವ ಭಾರತದ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿವೆ.

ಪ್ರಧಾನಿ ಮೋದಿ ಭಾಷಣದ ಬಳಿಕ ಎಸ್‌ಸಿಓ ಪಹಲ್ಗಾಮ್ ದಾಳಿ ಖಂಡಿಸಿ ಹೇಳಿಕೆ ಬಿಡುಗಡೆ ಮಾಡಿತು. ದಾಳಿಯನ್ನು ಒಕ್ಕೊರಲಿನಿಂದ ಖಂಡಿಸಿದ್ದು, ಭಾರತಕ್ಕೆ ಬೆಂಬಲ ಸೂಚಿಸಿತು. 26 ಮಂದಿ ಅಮಾಯಕರ ಸಾವಿಗೆ ಕಾರಣವಾದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು, ಎಸ್‌ಸಿಓ ಸದಸ್ಯ ರಾಷ್ಟ್ರಗಳು ಬಲವಾಗಿ ಖಂಡಿಸಿದವು. ಮೃತರು ಮತ್ತು ಗಾಯಗೊಂಡವರ ಕುಟುಂಬಗಳಿಗೆ ತಮ್ಮ ಆಳವಾದ ಸಂತಾಪ ವ್ಯಕ್ತಪಡಿಸಿದವು. ಅಮಾನವೀಯ ದಾಳಿಯ ಅಪರಾಧಿಗಳು ಮತ್ತು ಪ್ರಾಯೋಜಕರನ್ನ ನ್ಯಾಯದ ಕಟಕಟೆಗೆ ತರಬೇಕು ಎಂದು ಒತ್ತಾಯಿಸಿದವು.

ಶೆಹಬಾಜ್ ಷರೀಫ್ ಸಭೆಯಲ್ಲಿ ಪಾಲ್ಗೊಂಡಿದ್ದಾಗಲೇ ಈ ಬೆಳವಣಿಗೆ ನಡೆದಿರುವುದು ಪಾಕಿಸ್ತಾನದ ಪ್ರಧಾನಿಗೆ ಕಪಾಳಮೋಕ್ಷ ಮಾಡಿದಂತಾಗಿದೆ.

ಎಸ್‌ಸಿಓ ಸಭೆಯಲ್ಲಿ ಪಾಕ್ ಪ್ರಧಾನಿ ಎದುರಲ್ಲೇ ಪಹಲ್ಗಾಮ್ ಭಯೋತ್ಪಾದಕ ದಾಳಿ ಪ್ರಸ್ತಾಪಿಸಿದ ನರೇಂದ್ರ ಮೋದಿ , ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ಬೆಂಬಲ ಕೋರಿದರು. ಅಲ್ಲದೇ ಭಯೋತ್ಪಾದನೆಯ ವಿಚಾರದಲ್ಲಿ ಡಬಲ್ ಸ್ಟ್ಯಾಂಡರ್ಡ್ ಸ್ವೀಕಾರಾರ್ಹವಲ್ಲ, ಎಸ್‌ಸಿಓ ಸದಸ್ಯ ರಾಷ್ಟ್ರಗಳು ಒಂದೇ ಧ್ವನಿಯಲ್ಲಿ ಹೇಳಬೇಕು ಎಂದು ಪ್ರಧಾನಿ ಮೋದಿ ಒತ್ತಿ ಹೇಳಿದರು.

ಇದಕ್ಕೂ ಮುನ್ನ, ಕಳೆದ 4 ದಶಕಗಳಿಂದಲೂ ಭಾರತ ಭಯೋತ್ಪಾದನೆಯಿಂದ ಬಳಲುತ್ತಿದೆ. ಈ ಭಯೋತ್ಪಾದನಾ ಪಿಡುಗಿಗೆ ಅನೇಕ ತಾಯಂದಿರು ತಮ್ಮ ಮಕ್ಕಳನ್ನ ಕಳೆದುಕೊಂಡಿದ್ದಾರೆ. ಇತ್ತೀಚಿನ ಪಹಲ್ಗಾಮ್ ದಾಳಿಯಲ್ಲಿ ನಾವು ಈ ಭಯೋತ್ಪಾದನೆಯ ಕೊಳಕು ಮನಸ್ಥಿತಿಯನ್ನ ನೋಡಿದ್ದೇವೆ. ಈ ಬಿಕ್ಕಟ್ಟಿನ ಸಮಯದಲ್ಲಿ ನಮ್ಮೊಟ್ಟಿಗೆ ನಿಂತ ಸ್ನೇಹಿತರಿಗೆ ನಾನು ಧನ್ಯವಾದ ಹೇಳುತ್ತೇನೆ. ಇದು ಕೇವಲ ಭಾರತದ ಆತ್ಮದ ಮೇಲಿನ ದಾಳಿಯಾಗಿರಲಿಲ್ಲ. ಬದಲಾಗಿ ಮಾನವೀಯತೆ ಮೇಲೆ ನಂಬಿಕೆಯಿಟ್ಟಿರುವ ಪ್ರತಿಯೊಂದು ದೇಶಕ್ಕೂ ಬಹಿರಂಗ ಸವಾಲಾಗಿತ್ತು. ಆದಾಗ್ಯೂ ಕೆಲ ದೇಶಗಳು ಭಯೋತ್ಪಾದನೆಗೆ ಬಹಿರಂಗ ಬೆಂಬಲ ನೀಡಿದವು, ಇದು ಎಷ್ಟು ಸರಿ? ಎಂದು ಬೇಸರ ಹೊರಹಾಕಿದರು.

ಪ್ರತಿಯೊಂದು ದೇಶದ ಅಭಿವೃದ್ಧಿಗೆ ಭದ್ರತೆ, ಶಾಂತಿ ಮತ್ತು ಸ್ಥಿರತೆ ನಿರ್ಣಾಯಕವಾದದ್ದು. ಆದ್ರೆ ಈ ಬೆಳವಣಿಗೆಗೆ ಭಯೋತ್ಪಾದನೆ ಒಂದು ದೊಡ್ಡ ಸವಾಲಾಗಿದೆ. ಅದಕ್ಕಾಗಿಯೇ ಭಾರತ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ತೊಡಗಿದ್ದು, ನಾವೆಲ್ಲರೂ ಒಟ್ಟಾಗಿ ನಿಲ್ಲಬೇಕೆಂದು ಬಯಸುತ್ತದೆ ಎಂದು ಒತ್ತಿ ಹೇಳಿದರು.

# ಮಹಿಳೆ ಸಾವು

ಮೃತ ಮಹಿಳೆಯನ್ನು ಸೊಕನಾದಗಿ ಗ್ರಾಮದ ಲಕ್ಷ್ಮವ್ವ ನಾರಾಯಣ ದಾಸರ (55) ಎಂದು ಗುರುತಿಸಲಾಗಿದೆ. ವಾಹನ ಚಾಲಕ ಲಕ್ಷ್ಮಣ ತನ್ನ ಸಹೋದರನ ಪತ್ನಿ ಪವಿತ್ರಾಳನ್ನು ಆಸ್ಪತ್ರೆಗೆ ತೋರಿಸಲು ತಾಯಿ ಲಕ್ಷ್ಮವ್ವಳೊಂದಿಗೆ ಬಾಗಲಕೋಟೆಗೆ ಬಂದು ಮರಳಿ ಸೊಕನಾದಗಿಗೆ ತೆರಳುವಾಗ ಈ ಘಟನೆ ನಡೆದಿದೆ. ಘಟನೆಯಲ್ಲಿ ಪವಿತ್ರಾ ದಾಸರ ಗಾಯಗೊಂಡಿ- ದ್ದು ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನಾ ಸ್ಥಳಕ್ಕೆ ಸಂಚಾರಿ ಪೊಲೀಸ್ ಠಾಣೆಯ ಸಿಪಿಐ ಆರ್.ಎಸ್.ಬಿರಾದಾರ, ಪಿಎಗಳಾದ ಸೋಮನಗೌಡ ಗೌಡರ ಹಾಗೂ ಎಸ್.ಜಿ. ಓತಗೇರಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಾಗಿದೆ.

# ರಾಷ್ಟ್ರಪತಿ ಮುರ್ಮು

ವಜ್ರಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಮುರ್ಮು, "ಗೌರವಾನ್ವಿತ ಮುಖ್ಯಮಂತ್ರಿಗಳಿಗೆ ನಾನು ಹೇಳಲು ಬಯಸುತ್ತೇನೆ, ಕನ್ನಡ ನನ್ನ ಮಾತೃಭಾಷೆಯಲ್ಲದಿದ್ದರೂ, ನನ್ನ ದೇಶದ ಎಲ್ಲಾ ಭಾಷೆಗಳು, ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ನಾನು ಆಳವಾಗಿ ಗೌರವಿಸುತ್ತೇನೆ. ಪ್ರತಿಯೊಂದರ ಬಗ್ಗೆಯೂ ನನಗೆ ಅಪಾರ ಗೌರವವಿದೆ" ಎಂದು ಹೇಳಿದರು. ಇದಕ್ಕು ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕನ್ನಡದಲ್ಲಿ ಭಾಷಣ ಮಾಡಿ, ವೇದಿಕೆಯಲ್ಲಿ ಕುಳಿತಿದ್ದ ಗಣ್ಯರಿಗೆ ನನ್ನ ಭಾಷೆ ಅರ್ಥವಾಗಿದೆಯೇ ಎಂದು ಕೇಳಿದರು.

ಪ್ರತಿಯೊಬ್ಬರೂ ತಮ್ಮ ಭಾಷೆಯನ್ನು ಜೀವಂತವಾಗಿಡಲು ಮತ್ತು ಅವರ ಸಂಪ್ರದಾಯಗಳು ಹಾಗೂ ಸಂಸ್ಕೃತಿಯನ್ನು ಸಂರಕ್ಷಿಸಲು ಶ್ರಮಿಸಬೇಕೆಂದು ರಾಷ್ಟ್ರಪತಿಗಳು ಕರೆ ನೀಡಿದರು.

"ಪ್ರತಿಯೊಬ್ಬರೂ ತಮ್ಮ ಭಾಷೆಯನ್ನು ಜೀವಂತವಾಗಿಡಲು, ಅವರ ಸಂಪ್ರದಾಯಗಳು ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು ಮತ್ತು ಆ ದಿಕ್ಕಿನಲ್ಲಿ ಮುಂದುವರಿಯಬೇಕೆಂದು ನಾನು ಬಯಸುತ್ತೇನೆ. ಇದಕ್ಕಾಗಿ ನಾನು ಶುಭಾಶಯಗಳನ್ನು ಕೋರುತ್ತೇನೆ ಮತ್ತು ನಾನು ಖಂಡಿತವಾಗಿಯೂ ಕನ್ನಡವನ್ನು ಕ್ರಮೇಣ ಕಲಿಯಲು ಪ್ರಯತ್ನಿಸುತ್ತೇನೆ" ಎಂದು ರಾಷ್ಟ್ರಪತಿಗಳು ನಗುತ್ತಾ ಹೇಳಿದರು.

ಇದಕ್ಕೂ ಮುನ್ನ, ಮೈಸೂರು ವಿಮಾನ ನಿಲ್ದಾಣದಲ್ಲಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆತ್ಮೀಯವಾಗಿ ಸ್ವಾಗತಿಸಿದರು.

# ಸಡಗರದಿಂದ ಜರುಗಿದ
## ಮಹಾಲಕ್ಷ್ಮಿ ಮೂರ್ತಿ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಸೆ.1:ಪಟ್ಟಣದ ಖ್ಯಾತ ಉದ್ಯಮಿ ಚಿದ್ರಿ ಕುಟುಂಬದವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಮಹಾಲಕ್ಷ್ಮಿ ಮೂರ್ತಿ ಪ್ರತಿಷ್ಠಾಪನೆ ಹಾಗೂ ಮುರ್ಗಾ ಮಠದ ಹತ್ತಿರ ಇವರು ಮನೆಯಲ್ಲಿ ಸ್ಥಾಪನೆ ಮಾಡಲಾಯಿತು. ಮಹಾಲಕ್ಷ್ಮಿ ಮೂರ್ತಿ ಪ್ರತಿಷ್ಠಾಪನೆ ಸಡಗರದಿಂದ ಸೋಮವಾರ ಜರುಗಿತ್ತು. ಮಂಗಳವಾರ ಧಾರ ಕಟ್ಟಿಕೊಳ್ಳುವ ಕಾರ್ಯಕ್ರಮ ಪ್ರತಿ ವರ್ಷದಂತೆ ಈ ವರ್ಷವೂ ವೈಭವದಿಂದ ಜರುಗಲಿದೆ ಎಂದು ಸೂರ್ಯಕಾಂತ್ ಚಿದ್ರಿ, ಡಾ.ವಿಜಯಕುಮಾರ್ ಚಿದ್ರಿ,ನಂದಕುಮಾರ್ ಚಿದ್ರಿ ದತ್ತುಕುಮಾರ್ ಚಿದ್ರಿ, ನಾರಾಯಣರಾವ್ ಚಿದ್ರಿ ಅವರೆಲ್ಲರೂ ದಾಸೋಹ ಹಾಗೂ ಧಾರ ಕಟ್ಟಿಕೊಳ್ಳುವ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ ಮಾಡಿದರು.

# ಪಿಡಿಓ ವರ್ಗಾವಣೆ

ಹೆಚ್ಚಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಲೆಕ್ಕ ಸಹಾಯಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡಲಾಗುವುದೆಂದು ಘೋಷಿಸಿದ್ದಂತೆ ಸರ್ಕಾರ ಕಳೆದ ಜೂನ್ 25ರಂದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಇಲಾಖೆಯು ಇದೇ ಮೊದಲ ಬಾರಿಗೆ ಪಿಡಿಓ ವರ್ಗಾವಣೆ ಪ್ರಕ್ರಿಯೆಯನ್ನು ಆನ್ ಲೈನ್ ಕೌನ್ಸಿಲಿಂಗ್ ಮೂಲಕ ನಡೆಸುತ್ತಿದ್ದು ಆಡಳಿತದಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಜೊತೆಗೆ ದಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ ಸಹಕಾರಿಯಾಗುತ್ತದೆ. ಗ್ರಾಮ ಪಂಚಾಯತಿಗಳ ಕಾರ್ಯದರ್ಶಿ ಗ್ರೇಡ್ – 1 ಮತ್ತು ಗ್ರೇಡ್ –2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಗಳಿಗೆ ಸಂಬಂಧಿಸಿದಂತೆ 31 ಜಿಲ್ಲೆಗಳಲ್ಲಿ ಅರ್ಹತೆ ಹೊಂದಿದ 1,300 ನೌಕರರಿಗೆ ಆನ್‌ಲೈನ್ ಮೂಲಕ ಕೌನ್ಸಲಿಂಗ್ ನಡೆಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಡಿಜಿಟಲ್ ಸಹಿ ಮಾಡಿದ ವರ್ಗಾವಣೆ ಆದೇಶಗಳನ್ನು ಹೊರಡಿಸಿ ಸ್ಥಳದಲ್ಲೇ ನೌಕರರಿಗೆ ನೀಡಿದ್ದು, ಇಲಾಖೆ ಪ್ರಥಮ ಬಾರಿಗೆ ಪಾರದರ್ಶಕ ರೀತಿಯಲ್ಲಿ ಪ್ರಕ್ರಿಯೆಗಳನ್ನು ನಡೆಸಿದೆ ಎಂದು ಸಚಿವರು ತಿಳಿಸಿದ್ದಾರೆ.

# ಸೆ. 10 ರಂದು ಭಾಲ್ಕಿ "ತಹಸಿಲ ಚಲೋ" : ಡಿ ಕೆ ಸಿದ್ರಾಮ



ಮಲ್ಲಮ್ಮ ನುಡಿ ವಾರ್ತೆಭಾಲ್ಕಿ: ಸೆ.1:ಬೀದರ ಜಿಲ್ಲೆಯಲ್ಲಿ ಅಗಸ್ಟ ತಿಂಗಳಲ್ಲಿ ಸುರಿದ ಭಾರಿ ಮಳೆಯಿಂದಾಗಿ ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಲು ಆಗ್ರಹಿಸಿ. ಸೆಪ್ಟೆಂಬರ್10 ರಂದು ಭಾಲ್ಕಿ ತಹಸಿಲ ಕಚೇರಿ ಚಲೊ ನಡೆಸಲು ತೀರ್ಮಾನಿಸಲಾಗಿದೆ ಎಂದು ಶ್ರೀ ಡಿ ಕೆ ಸಿದ್ರಾಮ ತಿಳಿಸಿದರು.

ಅವರು ಇಂದು ಭಾಲ್ಕಿ ತಾಲೂಕಿನ ಆನಂದವಾಡಿ ನಿಡೆಬನ ,ಇಂಚೂರು,ಸಾಯಗಾಂವ,ಕೋಂಗಳಿ ಬ್ರಿಜಗಳ ಸುತ್ತ ಮುತ್ತಿನ ಇರುವ ಭಾಗದಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಬೇಳೆಯನ್ನು ವಿಕ್ಷಿಸಿದ ಮಾತನಾಡಿದ ಶ್ರೀ ಡಿ ಕೆ ಸಿದ್ರಾಮ ಅವರು ಆಗಸ್ಟ್ ತಿಂಗಳಲ್ಲಿ ಬೀದರ್ ಜಿಲ್ಲೆಯಾದ್ಯಂತ ಸುರಿದ ಅತಿವೃಷ್ಟಿಯಿಂದಾಗಿ ಹೆಸರು, ಉದ್ದು, ತೊಗರಿ, ಸೋಯಾಬೀನ್ ,ಕಬ್ಬು ಸೇರಿದಂತೆ ಅಂದಾಜು 15 ಸಾವಿರಕ್ಕು ಹೆಚ್ಚು ಎಕರೆಯ ಬೆಳೆ ಹಾನಿಯಾಗಿದ್ದು, ನೂರಾರು ಮನೆಗಳು, ರಸ್ತೆ–ಸೇತುವೆಗಳು ಹಾಗೂ ಮೂಲಸೌಕರ್ಯಗಳಿಗೆ ಭಾರೀ ಹಾನಿಯಾಗಿದೆ. ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ ದವಸ ಧಾನ್ಯ ಹಾಳಾಗಿದೆ, ವಿದ್ಯುತ್ ಸಂಪರ್ಕ ವ್ಯತ್ಯಯವಾಗಿದೆ.

ರೈತರಿಗೆ ಬಹಳಷ್ಟು ನಷ್ಟ ಸಂಭವಿಸಿದೆ.ಈ ಕಷ್ಟದ ಸಮಯದಲ್ಲಿ ಜಿಲ್ಲೆಯ ರೈತರು, ಕೂಲಿಕಾರ್ಮಿಕರು ಹಾಗೂ ಬಡಜನರಿಗೆ ಸರ್ಕಾರದಿಂದ ತಕ್ಷಣವೆ 30000 ಪರಿಹಾರ ಧನವನ್ನು ನೀಡಬೇಕು ಎಂದರು.ಕಾರಂಜಾ ಡ್ಯಾನಿಂದ ನೀರು ಬಿಟ್ಟಿದ ಪರಿಣಾಮವಾಗಿ ಆನಂದವಾಡಿ ನೀಡಬನ ಬ್ರಿಜ,ಹಾಗೂ ದಾಡಗಿ ಬ್ರಿಜ,ಇಂಚೂರು ಬ್ರಿಜಗಳ ಮೇಲಿಂದ ನೀರು ಹರಿದು ಮೂರು ಬ್ರಿಜಗಳು ಸಂಪೂರ್ಣವಾಗಿ ನೀರಿನಲ್ಲಿ ಮುಳುಗಡೆಯಾಗಿದರಿಂದ ರೈತರಿಗೆ, ಪ್ರಯಾಣಿಕರಿಗೆ ಸಾಕಷ್ಟು ತೊಂದರೆ ಆಗುತ್ತಿದ್ದು.ಮುಂದಿನ ಒಂದು ವರ್ಷದ ಒಳಗಾಗಿ ಮುಂದಿನ ಮಳೆಗಾಲ ಆರಂಭ ಆಗುವುದರ ಒಳಗಾಗಿ ಸರ್ಕಾರ ಕೂಡಲೆ ಈ ಮೂರು ಬ್ರೀಜಗಳ ಎತ್ತರ ಹೆಚ್ಚಳ ಮಾಡಬೇಕು ಸರ್ಕಾರಕ್ಕೆ ಡಿ ಕೆ ಸಿದ್ರಾಮ ಆಗ್ರಹಿಸಿದರು. ಕೊಂಗಳಿ ಬ್ರಿಜ ನಿರ್ಮಾಣ ಕಾಮಗಾರಿಯಲ್ಲಿ ತಾಂತ್ರಿಕ ಸಮಸ್ಯೆ ಉಂಟಾಗಿದ್ದು ಆ ಸಂದರ್ಭದಲ್ಲಿ ಹೇಳಿದಾಗಲು ಅಧಿಕಾರಿಗಳು ಗಮನ ಕೂಡದೆ ಇರುವ ಕಾರಣಕ್ಕಾಗಿ ಕೋಂಗಳಿ ಬ್ರಿಜ ಹೆಚ್ಚಳ ಮಾಡಿದ ನಂತರವೂ ಅಕ್ಕಪಕ್ಕದ ಹೋಲಗಳಿಗೆ ನೀರು ನುಗ್ಗಿ ತುಂಬಾ ಹಾನಿಯಾಗುತ್ತಿದ್ದು ಅದಕ್ಕೂ ಕೂಡ ತಡೆಗೋಡೆ ನಿರ್ಮಾಣ ಮಾಡುವುದರ ಮೂಲಕ ತಾಂತ್ರಿಕ ಸಮಸ್ಯೆ ಬಗೆಹರಿಸಬೇಕು ಎಂದು ಡಿ ಕೆ ಸಿದ್ರಾಮ ಅವರು ತಿಳಿಸಿದರು.

ಅಷ್ಟೇ ಅಲ್ಲದೆ ರೈತರು ತಮ್ಮ ಬೇಳೆ ಹಾನಿಗಾಗಿ ವಿಮೆಯನ್ನು ಕಟ್ಟಿದ್ದಾರೆ. ಆದರೆ ದಲ್ಲಾಳಿಗಳು ರೈತರಿಗೆ ತೊಂದರೆ ಕೊಡುತ್ತಿದ್ದು. ಟೋಲ ಫ್ರೀ ನಂಬರಗಳಿಗೆ ಎಷ್ಟೇ ಕರೆ ಮಾಡಿದರು ಅವರು ಸ್ವೀಕರಿಸುತ್ತಿಲ್ಲಾ ಈ ಹಂತದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಕೂಡಲೆ ಈ ಕಡೆ ಗಮನ ಹರಿಸಿ ರೈತರಿಗೆ ವಿಮೆ ಹಣ ದೊರಕುವಂತೆ ಮಾಡಬೇಕು ಕೊರಿದರು .

# ಚನ್ನಬಸವ ಕೊಟಗಿ ಯವರಿಗೆ ಗೌರವ ಡಾಕ್ಟರೇಟ್



ಗಂಗಾವತಿ:ಸೆ.01 ಪತ್ರಿಕಾ ಬಳಗದಲ್ಲಿ ಸುಮಾರು 15 ವರ್ಷಗಳ ಸಾರ್ಥಕ ಸೇವೆ, ಚಲನಚಿತ್ರರಂಗ, ನಾಟಕ, ಕಲೆ, ಸಾಹಿತ್ಯ,ರಂಗಭೂಮಿ ಹಾಗೂ ಪ್ರವಾಸೋದ್ಯಮದಲ್ಲಿ ಸಲ್ಲಿಸಿದ ಕಾರ್ಯಕ್ಕಾಗಿ ಒಚಿರುಥಿ ಚಿಡಿಣ ಣಾಟಿತಜಝಿಣಥಿ, ಫರೀದಾಬಾದ್ ಹರ್ಯಾಣ,ನವದೆಹಲಿ ವತಿಯಿಂದ ದಿನಾಂಕ 13–9–2025 ರಂದು ನವದೆಹಲಿಯಲ್ಲಿ ಗೌರವ ಡಾಕ್ಟರೇಟ್ ಪ್ರಧಾನ ಮಾಡಲಾಗುವುದು.ಈ *ಭಾಗದ ಉದಯೋನ್ಮುಖ ಪ್ರತಿಭೆ ಶ್ರೀ ಚನ್ನಬಸವ ಕೊಟಗಿಯವರ ಗೌರವ ಡಾಕ್ಟರೇಟ್ ಸಮಾರಂಭಕ್ಕೆ ಗಣ್ಯರು ಸ್ನೇಹಿತರು,ಆತ್ಮೀಯರು ಶುಭ ಹಾರೈಸಿದ್ದಾರೆ ಶ್ರೀ ಚನ್ನಬಸವ ಕೊಟಗಿಯವರು ಕನ್ನಡ ಸಾಹಿತ್ಯ ಪರಿಷತ್ತು ಶರಣ ಸಾಹಿತ್ಯ ಪರಿಷತ್ತು ಮುಂತಾದ ಸಂಘ ಸಂಸ್ಥೆಗಳ ಸದಸ್ಯರಾಗಿ ಹಾಗೂ ವಿವಿಧ ಸಂಘ–ಸಂಸ್ಥೆಗಳಿಂದ ಪ್ರತಿಭಾ ಪುರಸ್ಕಾರಗಳನ್ನು ಪಡೆದಿರುತ್ತಾರೆ. ವಿವಿಧ ಸಮಾಜದ ಹಿರಿಯರೊಂದಿಗೆ ಸಹೃದಯತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. Art and music university ಯ ನಿರ್ದೇಶಕರು, ಡೀನ್, ರಿಜಿಸ್ಟರ್ ಹಾಗೂ ಸಂಸ್ಥೆಯ ಸಂಪರ್ಕ ಅಧಿಕಾರಿ ಶ್ರೀಮತಿ ಆಶಾ ರವರಿಗೆ ವೈಯಕ್ತಿಕವಾಗಿ ಸಮಸ್ತ ಕರ್ನಾಟಕ ಜನತೆ ಪರವಾಗಿ ಡಾಕ್ಟರೇಟ್ ಪ್ರಶಸ್ತಿ ಪುರಸ್ಕೃತ ರಾಗಲಿರುವ ಚನ್ನಬಸವ ಕೊಟಗಿ ಅವರು ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸಿದ್ದಾರೆ

# ಮಹಾದೇವ ದೇವರ ಭವ್ಯಪಲ್ಲಕ್ಕಿ ಉತ್ಸವ



ಕಲಬುರಗಿ–01 ನಗರದಲ್ಲಿನ ಲೋಹಾರ್‌ಗಲ್ಲಿಯ ಆರಾಧ್ಯದೈವರಾದ ಮಹಾದೇವರ ಪಲ್ಲಕ್ಕಿ ಉತ್ಸವವು ನಗರದಲ್ಲಿನ ಹುಮನಾಬಾದ್ ಬೇಸ್ ಮಾರ್ಗವಾಗಿ ಚೌಕ್ ಪೋಲೀಸ್ ಠಾಣೆ , ಫೋರ್ಟ್ ರೋಡ್ ಮುಖಾಂತರ ವಾಪಸ್ಸು ಮಹಾದೇವ ಮಂದಿರಕ್ಕೆ ಬಂದು ತಲುಪುವುದೆಂದು ಅಲ್ಲಿನ ಪ್ರಮುಖರು ತಿಳಿಸಿದ್ದಾರೆ.. ಇನ್ನೂ ಮಲ್ಲಿಕಾರ್ಜುನ ಪಲ್ಲಕ್ಕಿ ಉತ್ಸವದಲ್ಲಿ ಪುರವಂತರ ಸೇವೆ, ಡೋಳ್ಳು ಕುಣಿತ , ಹಲಗಿ ವಾದ್ಯ, ಸೇರಿದಂತೆ ವಿವಿಧ ವಾದ್ಯಗಳಿಂದ ಮೆರವಣಿಗೆ ಜರುಗಿ- ತು.. ಈ ಸಂದರ್ಭದಲ್ಲಿ ಸಚಿನ್ ಪಾಟೀಲ್ ಅಧ್ಯಕ್ಷರು, ಚಂದ್ರಕಾಂತ್ ಅಂದೋಲಾ ವೈಸ್ ಪ್ರೆಸಿಡೆಂಟ್, ಭೀಮಶಂಕರ್ ಮಿಟೆಕಾರ್, ಶಾಂತಪ್ಪಾ ಪಾಟೀಲ್ ಸೆಕ್ರೆಟರಿ, ವೀರಣ್ಣಾ ಕಲ್ಲೂರ್, ನಾಗರಾಜ ಸ್ವಾಮಿ, ಸೇರಿದಂತೆ ಅಲ್ಲಿನ ಮಹಿಳೆಯರು, ಮಕ್ಕಳು ಇನ್ನಿತರರು ಭಾಗಿಯಾಗಿದ್ದರು..

# ಔರಾದ(ಬಿ) ಕ್ಷೇತ್ರಕ್ಕೆ 100 ಕೋಟಿ ಪ್ಯಾಕೇಜ್ ಘೋಷಿಸಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.1:ತಾಲೂಕಿನಲ್ಲಿ ಅತಿವೃಷ್ಟಿಯಿಂದ ಭಾರೀ ಹಾನಿಯಾಗಿರುವ ಔರಾದ(ಬಿ) ಮತ್ತು ಕಮಲನಗರ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಿಗೆ ರವಿವಾರ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸ್ವತಃ ಭೇಟಿ ನೀಡಿ ಮಳೆ ಹಾನಿ ಪರಿಶೀಲಿಸಿದರು.ಹೊರಂಡಿ, ಕಾಳಗಾಪೂರ, ಸೋನಾಳ, ಖೇಡ್, ಸಂಗಮ್, ಸಾವಳಿ, ಹೊಳಸಮುದ್ರ, ತೋರ್ಣಾ,ಬಳತ್,ಹಾಲಳ್ಳಿ,ನಿಡೋದಾ, ಹೆಡಗಾಪೂರ,ರಕ್ಷ್ಯಾಳ,ಯನಗುಂದಾ, ತೇಗಂಪೂರ, ಎಕಂಬಾ ಸೇರಿದಂತೆ ಹಲವು ಗ್ರಾಮಗಳಲ್ಲಿ ಸಂಚರಿಸಿ ಬೆಳೆ ಹಾನಿಯನ್ನು ವೀಕ್ಷಿಸಿದರು.ಈ ಸಂದರ್ಭದಲ್ಲಿ ಗ್ರಾಮದ ರೈತರು ಬೆಳೆ ಹಾನಿಯ ಬಗ್ಗೆ ಮಾಹಿತಿ ನೀಡಿದರು. ಈ ಬಾರಿ ಹಿಂದೆದೂ ಕಂಡು ಕೇಳರಿಯದ ರೀತಿಯಲ್ಲಿ ಮಳೆಯಾಗಿದ್ದು, ಬಹಳಷ್ಟು ಕಷ್ಟದಿಂದ ಬೆಳೆಸಿದ ಸೋಯಾ, ಉದ್ದು, ಹೆಸರು, ಹತ್ತಿ, ತೊಗರಿ ಸೇರಿದಂತೆ ಎಲ್ಲ ಬೆಳೆಗಳು ನೀರು ಪಾಲಾಗಿವೆ. ಈ ಸಲ ಹೆಚ್ಚಿನ ಲಾಭ ಸಿಗಬಹುದೆಂದು ನಿರೀಕ್ಷಿಸಿದ್ದ ನಮಗೆ ಬಹಳ ಅನ್ಯಾಯವಾಗಿದೆ. ಜೀವನಕ್ಕೆ ಕೃಷಿಯನ್ನೇ ನಂಬಿದ ನಮಗೆ ಮುಂದೇನು ಮಾಡಬೇಕೆಂಬುದು ದಿಕ್ಕು ತೋಚುತ್ತಿಲ್ಲವೆಂದು ಅಳಲನ್ನು ತೋಡಿಕೊಂಡರು. ನಾನು ರೈತರ ಪರವಾಗಿದ್ದೇನೆ. ಕ್ಷೇತ್ರದಲ್ಲಿ ತೀವ್ರ ಮಳೆಯಾಗುತ್ತಿರುವುದನ್ನು ಕಂಡು ತಕ್ಷಣ ಮುಖ್ಯಮಂತ್ರಿ, ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳನ್ನು ಖುದ್ದಾಗಿ ಭೇಟಿಮಾಡಿ ಬೆಳೆ ಹಾನಿಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೇನೆ, ವಿಧಾನಸಭಾ ಅಧಿವೇಶನದಲ್ಲಿಯೂ ಈ ಬಗ್ಗೆ ಗಮನ ಸೆಳೆದಿದ್ದೇನೆ. ರೈತರಿಗೆ ಪರಿಹಾರ ವಿತರಿಸಲು ನನ್ನಿಂದ ಸಾಧ್ಯವಾದಷ್ಟು ಪ್ರಯತ್ನ ಮಾಡುತ್ತಿದ್ದೇನೆ. ರೈತರಿಗೆ ಯಾವುದೇ ರೀತಿಯ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಹೇಳಿದರು.

ಗ್ರಾಮ ಮಟ್ಟದಲ್ಲಿ ಕೆಲಸ ಮಾಡುವ ಅಧಿಕಾರಿಗಳು ಮತ್ತು ಸಿಬ್ಬಂದಿ ಜನರೊಂದಿಗೆ ಸೌಜನ್ಯತೆಯಿಂದ ವ್ಯವಹರಿಸಬೇಕು. ಮಳೆಯಿಂದ ಜನ ಈಗಾಗಲೇ ಕಂಗಾಲಾಗಿದ್ದಾರೆ. ಅವರಿಗೆ ಯಾವುದೇ ರೀತಿಯ ತೊಂದರೆಯಾಗದ ರೀತಿಯಲ್ಲಿ ನಡೆದುಕೊಳ್ಳಬೇಕು. ನೊಂದವರಿಗೆ ಸರ್ಕಾರದಿಂದ ಪರಿಹಾರ ಕಲ್ಪಿಸಲು ಪ್ರಯತ್ನಿಸಬೇಕು. ಬೆಳೆ, ಮನೆ ಮತ್ತು ಜೀವ ಹಾನಿಯ ಕುರಿತು ತಕ್ಷಣ ಸರ್ಕಾರಕ್ಕೆ ವರದಿ ಸಲ್ಲಿಸಿ ಅಗತ್ಯ ಪರಿಹಾರ ಕಲ್ಪಿಸಲು ಯತ್ನಿಸಬೇಕು. ಕಂದಾಯ, ಕೃಷಿ, ತೋಟಗಾರಿಕೆ ಹಾಗೂ ಎಲ್ಲ ಸಮೀಕ್ಷಾ ಅಧಿಕಾರಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸಬೇಕು. ಮಳೆ ಹಾನಿಯಿಂದ ತೊಂದರೆ ಅನುಭವಿಸಿದ ಎಲ್ಲರನ್ನು ಸಮೀಕ್ಷೆಗೆ ಒಳಪಡಿಸಬೇಕು ಎಂದು ನಿರ್ದೇಶನ ನೀಡಿದರು.

ಮಳೆಯಿಂದ ಹಾನಿಗೊಳಗಾದ ಎಲ್ಲ ಗ್ರಾಮಗಳಿಗೆ ಭೇಟಿ ನೀಡುತ್ತಿದ್ದೇನೆ. ನಾನು ಭೇಟಿ ನೀಡಿದ ಪ್ರತಿ ಗಾಮದಲ್ಲಿ ಸುಮಾರು 500 ರಿಂದ 1000 ಎಕರೆಯಷ್ಟು ಬೆಳೆ ಹಾನಿಯಾಗಿದೆ. ಔರಾದ(ಬಿ) ಹಾಗೂ ಕಮನಗರ ತಾಲ್ಲೂಕುಗಳಲ್ಲಿ 50 ಸಾವಿರ ಎಕರೆಯಷ್ಟು ಬೆಳೆ ಹಾನಿಯಾಗಿರುವ ಅಂದಾಜಿದೆ. ರಸ್ತೆ, ಸೇತುವೆ, ಕೆರೆ–ಕಟ್ಟೆಗಳು, ಬ್ರಿಜ್ ಕಂ ಬ್ಯಾರೇಜ್‌ಗಳು, ಶಾಲೆ, ಅಂಗನವಾಡಿ ಕೇಂದ್ರಗಳು ಹಾಗೂ ವಿವಿಧ ಸರ್ಕಾರಿ ಕಚೇರಿಗಳು ಹಾನಿಗೆ ಒಳಗಾಗಿವೆ.

ಔರಾದ(ಬಿ) ಕ್ಷೇತ್ರವನ್ನು ಅತೀವೃಷ್ಟಿ ಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಸರ್ಕಾರ ರೈತರಿಗೆ ಪರಿಹಾರ ಘೋಷಣೆ ಮಾಡಬೇಕು. ಬೆಳೆ ವಿಮೆ ಸೌಲಭ್ಯ ಎಲ್ಲರಿಗೂ ತಲುಪಿಸಬೇಕು. ಮಳೆಯಿಂದ ಹಾನಿಯಾದ ರಸ್ತೆ, ಸೇತುವೆ, ಬ್ರಿಜ್ ಕಂ ಬ್ಯಾರೇಜ್, ಶಾಲೆ, ಅಂಗನವಾಡಿ, ಸರ್ಕಾರಿ ಕಛೇರಿಗಳ ದುರಸ್ತಿ ಮತ್ತು ಸುಧಾರಣೆಗೆ ಔರಾದ(ಬಿ) ಕ್ಷೇತ್ರಕ್ಕೆ 100 ಕೋಟಿಗೂ ಹೆಚ್ಚಿನ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕಮಲನಗರ ತಹಸೀಲ್ದಾರರಾದ ಅಮಿತಕುಮಾರ ಕುಲಕರ್ಣಿ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತ ಕೌಟಗೆ, ಲೋಕೋಪಯೋಗಿ ಇಲಾಖೆ ಎಇಇ ಪ್ರೇಮಸಾಗರ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಧೂಳಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ ರಂಗೇಶ, ಮುಖಂಡರಾದ ಶಿವಾಜಿರಾವ ಪಾಟೀಲ ಮುಂಗನಾಳ, ರೈತ ಮೋರ್ಚಾ ಅಧ್ಯಕ್ಷ ಶಿವರಾಜ ಅಲ್ಮಾಜೆ, ಶಿವಕುಮಾರ ಝುಲ್ಪೆ, ನಾಗೇಶ ಪತ್ರೆ, ಬಂಟಿ ರಾಂಪೂರೆ, ಪ್ರವೀಣ ಕಾರಬಾರಿ, ಭರತ ಕದಂ, ಸುರೇಶ ಭೋಸ್ಲೆ ಸೇರಿದಂತೆ ಇತರರಿದ್ದರು.

# ರಾಜ್ಯದಾದ್ಯಂತ ಬಸವ ಸಂಸ್ಕೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.1:ವಿಶ್ವಗುರು ಬಸವಣ್ಣನವರನ್ನು ಕರ್ನಾಟಕ ಸರಕಾರ ಸಾಂಸ್ಕೃತಿಕ ನಾಯಕರೆಂದು ಘೋಷಣೆ ಮಾಡಿ ಒಂದು ವರ್ಷ ಪೂರೈಸಿದೆ. ಅದಕ್ಕಾಗಿ ಬಸವಾದಿ ಶರಣರ ಚಿಂತನೆಗಳನ್ನು ಜನಮನದಲ್ಲಿ ಬಿತ್ತುವ ಸದುದ್ದೇಶದಿಂದ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ವತಿಯಿಂದ ಕರ್ನಾಟಕ ರಾಜ್ಯದ್ಯಂತ ಸೆ.1ರಿಂದ ಅ 5ರ ವರೆಗೆ ಬಸವ ಸಂಸ್ಕೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದ್ದಾರೆ.

ಸೆ.1ರಂದು ಬಸವ ಜನ್ಮಭೂಮಿಯಾದ ಬಸವನ ಬಾಗೇವಾಡಿಯಲ್ಲಿ ಬಸವ ಸಂಸ್ಕೃತಿ ಅಭಿಯಾನಕ್ಕೆ ಚಾಲನೆ ಸಿಗಲಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಂಚರಿಸಿ ಅ 5ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಸಮಾರೋಪಗೊಳ್ಳಲಿದೆ. ಒಂದು ತಿಂಗಳ ನಡೆಯುವ ಈ ಅಭಿಯಾನದಲ್ಲಿ ಪೂಜ್ಯಶ್ರೀ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಪೂಜ್ಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಪೂಜ್ಯ ಶ್ರೀ ಜಗದ್ಗುರು ಮಾತೆ ಗಂಗಾದೇವಿ ಪೂಜ್ಯರ ನೇತೃತ್ವದಲ್ಲಿ ನಡೆಯಲಿದ್ದು ನಾಡಿನ ಎಲ್ಲ ಬಸವ ತತ್ವಪರ ಪೂಜ್ಯರು, ಸಂಘಟನೆಗಳು, ಸಂಘ–ಸಂಸ್ಥೆಗಳ ಮುಖ್ಯಸ್ಥರು ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾರೆ.

ಪ್ರತಿ ಜಿಲ್ಲೆಯಲ್ಲಿ ಬೆಳಗ್ಗೆ 10 ಗಂಟೆಗೆ ವಿದ್ಯಾರ್ಥಿಗಳ ಜತೆಗೆ ವಚನ ಸಂವಾದ, ಮಧ್ಯಾಹ್ನ 4 ಗಂಟೆಗೆ ನಗರದ ಪ್ರಮುಖ ರಸ್ತೆಯಲ್ಲಿ ಬಸವ ನಡಿಗೆ ಸಾಯಂಕಾಲ 6 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯುತ್ತದೆ. ವೇದಿಕೆ ಕಾರ್ಯಕ್ರಮಗಳಲ್ಲಿ ನಾಡಿನ ಖ್ಯಾತ ಸಾಹಿತ್ಯ ಸಂಶೋಧಕರಿಂದ ಉಪನ್ಯಾಸ, ಅನುಭಾವಿಗಳಿಂದ ಪ್ರವಚನ ಹಾಗೂ ಪೂಜ್ಯರಿಂದ ಆಶೀರ್ವಚನ ನಡೆಯಲಿದ್ದು ಸಾಣೇಹಳ್ಳಿಯ ಶಿವ ಸಂಚಾರ ಕಲಾ ತಂಡದಿಂದ ವಚನ ಸಂಗೀತ ಹಾಗೂ ಜಂಗಮದಡಿಗೆ ನಾಟಕ ಪ್ರದರ್ಶನ ಗೊಳ್ಳಲಿದೆ.

ಈ ಅಭಿಯಾನದ ಯಶಸ್ವಿಗಾಗಿ ಈಗಾಗಲೇ ಎಲ್ಲ ಜಿಲ್ಲೆಗಳಲ್ಲಿ ಸ್ವಾಗತ ಸಮಿತಿಯನ್ನು ರಚನೆಗೊಂಡು ಪರಮ ಪೂಜ್ಯರ ಮಾರ್ಗದರ್ಶನದಲ್ಲಿ ಎಲ್ಲ ಸಿದ್ಧತೆಗಳನ್ನು ಭರದಿಂದ ಸಾಗುತ್ತಿವೆ. ಆ ದಿಶೆಯಲ್ಲಿ ಬಸವ ಸಂಸ್ಕೃತಿ ಅಧ್ಯಯನ ಇಡೀ ರಾಜ್ಯದಲ್ಲಿಯೇ ಬಸವಾದಿ ಶರಣರ ಮೌಲ್ಯ ಸಾರುವ ವಿನೂತನ ಅಭಿಯಾನ ಆಗಿದೆ. ಅದಕ್ಕಾಗಿ ತಮ್ಮ ತಮ್ಮ ಜಿಲ್ಲೆಗಳಲ್ಲಿ ಈ ಅಭಿಯಾನ ಬಂದಾಗ ಎಲ್ಲ ಸಮಾಜ ಬಾಂಧವರು ಪಾಲ್ಗೊಳ್ಳುವ ಮೂಲಕ ಇದನ್ನು ಯಶಸ್ವಿಗೊಳಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಲ್ಲ ಜಿಲ್ಲೆಗಳಲ್ಲಿ ಅಭಿಯಾನ

ಸೆ.1ರಿಂದ ಬಸವನಬಾಗೇವಾಡಿಯಲ್ಲಿ ಬಸವ ಸಂಸ್ಕೃತಿ ಅಭಿಯಾನ ಚಾಲನೆ ಸಿಗಲಿದೆ. 2ರಂದು ಕಲಬುರಗಿ, 3ರಂದು ಬೀದರ್, 4ರಂದು

ಯಾದಗಿರಿ, 5ರಂದು ರಾಯಚೂರು, 6ರಂದು ಬಳ್ಳಾರಿ, 7ರಂದು ವಿಜಯನಗರ, 8ರಂದು ಕೊಪ್ಪಳ, 9ರಂದು ಗದಗ, 10ರಂದು ಬಾಗಲಕೋಟ, 11ರಂದು ಬೆಳಗಾವಿ, 12ರಂದು

ಧಾರವಾಡ, 13ರಂದು ಕಾರವಾರ, 14ರಂದು ಹಾವೇರಿ, 15ರಂದು ದಾವಣಗೆರೆ, 16ರಂದು ಚಿತ್ರದುರ್ಗ, 17ರಂದು ಶಿವಮೊಗ್ಗ, 18ರಂದು ಉಡುಪಿ, 19ರಂದು ಮಂಗಳೂರು, 20ರಂದು ಚಿಕ್ಕಮಗಳೂರು, 21ರಂದು ಹಾಸನ, 22ರಂದು

ಕೊಡಗು, 23ರಂದು ಮೈಸೂರು, 24ರಂದು ಚಾಮರಾಜನಗರ, 25ರಂದು ಮಂಡ್ಯ, 26ರಂದು ರಾಮನಗರ, 27ರಂದು ತುಮಕೂರು, 28ರಂದು ಚಿಕ್ಕಬಳ್ಳಾಪೂರ, 29ರಂದು ಕೋಲಾರ, 30ರಂದು ಬೆಂಗಳೂರು ಗ್ರಾಮಾಂತರ ಮತ್ತು ಅ.5ರಂದು ಬೆಂಗಳೂರು ನಗರದಲ್ಲಿ ಸಮಾರೋಪಗೊಳ್ಳಲಿದೆ.

# ನಿಸ್ವಾರ್ಥ ಸಹಕಾರವೇ ಸೌಹಾರ್ದ ಸಂಘದ ಅಭಿವೃದ್ಧಿ: ರಂಗನಾಥ ನುಲಿಕಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಸೆ.1: ಒಬ್ಬರು ಎಲ್ಲರಿಗಾಗಿ ಎಲ್ಲರೂ ಒಬ್ಬರಿಗಾಗಿ ಎಂಬ ತತ್ವ ಸಿದ್ಧಾಂತ ಸೌಹಾರ್ದ ಸಂಘದಲ್ಲಿ ನೆಲೆಯುರಬೇಕು. ಇವನಾರವ ಇವನಾರವ ಎಂದು ಭೇಧ ಮಾಡದೇ ಇವ ನಮ್ಮವನೆಂದು ಸಾಲಕೊಟ್ಟರೆ ಸಂಘದ ಅಭಿವೃದ್ಧಿ ಸಾಧ್ಯ. ನುಡಿದಂತೆ ನಡೆದು ವಚನ ಬದ್ಧತೆಯಿಂದ ಪಡೆದ ಸಾಲ ಮರುಪಾವತಿಸಿದರೆ ಸಂಘದ ಸಮೃದ್ಧಿ ಸಾಧ್ಯ ಎಂದು ಡಿಸಿಸಿ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ಆದ ರಂಗನಾಥ ನುಲಿಕಾರ ನುಡಿದರು. ವಚನ ಸೌಹಾರ್ದ ಸಹಕಾರ ಸಂಘದ ವಾರ್ಷಿಕ ಮಹಾಸಭೆಯನ್ನು ಸಸಿಗೆ ನೀರೆರೆದು ಉದ್ಘಾಟಿಸಿದ ರಂಗನಾಥ ನುಲಿಕಾರ ಮಾತನಾಡುತ್ತ ಸಂಘ ಕಟ್ಟುವದಕಿಂತ ಬೆಳೆಸುವದು ಅತಿ ಮುಖ್ಯ ಹಾಗೂ ಅಷ್ಟೇ ಕಷ್ಟದಾಯಕ. ಸಹಕಾರಿಗಳು ನುಡಿಯನ್ನು ತಪ್ಪನಡೆದರೆ ಪರಮಾತ್ಮನು ಮೆಚ್ಚುವದಿಲ್ಲ ಎಂಬ ಶರಣರ ವಾಣಿಯಂತೆ ಎಲ್ಲರು ದುಡಿಯಬೇಕು. ಇಲ್ಲಿ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳ ಬಾಂಧವ್ಯ ಒಳ್ಳೆಯದಾಗಿರುವದರಿಂದಲ್ಲೇ ನೂರಕ್ಕೆ ನೂರರಷ್ಟು ಸಾಲ ಮರುಪಾವತಿಯಾಗಿದೆ. ಬಂಡಿಗೆ ಕೊನ್‌ಮಳ್ಳಿ(ಶಾಯಿ ಕೀಲಿ) ಇದಂತೆ ಸೂಕ್ಷ್ಮವಾಗಿ ಆಗುಹೋಗುಗಳ ಬಗ್ಗೆ ಅವಲೋಕನೆ ಮಾಡುವ ಕೆಲಸ ಆಡಳಿತ ಮಂಡಳಿ ಮಾಡಲು ಸೂಕ್ತ ಸಲಹೆ ನೀಡಿದರು. ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಸೋಮಶೇಖರ ಬಿರಾದಾರ ಚಿದ್ರಿ ಬಸವಣ್ಣನವರ ಭಾವ ಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಆಡಳಿತ ಮಂಡಳಿಯವರ ಒಕ್ಕೂರಿಲಿನ ನಿರ್ಣಯ ಹಾಗೂ ಸಾಮಾನ್ಯ ಸದಸ್ಯರ ಸಲಹೆ ಒಂದಾಗಬೇಕು. ಸೌಹಾರ್ದ ಸಹಕಾರ ಸಂಘದಲ್ಲಿ ಸಮನ್ವಯೇ ಸಾಮರಸ್ಯ ಸದ್ವಿನಯ ಸದಾಚಾರ ಅತಿ ಮುಖ್ಯ. ಸಾಲ ಕೊಡುವಾಗ ಯಾರ ಮುಲಾಜಿಗೂ ಒಳಗಾಗದೆ ನಿಯಮ ಅಡಿಯಲ್ಲಿ ಆರ್ಥಿಕ ವ್ಯವಹಾರ ಮಾಡಬೇಕು. ಸಹಕಾರ ನಿಯಮ ಪಾಲಿಸಿದರೆ ಸ್ವಲ್ಪ ಕಷ್ಟ ಆದರೆ ಅತಿ ಸಡಲಿಕೆಯಿಂದ ಏರುಪೇರಾಗಿ ಸಂಘಕ್ಕೆ ಕೆಟ್ಟ ಹೆಸರು ಬರುತ್ತದೆ. ಹೀಗಾಗಿ ಇಲ್ಲಿ ಬದ್ಧತೆಯ ಆಡಳಿತ ಮಂಡಳಿ ಇರುವದರಿಂದ ಸಾಮರಸ್ಯವಾಗಿ ಸಂಘ ನಡೆಯುತ್ತಿರುವದು ಮನಗಂಡಿದ್ದೇನೆಂದು ನುಡಿದರು.

ಬಸವ ಕೇಂದ್ರದ ಅಧ್ಯಕ್ಷರಾದ ಶರಣಪ್ಪ ಮಿಠಾರೆ ಮಾತನಾಡಿ ಇಂದು ನಾವು ಆತ್ಮೀಯತೆಯಿಂದ ಇರೋಣ. ಆದರೆ ಹೃದಯ ವಿಶಾಲತೆಯಿಂದ ಸಂಘದಲ್ಲಿ ಯಾರೊಬ್ಬರು ಹಸ್ತಕ್ಷೇಪ ಮಾಡಿದಾಗ ಕಠೋರವಾಗಿ ಮಾತಾಡಬೇಕು. ಸಂಘದಲ್ಲಿ ಸಂಭದ ನೆಂಟರು ಹಾಗೂ ರಾಜಕೀಯ ಬೆರೆಸಬಾರದು. ಎಂದು ನುಡಿದರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಘದ ಅಧ್ಯಕರಾದ ಶಿವಕುಮಾರ ಸಾಲಿ ಮಾತನಾಡುತ್ತ ನಾವು ಪ್ರತಿ ಸದಸ್ಯರಿಗೆ 50 ಸಾವಿರ ರೂ. 100 ಸದಸ್ಯರಿಗೆ ಸಾಲ ವಿತರಿಸಿ ಶೇ. 100ರಷ್ಟು ಸಾಲ ಮರುಪಾವತಿಯಾಗಿದೆ. ಸಂಘದ ಸದಸ್ಯರ ದಿನನಿತ್ಯದ ಆರ್ಥಿಕ ನಿರ್ವಹಣೆಗಾಗಿ 80 ಖಾತೆಗಳು ತೆರೆಯಲಾಗಿದೆ ಜೊತೆಗೆ ಸಂಘದ ಸದಸ್ಯರಿಗೆ ಸಹಕರಿಸಲು 37 ಜನರಿಗೆ ಯಶಶ್ವಿನಿ ಕಾರ್ಡ ವಿತರಿಸಲಾಗಿದೆ. ಮುಂಬರುವ ದಿನಗಳಲ್ಲಿ ಸಂಸ್ಥೆಯಲ್ಲಿ ಈ ಸ್ಟಾಂಪ್ ಅನುಷ್ಠಾನ ಆರ್ಥಿಕ ವ್ಯವಹಾರದ ಗಣಕಿ ಕರಣ ಹಾಗೂ ಆರ್‌ಡಿ ಮಾಡುವ ಯೋಜನೆ ನಮ್ಮದಾಗಿದೆ ಎಂದು ನುಡಿದರು.

ಇದೇ ಸಮಾರಮಭದಲ್ಲಿ ಉಪಾಧ್ಯಕ್ಷರಾದ ಪ್ರಕಾಶ ಗಂದಿಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು ಸಂಘದ ಸಿಇಓ ಆನಂದಕುಮಾರ ಬೆಡಸೂರೆ ಎಲ್ಲರನ್ನು ಸ್ವಾಗತಿಸಿ ರೂ. ಆರು ಲಕ್ಷ ನಾಲ್ಕು ಸಾವಿರ ಅಂದಾಜು ವೆಚ್ಚಕ್ಕೆ ಹಾಗೂ ನಾಲ್ಕು ಲಕ್ಷ ಇಪ್ಪತ್ತಾರು ಸಾವಿರ ಐದು ನೂರು ಖರ್ಚಾದ ಅನುದಾನಕ್ಕೆ ಸದಸ್ಯರಿಂದ ಒಪ್ಪಗೆ ಪಡೆದರು ಇದೇ ಸಂಧರ್ಭದಲ್ಲಿ ಸಂಘಕ್ಕೆ ಸಹಕಾರ ನೀಡಿದ ರಾಘವೇಂದ್ರ ಮೇತ್ರೆ, ವೀರಪ್ಪ ಜೀರಗೆ, ಮಹೇಶ ಮಜಗೆ, ಜಗನ್ನಾಥ ಶಿವಯೋಗಿ, ಸೋಮನಾಥ ಕಾಡೋದಿ, ಹಣಮಂತ ಬಾಳೂರೆ, ಅವರಿಗೆ ಗೌರವಿಸಲಾಯಿತು.

ವೈಜಿನಾಥ ಸಜ್ಜನಶೆಟ್ಟಿ ಹಾಗೂ ಡಾ. ರಶ್ಮಿ ಕನ್ನಡ ಭಾವಗೀತೆಗಳನ್ನು ಹಾಡಿದರು, ಶಿವಶಂಕರ ಟೋಕರೆ ನಿರೂಪಿಸಿದರೆ, ಸುನೀಲಕುಮಾರ ಭಂಡೆ ವಂದಿಸಿದರು.

# ಅನೀಲಕುಮಾರ ಆಣದೂರೆ ವಯೋನಿವೃತ್ತಿ ಬೀಳ್ಕೊಡುಗೆ



ಬೀದರ:ಸೆ.1: ನಗರದ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಪ್ರೊ: ಅನೀಲಕುಮಾರ ಅಣದೂರೆ ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಹೈ.ಕ.ಶಿ.ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜುಗಳ ಅಭಿವೃದ್ಧಿ ಮಂಡಳಿಯ ಸಂಚಾಲಕರಾದ ಡಾ. ರಜನೀಶ ಎಸ್. ವಾಲಿಯವರು ತಮ್ಮ ಅಮೃತ ಹಸ್ತದಿಂದ ಸಸಿಗೆ ನೀರೆರೆಯುವದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಗೌರವ ಸನ್ಮಾನಿಸಿ ಮಾತನಾಡುತ್ತಾ ಸದರಿ ಪ್ರಾಧ್ಯಾಪಕರು ನಮ್ಮ ಮಹಾವಿದ್ಯಾಲಯದಲ್ಲಿ ಸುಮಾರು 37 ವರ್ಷ ಸೇವೆ ಸಲ್ಲಿಸಿ ಇವರ ಅವಧಿಯಲ್ಲಿ ಓದಿದಂತಹ ವಿದ್ಯಾರ್ಥಿಗಳು ಇಂದು ದೇಶ, ವಿದೇಶಗಳಲ್ಲಿ ಉನ್ನತ ಹುದ್ದೆಗಳನ್ನು ಪಡೆದುಕೊಂಡಿದ್ದಾರೆ. ಸಮಾಜಕ್ಕೆ ನಿಸ್ವಾರ್ಥ ಸೇವೆ ಮಾಡುವುದು ಶಿಕ್ಷಕ ವೃತ್ತಿಯಿಂದ ಮಾತ್ರ ಸಾಧ್ಯ ಇವರು ಸರಳ ಜೀವಿಗಳು, ಸಹೃದಯಿಗಳು, ಪರೋಪಕಾರಿಗಳು ಹಾಗೂ ಇವರ ಅವಧಿಯಲ್ಲಿ ಮಹಾವಿದ್ಯಾಲಯದ ಯು.ಜಿ.ಸಿ ಕಾರ್ಯಗಳು ಸುಸೂತ್ರವಾಗಿ ನಡೆದಿವೆ ಇವರ ಕಾರ್ಯ ಶ್ಲಾಘನೀಯ ಎಂದು ನುಡಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಶ್ರೀ ಅಂಜನಾ ಎಸ್. ವಾಲಿಯವರು ಘನ ಉಪಸ್ಥಿತಿ ಹೊಂದಿ, ನಿವೃತ್ತಿ ಹೊಂದಿದ ಶ್ರೀ ಅನೀಲಕುಮಾರ ಆಣದೂರೆ ಅವರು ನಿವೃತ್ತ ಜೀವನ ಸುಖ, ಸಮೃದ್ಧಿ ಆರೋಗ್ಯ ಆಯುಷ್ಯ ಸಂತೋಷದಿಂದ ಕೂಡಿರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಸನ್ಮಾನಿತಗೊಂಡ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಈ ಶಿಕ್ಷಣ ಸಂಸ್ಥೆಯಲ್ಲಿ ದುಡಿಯುವ ಎಲ್ಲಾ ವ್ಯಕ್ತಿಗಳಿಗೆ ದಿ: ಶ್ರೀ ಮಹಾದೇವಪ್ಪಾ ರಾಂಪುರೆಯವರ ಕೃಪಾ ಕಟಾಕ್ಷ ಇದೆ ಇಲ್ಲಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳು ದೇಶ ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ, ಇಂದು ನನ್ನ ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ಉತ್ತಮ ಮಾದರಿ ವ್ಯಕ್ತಿಗಳಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಲು ನನಗೆ ಹೆಮ್ಮೆ ಎನಿಸುತ್ತದೆ. ಸುಮಾರು ವರ್ಷಗಳ ಅವಧಿಯಲ್ಲಿ ಕೆಲಸ ಮಾಡಿದ ನನಗೆ ಈ ಮಹಾವಿದ್ಯಾಲಯ ಕುಟುಂಬದಂತೆ ನನಗೆ ಭಾಸವಾಗುತ್ತದೆ ಎಂದರು ಈ ಸಂಸ್ಥೆಗೆ ಹಾಗೂ ಮಹಾವಿದ್ಯಾಲಯಕ್ಕೆ ನಾನು ಆಭಾರಿಯಾಗಿದ್ದೇನೆ ಎಂದು ಮಾರ್ಮಿಕ ನುಡಿದರು.

ಈ ಕಾರ್ಯಕ್ರಮದಲ್ಲಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಕೋಟೆ, ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ, ಕಛೇರಿಯ ಅಧೀಕ್ಷಕರಾದ ಶ್ರೀ ಸುಜೀತಕುಮಾರ ಬಿ., ಡಾ. ಆಕಾಶ ಆಣದೂರೆ, ಡಾ. ಪ್ರೇರಣಾ ಎಡವೆ, ಶ್ರೀ ಸಂಗಮೇಶ ಅಣದೂರೆ ಅವರುಗಳು ನಿವೃತ್ತಿಹೊಂದಿದ ಶ್ರೀ ಅನೀಲಕುಮಾರ ಆಣದೂರೆಯವರ ಬಗ್ಗೆ ತಮ್ಮ ಅನಿಸಿಕೆಗಳು ಹೇಳಿದರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಸದರಿ ಪ್ರಾಧ್ಯಾಪಕರು ರಸಾಯನಶಾಸ್ತ್ರ ವಿಭಾಗದಲ್ಲಿ ಪ್ರೊತ್ರಾಹಿಸುತ್ತಿದ್ದರು. ಹಿರಿಯ ಕಿರಿಯರು ಎನ್ನದೇ ನಮ್ಮನ್ನು ಸದಾ ಹುರಿದುಂಬಿಸುತ್ತಿದ್ದರು ನಾನು ಮತ್ತು ಆಣದೂರೆಯವರು ಗೆಳೆಯರಾಗಿ ಅಧ್ಯಯನ ಮಾಡಿ ಒಂದೇ ಸಂಸ್ಥೆಯಲ್ಲಿ ಉನ್ನತ ಹುದ್ದೆ ಹೊಂದಿ ಸೇವೆ ಸಲ್ಲಿಸಿದ್ದೇವೆ. ಅಂದಿನ ದಿನಗಳನ್ನು ಮೆಲುಕು ಹಾಕುತ್ತಾ ನೆನಪಿಸಿಕೊಂಡರು ಅವರು ಉತ್ತಮ ಆರೋಗ್ಯ ಹೊಂದಿ ಹಲವಾರು ಅಂತರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಿ ಪ್ರೌಢ ಪ್ರಬಂಧಗಳನ್ನು ಮಂಡಿಸಿದರು ಹಾಗೂ ಮಹಾವಿದ್ಯಾಲಯಗಳಲ್ಲಿ ವಿವಿಧ ಜವಾಬ್ದಾರಿಗಳನ್ನು ಅತ್ಯಂತ ಸೂಕ್ಷ್ಮತೆಯಿಂದ ನಿರ್ವಹಿಸಿದರು. ಅವರು ನಿವೃತ್ತಿ ಹೊಂದಿದ್ದರು. ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ಬೋಧನೆ ಮಾಡಿ ಸಮಾಜದಲ್ಲಿ ಒಳ್ಳೆಯ ನಾಗರೀಕರನ್ನಾಗಿ ಪರಿವರ್ತಿಸಿದ್ದಾರೆ ಅವರ ಆರ್ಶೀವಾದದಿಂದ ಇಂದು ಹಲವಾರು ವಿದ್ಯಾರ್ಥಿಗಳು ಉನ್ನತ ಹುದ್ದೆ ಪಡೆದು ಅವರ ಜ್ಞಾನ ಮುಂದಿನ ದಿನಗಳಲ್ಲಿ ನಮ್ಮ ವಿದ್ಯಾರ್ಥಿಗಳಿಗೆ ದಾರಿ ದೀಪ ಎಂದು ನುಡಿದರು.

ಕಾರ್ಯಕ್ರಮ ಮೊದಲಿಗೆ ಸ್ವಾಗತವನ್ನು ಹಿಂದಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಮಾರುತಿ ಭೀಮಣ್ಣಾ ಮಾಡಿದರೆ, ಪ್ರಾರ್ಥನೆ ಗೀತೆಯನ್ನು ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ರೇಣುಕಾದೇವಿ ಎಂ. ಹಾಡಿದರೆ, ಇತಿಹಾಸ ವಿಭಾಗದ ಉಪನ್ಯಾಸಕರಾದ ಶ್ರೀ ಬಸವರಾಜ ಬಿರಾದಾರ ನೇರವೆರಿಸಿದರೆ, ಹಿಂದಿ ವಿಭಾಗದ ಉಪನ್ಯಾಸಕರಾದ ಶ್ರೀ ನೂರ ಪಾಶಾ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯ ನಿವೃತ್ತಿಹೊಂದಿದ ಪ್ರಾಂಶುಪಾಲರು, ಪ್ರಾಧ್ಯಾಪಕರು, ವಿದ್ಯಾರ್ಥಿ ಬಳಗ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ನಾಳೆ ಬೀದರ್‌ನಲ್ಲಿ ಬಸವ ಸಂಸ್ಕೃತಿ ಅಭಿಯಾನ: ಬಸವರಾಜ ಧನ್ನೂರ್




ಬೀದರ. ಸೆ. 01 : ನಾಳೆ(ಈ ತಿಂಗಳ 3ರಂದು) ಬುಧವಾರ ಬೀದರ್‌ನಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ, ಬಸವಪರ ಸಂಘಟನೆಗಳು ಹಾಗೂ ಬಸವ ಸಂಸ್ಕೃತಿ ಅಭಿಯಾನ ಸಮಿತಿಗಳ ಸಹಯೋಗದಲ್ಲಿ ಬಸವ ಸಂಸ್ಕೃತಿ ಅಭಿಯಾನ ಆಯೋಜಿಸಲಾಗಿದೆ ಎಂದು ಬಸವ ಸಂಸ್ಕೃತಿ ಅಭಿಯಾನ ಸಮಿತಿ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸೆ.1 ಸೋಮವಾರ ಬಸವಣ್ಣನವರ ಜನ್ಮಭೂಮಿ ಬಸವನ ಬಾಗೇವಾಡಿಯಲ್ಲಿ ಬಸವ ಸಂಸ್ಕೃತಿ ಅಭಿಯಾನ ಉದ್ಘಾಟನೆಗೊಂಡು ನಾಡಿನ ಎಲ್ಲ ಜಿಲ್ಲೆಗಳಲ್ಲಿ ಈ ಅಭಿಯಾನ ಜರುಗಲಿದೆ.

ಆಕ್ಟೋಬರ್ 5ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಭಿಯಾನದ ಸಮಾರೋಪ ಸಮಾರಂಭ ಜರುಗಲಿದೆ. ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿರುವ ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಸಮಾರೋಪ ಭಾಷಣ ಮಾಡುವರು. ಇಂದು ಕಲಬುರಗಿಯಲ್ಲಿ ಬಸವ ಸಂಸ್ಕೃತಿ ಅಭಿಯಾನ ಜರುಗಲಿದ್ದು, ನಾಳೆ ಅಂದರೆ ಸಪ್ಟೆಂಬರ್ 3ರಂದು ಬಸವಣ್ಣನವರ ಭಾವಚಿತ್ರವಿರುವ ಬಸವ ರಥ ಬೀದರ್‌ಗೆ ಬಂದು ಬಸವ ಸಂಸ್ಕೃತಿ ಅಭಿಯಾನದ ಮೆರವಣಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ ಎಂದು ತಿಳಿಸಿದರು.

ಬೆಳಗ್ಗೆ 11 ಗಂಟೆಗೆ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಕಾಲೇಜು ವಿದ್ಯಾರ್ಥಿಗಳ ಮತ್ತು ಸಾರ್ವಜನಿಕರ ಜೊತೆ ವಚನ ಸಂವಾದ ಕಾರ್ಯಕ್ರಮ ಜರುಗಲಿದ್ದು, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಕಾರ್ಯಕ್ರಮ ಉದ್ಘಾಟಿಸುವರು. ಸಂಜೆ 4 ಗಂಟೆಗೆ ಮೆರವಣಿಗೆ ಜರುಗಲಿದ್ದು, ನಗರದ ಬಸವೇಶ್ವರ ವೃತ್ತದಿಂದ ಬಿ.ವಿ. ಭೂಮರೆಡ್ಡಿ ಕಾಲೇಜಿನ ವರೆಗೆ ಜರುಗಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ನಾಡಿನ ಸುಮಾರು 100ಕ್ಕೂ ಅಧಿಕ ಮಠಾಧಿಶರು ಮೆರವಣಿಗೆಯಲ್ಲಿ ಭಾಗವಹಿಸುವರು. 2000 ಶರಣೆಯರು ಇಳಕಲ್ಲ ಸೀರೆ ಧರಿಸಿ ಹಾಗೂ 2000 ಶರಣರು ಧೋತರ ಧರಿಸಿ ಮೆರವಣಿಗೆಯ ಶೋಭೆ ಹೆಚ್ಚಿಸಲಿದ್ದಾರೆ. 4ರಿಂದ 8 ವರ್ಷದ ಮಕ್ಕಳು ಬಾಲ ಶರಣರ ವೇಷದಲ್ಲಿ ಅಕರ್ಷಿಸಲ್ಪಡುವರು. ಅದರಲ್ಲಿ ಮೂವರಿಗೆ ಪ್ರಥಮ, ದ್ವಿತೀಯ ಹಾಗೂ ತೃತಿಯ ಬಹುಮಾನ ವಿತರಿಸಲಾಗುವುದು. 24 ಕುದುರೆಗಳ ಮೇಲೆ ಲಿಂಗಾನಂದ ಮಹಾಸ್ವಾಮಿಗಳು, ಮಾತಾಜಿಯವರು,

ಸರ್ ಎಂ ವಿಶ್ವೇಶ್ವರಯ್ಯ, ಫ.ಗು ಹಳಕಟ್ಟಿ, ಸಿದ್ದೇಶ್ವರ ಸ್ವಾಮಿಗಳು ಸೇರಿದಂತೆ ಅನೇಕ ಮಹಾತ್ಮರ ವೇಷಧಾರಿಗಳು ಕುದುರೆಯನ್ನೇರಿ ಗಮನ ಸೆಳೆಯುವರು. ಈಗಾಗಲೇ ವಚನ ಕಂಠಪಾಠ ಸ್ಪರ್ಧೆ, ನಿಭಂದ ಸ್ಪರ್ಧೆ, ಭಾಷಣ ಸ್ಪರ್ಧೆ, ರಂಗೋಲಿ ಸ್ಪರ್ಧೆ, ಚಿತ್ರಕಲೆ ಸ್ಪರ್ಧೆ ಜರುಗಿವೆ.

ಸಂಜೆ 6 ಗಂಟೆಗೆ ನಗರದ ಬಿ.ವಿ ಭೂಮರಡ್ಡಿ ಮಹಾವಿದ್ಯಾಲಯದ ಅವರಣದಲ್ಲಿ ಸಾರ್ವಜನಿಕ ಸಮಾರಂಭ ಜರುಗುವುದು. ರಾತ್ರಿ 8.30 ಗಂಟೆಗೆ ಶಿವಸಂಚಾರ ಸಾಣೆಹಳ್ಳಿ ತಂಡದವರಿಂದ 'ಜಂಗಮದೆಡೆಗೆ' ನಾಟಕ ಪ್ರದರ್ಶನ ಜರುಗುವುದು. ಕಾರ್ಯಕ್ರಮದ ನಂತರ ಪ್ರಸಾದದ ವ್ಯವಸ್ಥೆ ಇರುತ್ತದೆ.

ಈ ಅಭಿಯಾನದಲ್ಲಿ ಬಸವಾದಿ ಶರಣರ ಭಿತ್ತಿ ಚಿತ್ರಗಳಿರುವ 'ಬಸವ' ರಥದ ಮೆರವಣಿಗೆ, ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಜೊತೆ ಸಂವಾದ, ಪಾದಯಾತ್ರೆ, ಬಹಿರಂಗ ಸಭೆ, ವಚನ ಸಂಗೀತ, ಉಪನ್ಯಾಸ, ನಾಟಕ ಪ್ರದರ್ಶನ ಇತ್ಯಾದಿ ಚಟುವಟಿಕೆಗಳಿರುತ್ತವೆ.

ಜಾಗತಿಕ ಲಿಂಗಾಯತ ಮಹಾಸಭಾ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ರಾಷ್ಟ್ರೀಯ ಬಸವದಳ, ಭಾರತೀಯ ಬಸವ ಬಳಗ, ಬಸವ ಸಮಿತಿ, ಬಸವ ಕೇಂದ್ರ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಬಸವ ಸೇವಾ ಪ್ರತಿಷ್ಠಾನ, ಲಿಂಗಾಯತ ಮಹಾಮಠ, ಬಸವಪರ ಸಂಘಟನೆಗಳು, ಕನ್ನಡ ಸಾಹಿತ್ಯ ಪರಿಷತ್ತು,

ವಚನ ಸಾಹಿತ್ಯ ಪರಿಷತ್ತು, ಕರ್ನಾಟಕ ಜಾನಪದ ಪರಿಷತ್ತು, ಕ.ಕ. ಕಲಾವಿದರ ಒಕ್ಕೂಟ, ಸರ್ವ ಶರಣ ಸಮಾಜದ ಸಂಘ ಸಂಸ್ಥೆಗಳು, ನೀಲಮ್ಮನ ಬಳಗಗಳು, ಮಹಿಳಾ ಸಂಘಟನೆಗಳು, ಬಸವತತ ಪ್ರೇಮಿಗಳು, ಸರ್ವ ಶರಣ ಬಂಧುಗಳು, ಪ್ರಗತಿಪರರು ಯುವಕ–ಯುವತಿಯರು ಸುಮಾರು 50 ಸಾವಿರಕ್ಕೂ ಅಧಿಕ ಜನರು ಇದರಲ್ಲಿ ಭಾಗವಹಿಸುವರು ಎಂದು ಧನ್ನೂರ್ ಹೇಳಿದರು.

ಸಮಿತಿಯ ಪದಾಧಿಕಾರಿಗಳಾದ ಜಯರಾಜ ಖಂಡ್ರೆ, ರಾಜೇಂದ್ರಕುಮಾರ ಗಂದಗೆ, ರಾಜೇಂದ್ರ ಜೊನ್ನಿಕೇರಿ, ಸುರೇಶ ಚನಶೆಟ್ಟಿ, ಯೋಗೇಶ ಸಿರಿಗೆರೆ, ಯೋಗೇಂದ್ರ ಯಯದಲಾಪುರೆ, ಚಂದ್ರಶೇಖರ ಹೆಬ್ಬಾಳೆ, ಸಿದ್ದಯ್ಯ ಕಾವಡಿ, ಸುರೇಶ ಸ್ವಾಮಿ, ಜಗದಿಶ ಪಾಟೀಲ, ಗುಂಡಪ್ಪ ಬಳತೆ, ಅರವಿಂದ ಕಾರಬಾರಿ, ವೀರಶೆಟ್ಟಿ ಪಾಟೀಲ ಮರ್ಖಲ್, ಉಷಾ ಮಿರ್ಚೆ, ಸುವರ್ಣಾ ಧನ್ನೂರ್, ನಿರ್ಮಲಾ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ವಿವಾಹಿತ ಮಹಿಳೆಯ ಅನುಮಾನಾಸ್ಪದ ಸಾವು: ಪ್ರಿಯಕರನಿಂದ ಹತ್ಯೆ ಶಂಕೆ

ಕಲಬುರಗಿ,ಸೆ.1: ವಿವಾಹಿತ ಮಹಿಳೆಯೊಬ್ಬಳು ಅನುಮಾನಾಸ್ಪದ ರೀತಿಯಲ್ಲಿ ಮೃತಪಟ್ಟಿದ್ದು, ಆಕೆಯನ್ನು ಆಕೆಯ ಪ್ರಿಯಕರ ಕೊಲೆ ಮಾಡಿರುವ ಕುರಿತು ಮಹಿಳೆಯ ಮನೆಯವರು ಆರೋಪಿಸಿದ್ದಾರೆ. ಮೃತಳನ್ನು ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ರಾಜನಾಳ್ ತಾಂಡಾದ ನಿವಾಸಿ ಶ್ರೀಮತಿ ಸೀಮಾ ಗಂಡ ಸಂತೋಷ ಚವ್ಹಾಣ್ ಎಂದು ಗುರುತಿಸಲಾಗಿದೆ. ತಾಲ್ಲೂಕಿನ ಫಿರೋಜಾಬಾದ್ ಗ್ರಾಮದ ಆಟೋ ಚಾಲಕ ಶಾಂತಕುಮಾರ್ ತಳವಾರ್ ಮಹಿಳೆಯ ಪ್ರಿಯಕರನಾಗಿದ್ದು, ಆತನೇ ತನ್ನ ಪ್ರೇಯಸಿಯನ್ನು ಕೊಲೆ ಮಾಡಿರುವ ಕುರಿತು ಮಹಿಳೆಯ ಸಂಬಂಧಿ ಪಂಡಿತ ತಂದೆ ಸೀನು ಚವ್ಹಾಣ್ ಅವರು ದೂರು ಸಲ್ಲಿಸಿದ್ದಾರೆ.ಸಂತೋಷ ಸೀನು ಚವ್ಹಾಣ್ ಅವರ ಇಬ್ಬರು ಪುತ್ರರಲ್ಲಿ ಕೊನೆಯ ಪುತ್ರನಾಗಿದ್ದು, ಇಂಡಿ ತಾಲ್ಲೂಕಿನ ಸಾವಳಸಂಗ ತಾಂಡಾದ ಮೋಹನ್ ರಾಠೋ ಪುತ್ರಿ ಸೀಮಾ ಜೊತೆಗೆ ಕಳೆದ 2016ರಲ್ಲಿ ಮದುವೆ ಮಾಡಲಾಗಿತ್ತು. ದಂಪತಿಗೆ ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ ಇದ್ದು, ಸಂತೋಷನು ಜೆಸಿಬಿ ಆಪರೇಟರ್ ಎಂದು ಕೆಲಸ ಮಾಡಿಕೊಂಡಿದ್ದ.ಕಳೆದ ಎರಡು ವರ್ಷಗಳ ಹಿಂದೆ ಸೀಮಾ ತನ್ನ ಪುತ್ರನೊಂದಿಗೆ ಮನೆ ಬಿಟ್ಟು ಹೋಗಿದ್ದಳು. ಈ ಕುರಿತು ಹೊರ್ತ ಪೋಲಿಸ್ ಠಾಣೆಯಲ್ಲಿ ಕಾಣೆಯಾದ ಕುರಿತು ದೂರು ಸಲ್ಲಿಸಿದ್ದಳು. ಆಗ ಸೀಮಾ ಕಲಬುರ್ಗಿಯಲ್ಲಿ ಫಿರೋಜಾಬಾದ್‌ನ ಆಟೋ ಚಾಲಕ ಶಾಂತಕುಮಾರ್ ತಳವಾರನೊಂದಿಗೆ ಸಿಕ್ಕಿದ್ದು, ಆಗ ಅವರಿಬ್ಬರನ್ನು ಹೊರ್ತ ಪೋಲಿಸ್ ಠಾಣೆಗೆ ಕರೆದುಕೊಂಡು ಹೋಗಲಾಗಿತ್ತು. ಅಲ್ಲಿ ಸೀಮಾಳಿಗೆ ತಿಳುವಳಿಕೆ ಹೇಳಿ ಪತಿಯನ್ನು ಬಿಟ್ಟು ಹೋಗುವುದು ಸರಿಯಲ್ಲ ಎಂದು ಹೇಳಿ ಪತಿಯೊಂದಿಗೆ ಕಳಿಸಿಕೊಡಲಾಗಿತ್ತು. ಸೀಮಾ ಪತಿಯೊಂದಿಗೆ ಸರಿಯಾಗಿ ಉಳಿದುಕೊಂಡಿದ್ದು, ನಂತರ ಮತ್ತೆ ಕಳೆದ 2024ರ ಡಿಸೆಂಬರ್ ತಿಂಗಳಲ್ಲಿ ತನ್ನ ಪುತ್ರಿಯೊಂದಿಗೆ ಮನೆ ಬಿಟ್ಟು ಹೋದಳು.

ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ನಿರ್ದೇಶನ

# ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷಾ ಕಾರ್ಯ ವ್ಯವಸ್ಥಿತವಾಗಿರಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ಜಿಲ್ಲೆಯಲ್ಲಿಕೈಗೊಳ್ಳಲಾಗುತ್ತಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷಾ ಕಾರ್ಯವು ವ್ಯವಸ್ಥಿತವಾಗಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.




ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಕಾರ್ಯಕ್ಕಾಗಿ ವಿವಿಧ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಏರ್ಪಡಿಸಿದ್ದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಈಗಾಗಲೇ ಮೊದಲ ಹಂತದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದಲ್ಲಿ ವಿದ್ಯುತ್ ಮೀಟರ್ ರೀಡರ್‌ಗಳು ಎಲ್ಲ ಮನೆಗಳನ್ನು ಜಿಯೋ ಟ್ಯಾಗಿಂಗ್ ಮಾಡುವ ಕಾರ್ಯ ಪ್ರಾರಂಭಿಸಿದೆ. ಯಾವುದೇ ಮನೆಗಳು ತಪ್ಪಿ ಹೋಗದಂತೆ ಯಶಸ್ವಿಯಾಗಿ ಸಮೀಕ್ಷೆ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಎರಡನೇ ಹಂತದಲ್ಲಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರವರೆಗೆ ಸಮೀಕ್ಷಾ ಕಾರ್ಯ ನಡೆಯಲಿದೆ. ಸಂಬಂಧಿಸಿದ ಅಧಿಕಾರಿಗಳು ಸರ್ವೆ ಕಾರ್ಯಕ್ಕೆ ಗಣತಿದಾರರನ್ನು ನೇಮಿಸಿ ಪಟ್ಟಿಯನ್ನು ಅಂತಿಮಗೊಳಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಇಂಧನ ಇಲಾಖೆಯಿಂದ ಮನೆಗಳ ಆರ್‌ಆರ್ ನಂಬರ್‌ಗಳಿಗೆ ಜಿಯೋ ಟ್ಯಾಗಿಂಗ್ ಮಾಡುವ ಮೂಲಕ ಶೇಕಡಾ ನೂರರಷ್ಟು ಪ್ರಗತಿ ಸಾಧಿಸಬೇಕು. ಜಿಯೋ ಟ್ಯಾಗ್ ಮಾಡಿದ ಮನೆಗಳಿಗೆ ಸ್ಟಿಕರ್ ಅಂಟಿಸಬೇಕು. ಸಮೀಕ್ಷೆ ಕಾರ್ಯಕ್ಕಿಂತ ಮುನ್ನ ಆರ್‌ಆರ್ ನಂಬರ್ ಗಳನ್ನು ಗುರುತಿಸುವ ಕಾರ್ಯದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು. ಈಗಾಗಲೇ ಜಿಲ್ಲೆಯಲ್ಲಿ 33 ಸಾವಿರ ಮನೆಗಳ ಆರ್‌ಆರ್ ನಂಬರ್ ಸಮೀಕ್ಷೆಯಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಯಾವುದೇ ಕುಟುಂಬಗಳು ಕೈ ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು. ಇದ–ರಿಂದ ಎರಡನೇ ಹಂತದಲ್ಲಿ ನಡೆಯುವ ಸಮೀಕ್ಷೆ ಕಾರ್ಯವನ್ನು ವ್ಯವಸ್ಥಿತವಾಗಿ ಹಾಗೂ ವೈಜ್ಞಾನಿಕವಾಗಿ ಮತ್ತು ನಿಖರವಾಗಿ ಕಾರ್ಯಗತಗೊಳಿಸಲು ಅನುಕೂಲವಾಗಲಿರುವುದರಿಂದ ಮೊದಲನೇ ಹಂತದ ಕಾರ್ಯವನ್ನು ಅತ್ಯಂತ ಅಚ್ಚುಕಟ್ಟಾಗಿ ಯಾವುದೇ ಲೋಪಗಳಿಗೆ ಆಸ್ಪದ ನೀಡದೇ ನಿರ್ವಹಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕರಿಗೆ ಅರಿವು ಮೂಡಿಸಿ: ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಕುರಿತು ಸಮೀಕ್ಷೆ ಕಾರ್ಯವನ್ನು 65 ಪ್ರಶ್ನಾವಳಿಯನ್ನೊಳಗೊಂಡ ನಾಗರಿಕ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ ಅಭಿವೃದ್ದಿಪಡಿಸಿರುವ ತಂತ್ರಾಂಶಗಳ ಮೂಲಕ ಸರ್ವೆ ಕಾರ್ಯ ಕೈಗೊಳ್ಳಬೇಕಾಗಿರುತ್ತದೆ. ಹಾಗಾಗಿ ಸಾರ್ವಜನಿಕರಿಗೆ ಈ ಕುರಿತು ಹೆಚ್ಚಿನ ಮಾಹಿತಿ ನೀಡಲು ಕಸ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ ಅಡಿಯೋ ಮೂಲಕ ವ್ಯಾಪಕ ಪ್ರಚಾರ ನೀಡಬೇಕು. ಸಮೀಕ್ಷಾ ಕಾರ್ಯಕ್ಕೆ ಸಾರ್ವಜನಿಕರು ಸಹ ಸಹಕರಿಸಬೇಕು ಎಂದು ತಿಳಿಸಿದರು.

**ಆರ್‌ಆರ್ ನಂಬರ್ ಹೊಂದಿರದ ಮನೆಗಳ ಸಮೀಕ್ಷೆ ನಡೆಸಿ:**

ಸಂಡೂರು ತಾಲ್ಲೂಕು ವ್ಯಾಪ್ತಿಯ ಜಿಂದಾಲ್ ಟೌನ್ ಶಿಪ್ ವ್ಯಾಪ್ತಿಯ ಮನೆಗಳಿಗೆ ಆರ್‌ಆರ್ ನಂಬರ್ ನೀಡಿರುವುದಿಲ್ಲ. ಆ ವ್ಯಾಪ್ತಿಯ ಗ್ರಾಪಂ ಅಧಿಕಾರಿಗಳು, ಕಂದಾಯ ಅಧಿಕಾರಿಗಳು ಸಮೀಕ್ಷೆ ನಡೆಸಿ ಆರ್‌ಆರ್ ನಂಬರ್ ಇಲ್ಲದ ಮನೆಗಳಿಗೆ ನಂಬರ್ ನೀಡಬೇಕು ಎಂದು ಸಂಡೂರಿನ ತಹಶೀಲ್ದಾರ್, ಇಒ ಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಈ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ನಡೆಯಬೇಕು. ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಗಳ ಬಗ್ಗೆ ಸಮೀಕ್ಷೆ ಕಾರ್ಯ ಮಹತ್ವದ್ದಾಗಿರುವುದರಿಂದ ಜಿಲ್ಲೆಯಲ್ಲಿ 4 ಲಕ್ಷ ಕುಟುಂಬಗಳು ಇರುವುದಾಗಿ ಅಂದಾಜಿಸಲಾಗಿದೆ. ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ಕೈಗೊಳ್ಳಲು ಪ್ರತಿ ಕುಟುಂಬಕ್ಕೆ 150 ಕುಟುಂಬಕ್ಕೆ ಒಬ್ಬ ಗಣತಿದಾರರಂತೆ 2000 ಕ್ಕೂ ಹೆಚ್ಚು ಗಣತಿದಾರರು ಮತ್ತು ಪ್ರತಿ 20 ಗಣ–ತಿದಾರಿಗೆ ಒಬ್ಬರು ಮೇಲ್ವಿಚಾರಕರನ್ನು ಮತ್ತು ಜಿಲ್ಲೆಗೆ 50 ಮಾಸ್ಟರ್ ಟ್ರೈನರ್ ಗಳನ್ನು ಗುರುತಿಸಿ ನಿಗದಿಪಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ತರಬೇತಿಗಳಿಗೂ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸಿಆರ್‌ಪಿ, ಬಿಆರ್‌ಪಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಜೆಸ್ಕಾಂ, ಇಂಧನ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯೊಂದಿಗೆ ಈ ಕಾರ್ಯ ಯಶಸ್ವಿಗೊಳಿಸಬೇಕು ಎಂದು ಅವರು ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮ್ಮೈರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ಜಿಲ್ಲಾ ಅಂಕಿ–ಸಂಖ್ಯೆ ಸಂಗ್ರಹಣಾಧಿಕಾರಿ ಪತ್ರಿಬಸಪ್ಪ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ತಾಲ್ಲೂಕುಗಳ ತಹಶೀಲ್ದಾರರು, ಇಒಗಳು, ನಗರ ಸ್ಥಳೀಯ–ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಗೂ ಇತರರು ಭಾಗವಹಿಸಿದ್ದರು.

## ವಿವಿಧ ಯೋಜನೆಗಳಡಿ ಸಾಲ–ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ 2025–26ನೇ ಸಾಲಿನ ವಿವಿಧ ಯೋಜನೆಗಳಡಿ ಸಾಲ–ಸೌಲಭ್ಯಗಳಿಗಾಗಿ ಪರಿಶಿಷ್ಟ ಪಂಗಡದ ಸಮುದಾಯ ಜನಾಂಗದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಬೆಂಗಳೂರು ಓನ್, ಕರ್ನಾಟಕ ಓನ್, ಗ್ರಾಮ ಓನ್ ಸೆಂಟರ್‌ಗಳ ಮೂಲಕ (https://sevasindhuservices.karnataka.gov.in) ಗೆ ಭೇಟಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. 2023–24 ಮತ್ತು 2024–25ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಶ್ಯಕತೆ ಇರುವುದಿಲ್ಲ. ಅರ್ಜಿ ಸಲ್ಲಿಸಲು ಸೆ.17 ಕೊನೆಯ ದಿನವಾಗಿದೆ.

*ಸ್ವಯಂಉದ್ಯೋಗಯೋಜನೆಗಳು:*

*ನೇರಸಾಲ ಯೋಜನೆ:*

ಕಿರು ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಘಟಕವೆಚ್ಚ ರೂ.1 ಲಕ್ಷ, ಇದರಲ್ಲಿ ರೂ.50,000 ಸಹಾಯಧನ ಮತ್ತು ರೂ.50,000 ಸಾಲ.

*ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ:*

ಹೈನುಗಾರಿಕೆಗಾಗಿ ಘಟಕ ವೆಚ್ಚ ಶೇ.70 ರಷ್ಟು ಗರಿಷ್ಠ ರೂ.1.25 ಲಕ್ಷ ಸಹಾಯಧನ ಮತ್ತು ಉಳಿದ ಬ್ಯಾಂಕ್ ಸಾಲ. ವ್ಯಾಪಾರ ಮತ್ತು ಇತರೆ ಸಣ್ಣ ಉದ್ಯಮಗಳಿಗಾಗಿ ಘಟಕ ವೆಚ್ಚದ ಶೇ.70 ರಷ್ಟು ಗರಿಷ್ಠ ರೂ.2 ಲಕ್ಷ ಸಹಾಯಧನ ಮತ್ತು ಉಳಿದ ಬ್ಯಾಂಕ್ ಸಾಲ.

ಸ್ವಾವಲಂಭಿ ಸಾರಥಿ –ಸರಕು ವಾಹನ/ಟ್ಯಾಕ್ಸಿ ಉದ್ದೇಶಕ್ಕಾಗಿ ಘಟಕ ವೆಚ್ಚದ ಶೇ.75 ರಷ್ಟು ಗರಿಷ್ಠ ರೂ.4 ಲಕ್ಷ ಸಹಾಯಧನ ಮತ್ತು ಉಳಿದ ಬ್ಯಾಂಕ್ ಸಾಲ/ಫಲಾನುಭವಿಯ ವಂತಿಕೆ.

*ಮೈಕ್ರೋಕ್ರೆಡಿಟ್ (ಪ್ರೇರಣಾ) ಯೋಜನೆ:*

ಮಹಿಳಾ ಸ್ವಸಹಾಯ ಸಂಘದ ಕನಿಷ್ಠ 10 ಜನ ಸದಸ್ಯರಿಗೆ ಸ್ವ–ಯಂ ಉದ್ಯೋಗ ಕಲ್ಪಿಸಲು ಕಿರು ಆರ್ಥಿಕ ಚಟುವಟಿಕೆಗಳಿಗೆ ಘಟಕ ವೆಚ್ಚ ರೂ.5 ಲಕ್ಷ, ಇದರಲ್ಲಿ ರೂ.2.50 ಲಕ್ಷ ಸಹಾಯಧನ ಮತ್ತು ರೂ.2.50 ಲಕ್ಷ ನಿಗಮದಿಂದ ಸಾಲ ಕಲ್ಪಿಸಲಾಗುವುದು.

*ಗಂಗಾ ಕಲ್ಯಾಣ ಯೋಜನೆ:*

1.20 ಎಕರೆಯಿಂದ 5 ಎಕರೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರು ಹೊಂದಿರುವ ಖುಷ್ಕಿ, ಒಣ ಜಮೀನಿನಲ್ಲಿ ಕೊಳವೆಬಾವಿ ಕೊರೆಸಿ, ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ದೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು. ಈ ಯೋಜನೆಗೆ ಘಟಕವೆಚ್ಚ ರೂ.3.75 ಲಕ್ಷ (ರೂ.50,000 ಸಾಲ ಒಳಗೊಂಡಂತೆ).

*ಭೂ ಒಡೆತನ ಯೋಜನೆ:*

ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಗರಿಷ್ಠ ಘಟಕವೆಚ್ಚ ರೂ.20 ಲಕ್ಷ (ಸಹಾಯಧನ ಶೇ.50 ರಷ್ಟು ಹಾಗೂ ಸಾಲ ಶೇ.50 ರಷ್ಟು) ಗರಿಷ್ಠ ಎಷ್ಟು ವಿಸ್ತೀರ್ಣ ಬರುತ್ತದೆಯೋ ಅಷ್ಟು ಜಮೀನನ್ನು ಖರೀದಿಸಿ ಕೊಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್‌ಮೆಂಟ್‌ನ ನಂದಿ ಶಾಲೆ ಹಿಂಭಾಗದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ದೂ.08392–245551 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.29 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ಸಂಡೂರು ತಾಲ್ಲೂಕಿನ ವೆಂಕಟಗಿರಿ ಗ್ರಾಮದ ರಾಮದುರ್ಗ(ರಾಮಗಢ) ಬ್ಲಾಕ್‌ನ ರಾಮಗಢ ಸಂರಕ್ಷಿತ ಅರಣ್ಯದ ಗಣಿಗುತ್ತಿಗೆ ಸಂಖ್ಯೆ.2451 ರಲ್ಲಿ ಮೆ. ಉದಯಶಿವಕುಮಾರ್ ಇನ್‌ಪ್ರಾ ಪ್ರೈವೇಟ್ ಲಿಮಿಟೆಡ್ ಇವರು 'ಸಚ್ಚಿದಾನಂದ ಕಬ್ಬಿಣ ಅದಿರು ಗಣಿ'ಯ ಒಟ್ಟು 24.04 ಹೆಕ್ಟೇರ್ ಪ್ರದೇಶದಲ್ಲಿ ವಾರ್ಷಿಕ 93,975 ಟನ್ ಉತ್ಪಾದನಾ ಸಾಮರ್ಥ್ಯದ ಉದ್ದೇಶಿತ ಕಬ್ಬಿಣದ ಅದಿರು ಯೋಜನೆಯ ಪ್ರಸ್ತಾವನೆ ಸಲ್ಲಿಸಿದ್ದು, ಇದರ ಕುರಿತು ಸೆ.29 ರಂದು ಬೆಳಿಗ್ಗೆ 11 ಗಂಟೆಗೆ ಸಂಡೂರು ತಾಲ್ಲೂಕಿನ ವೆಂಕಟಗಿರಿ ಗ್ರಾಮದ ರಾಮದುರ್ಗ(ರಾಮಗಢ) ಬ್ಲಾಕ್‌ನ ರಾಮಗಢ ಸಂರಕ್ಷಿತ ಅರಣ್ಯದ ಗಣಿಗುತ್ತಿಗೆ ಸಂಖ್ಯೆ.2451 ಇಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ತೀರ್ಮಾನಿಸಲಾಗಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಇದಕ್ಕೆ ಸಂಬಂಧಿಸಿದಂತೆ ಉದ್ದೇಶಿತ ಯೋಜನೆಯ ಕಾರ್ಯ ನಿರ್ವಾಹಕ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಸಂಬಂಧಿಸಿದ ಕಚೇರಿಗಳಲ್ಲಿ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಗಮನಕ್ಕೆ ಇಡಲಾಗಿದೆ.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಡಿಸಿ ಪ್ರಶಾಂತ್ ಕುಮಾರ್ ಅಧಿಕಾರಿಗಳಿಗೆ ಸೂಚನೆ

## ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನ ಪೂರ್ಣ ಪ್ರಮಾಣದಲ್ಲಿ ವ್ಯಯಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ರಾಜ್ಯ ಮತ್ತು ಕೇಂದ್ರದ ವಿವಿಧ ಯೋಜನೆಗಳಡಿ ಜಿಲ್ಲೆಯ ವಿವಿಧ ಇಲಾಖೆಗಳಿಗೆ ವಿವಿಧ ಉದ್ದೇಶಿತ ಯೋಜನೆಗಳಿಗಾಗಿ ಬಿಡುಗಡೆಯಾಗುವ ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ನಿಗಧಿತ ಅವಧಿಯೊಳಗೆ ಅಧಿಕಾರಿಗಳು ಖರ್ಚು ಮಾಡಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸೂಚಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜುಲೈ–2025ರ ಅಂತ್ಯದವರೆಗಿನ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಾರ್ಯಕ್ರಮಗಳ ಇಲಾಖಾವಾರು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತೋಟಗಾರಿಕೆ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಇಲಾಖೆ, ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನೊಳಗೊಂಡಂತೆ ಹಲವು ಇಲಾಖೆಗಳು ನಿಗದಿತ ಗುರಿ ಸಾಧನೆ ಮಾಡಬೇಕು. ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಲ್ಯಾಣ ಕಾರ್ಯಕ್ರಮಗಳಿಗೆ ನಿಗದಿಪಡಿಸಿರುವ ಅನುದಾನಕ್ಕೆ ಸಂಬಂಧಿಸಿದಂತೆ ಸಂಪೂರ್ಣ ಕ್ರಿಯಾಯೋಜನೆಯನ್ನು ಸಿದ್ದಪಡಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಬೇಕು ಎಂದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಹಂಚಿಕೆ ಯೋಜನೆಗೆ ಸಂಬಂಧಿಸಿದಂತೆ, ವಿವಿಧ ಇಲಾಖಾವಾರು ಯೋಜನೆಗಳ ಕುರಿತು ಹೆಚ್ಚು ಪ್ರಚಾರ ನೀಡಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ಶೀಘ್ರ ತಲುಪಿಸಲು ಕ್ರಮವಹಿಸಬೇಕು ಎಂದು ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಅವರು ಮಾತನಾಡಿ, 2025–26 ನೇ ಸಾಲಿನ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಜುಲೈ ಅಂತ್ಯದವರೆಗೆ ವಿವಿಧ ಇಲಾಖೆಗಳಿಗೆ ಒಟ್ಟಾರೆ ರೂ.43128.48 ಲಕ್ಷ ಅನುದಾನ ಹಂಚಿಕೆಯಾಗಿದೆ. ಅದರಲ್ಲಿ ರೂ.8557.99 ಲಕ್ಷ ಬಿಡುಗಡೆಯಾಗಿದ್ದು, ಈ ಪೈಕಿ ರೂ.7848.60 ಲಕ್ಷ ಮಾತ್ರ ಖರ್ಚು ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಬಿಡುಗಡೆಯಾದರು ಅನುದಾನವನ್ನು ಖರ್ಚು ಮಾಡಿಲ್ಲವೆಂದರೆ ಅದು ತಪ್ಪಾಗಲಿದೆ. ಬಾಕಿಯಿರುವ ಎಲ್ಲಾ ಅನುದಾನವನ್ನು ಸೆಪ್ಟೆಂಬರ್ ಅಂತ್ಯದೊಳಗೆ ಬಳಸಿಕೊಳ್ಳಬೇಕು. ಇಲ್ಲವಾದಲ್ಲಿ ಅನುದಾನ ಕೈ ತಪ್ಪುತ್ತದೆ ಎಂದು ಜಿಲ್ಲಾಧಿಕಾರಿಯವರು ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ ಪ್ರಗತಿಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಇಲಾಖೆಯು ನಿಧಾನಗತಿಯಲ್ಲಿದ್ದು, ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಂದ ಅಗತ್ಯ ಮಾಹಿತಿ ಸಲ್ಲಿಸುವಂತೆ ಯೋಜನಾ ನಿರ್ದೇಶಕರಿಗೆ ಪತ್ರ ಬರೆಯಿರಿ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

ಕೆಲ ಇಲಾಖೆಗಳು ವಿವಿಧ ಕಾಮಗಾರಿಗಳಿಗಾಗಿ ಹಣ ವ್ಯಯಿಸಿ ಕೆಲಸ ಮಾಡಿಸಿರುತ್ತೀರಿ; ಆದರೆ ಬಿಲ್ ಮಾಡಿರುವುದಿಲ್ಲ, ಕೂಡಲೇ ಬಿಲ್ ಮಾಡಿ ಸಲ್ಲಿಸಬೇಕು ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮ್ಮೈರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಸೇರಿದಂತೆ ಕೃಷಿ, ತೋಟಗಾರಿಕೆ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೆ.24 ರಂದು ನಿರುಪಯುಕ್ತ ವಾಹನ ಬಹಿರಂಗ ಹರಾಜು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಗುಣ ನಿಯಂತ್ರಣ ವಿಭಾಗ ಧಾರವಾಡಕ್ಕೆ ಸೇರಿದ ಸಂಪೂರ್ಣ ನಿರುಪಯುಕ್ತ (ಟಾಟಾ ಸುಮೋ ಜೀಪ್) ವಾಹನವನ್ನು ಸೆ.24 ರಂದು ಮಧ್ಯಾಹ್ನ 01 ಗಂ–ಟೆಗೆ ನಗರದ ಕೋಟೆ ಪ್ರದೇಶದ ಪಿ.ಡಬ್ಲ್ಯೂ.ಡಿ ಕಾಂಪೌಂಡ್ ನ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಗುಣ ನಿಯಂತ್ರಣ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂದು ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಅಸಕ್ತಿಯುಳ್ಳವರು ತುಂಬಿದ ಮೊಹರ್ ಬಂದ್ ಲಕೋಟೆಯನ್ನು ಸೆ.18 ರಿಂದ ಸೆ.23 ರೊಳಗಾಗಿ ಬಳ್ಳಾರಿ ಕಚೇರಿಗೆ ಸಲ್ಲಿಸಬೇಕು.

ಇಎಮ್‌ಡಿ ಮೊತ್ತ ಹಾಗೂ ಹೆಚ್ಚಿನ ಮಾಹಿತಿಗಾಗಿ ನಗರದ ಕೋಟೆ ಪ್ರದೇಶದ ಪಿ.ಡಬ್ಲ್ಯೂ.ಡಿ ಕಾಂಪೌಂಡ್ ನ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಗುಣ ನಿಯಂತ್ರಣ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

## ರಾಜ್ಯ ಮಟ್ಟದ ಖಾದಿ ಮೇಳಕ್ಕೆ ಕೊಪ್ಪಳ ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ ಸಿಇಓ ಭೇಟಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೊಪ್ಪಳ ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಕೊಪ್ಪಳ ನಗರದ ಮುಸ್ಲಿಂ ಶಾದಿಮಹಲ್‌ನಲ್ಲಿ ಹಮ್ಮಿಕೊಂಡಿರುವ ಖಾದಿ ಉತ್ಸವ–2025ರ ರಾಜ್ಯ ಮಟ್ಟದ ಖಾದಿ, ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಶನಿವಾರ ಭೇಟಿ ನೀಡಿದರು. ವಸ್ತು ಪ್ರದರ್ಶನ ಹಾಗೂ ಮಾರಾಟ ಮಳಿಗೆಗಳನ್ನು ವೀಕ್ಷಿಸಿದ ನಂತರ ಜಿಲ್ಲಾಧಿಕಾರಿಗಳು ಮಾತನಾಡುತ್ತಾ, ಖಾದಿ, ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಉತ್ತಮ ರೀತಿಯಲ್ಲಿ ಆಯೋಜನೆ ಮಾಡಲಾಗಿದೆ. ಈ ಮೇಳದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಹಾಗೂ ಕರ್ನಾಟಕದ ವಿವಿಧ ಜಿಲ್ಲೆಗಳ ಪ್ರದರ್ಶಕರು ಭಾಗವಹಿಸಿ, ತಮ್ಮ ಉತ್ಪನ್ನಗಳಾದ ಖಾದಿ ಬಟ್ಟೆಗಳು, ರೇಷ್ಮೆ ಸೀರೆಗಳು, ಉಣ್ಣೆ ಬಟ್ಟೆಗಳು ಮತ್ತು ಇತರೆ ಗ್ರಾಮೋದ್ಯೋಗ ಉತ್ಪನ್ನಗಳನ್ನು ಯೋಗ್ಯ ಬೆಲೆಗೆ ನೇರವಾಗಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದಾರೆ. ಇದ–ರಿಂದ ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ವಸ್ತುಗಳು ಸಿಗುವುದಲ್ಲದೆ, ಎಲ್ಲಾ ಖಾದಿ ಉತ್ಪಾದಕರು ಮತ್ತು ಖಾದಿ ಗ್ರಾಮೋದ್ಯೋಗ ಉತ್ಪಾದಕರಿಗೆ ತುಂಬಾ ಅನುಕೂಲವಾಗುತ್ತಿದೆ ಎಂದರು. ಸೆಪ್ಟೆಂಬರ್ 2ರ ವರೆಗೆ ನಡೆಯಲಿರುವ ರಾಜ್ಯ ಮಟ್ಟದ ಖಾದಿ, ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಕೊಪ್ಪಳ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ನಮ್ಮ ದೇಶೀಯ ಗ್ರಾಮೋದ್ಯೋಗ ಉತ್ಪನ್ನಗಳನ್ನು ಖರೀದಿ ಮಾಡುವ ಮೂಲಕ ಖಾದಿ ಉತ್ಪಾದಕರು ಮತ್ತು ಖಾದಿ ಗ್ರಾಮೋದ್ಯೋಗ ಉತ್ಪಾದಕರಿಗೆ ಮತ್ತು ಅವರ ಕಲೆಗೆ ಪ್ರೋತ್ಸಾಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಹೇಳಿದರು.

ಆ. 24ರಿಂದ ಆರಂಭಗೊಂಡ ಖಾದಿ, ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಕ್ಕೆ ಕೊಪ್ಪಳ ಜಿಲ್ಲೆಯ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ. ರಿಯಾಯತಿ ದರದಲ್ಲಿ ಖಾದಿ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದ್ದು, ಇಲ್ಲಿಯವರೆಗೆ 81.20 ಲಕ್ಷ ಮೌಲ್ಯದ ಖಾದಿ ಉತ್ಪನ್ನಗಳು ಮಾರಾಟವಾಗಿವೆ. ಈ ಮೇಳವು ಸೆ.2 ರವರೆಗೆ ಇನ್ನೂ ಮೂರು ದಿನಗಳ ಕಾಲ ನಡೆಯಲಿದ್ದು, ಇನ್ನು ಹೆಚ್ಚಿನ ಜನರು ಈ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಭೇಟಿ ನೀಡಿ ಖಾದಿ ಉತ್ಪನ್ನಗಳನ್ನು ಖರೀದಿಸಿ ಪ್ರೋತ್ಸಾಹಿಸಬೇಕೆಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಕೊಪ್ಪಳ ಜಿಲ್ಲಾ ಅಭಿವೃದ್ಧಿ ಅಧಿಕಾರಿ ಕೆ.ವಿರೇಶ್ ಅವರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ನಿವೃತ್ತ ಖಾದಿ ಮತ್ತು ಗ್ರಾಮೋದ್ಯಾಗಾಧಿಕಾರಿ ಎನ್.ಜಿ ಹುನಗುಂದ ಸೇರಿದಂತೆ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಕೊಪ್ಪಳ ಕಛೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸೆ.04 ರಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 13 ನೇ ಘಟಿಕೋತ್ಸವ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.01–ಳ್ಳಾರಿ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ 13 ನೇ ವಾರ್ಷಿಕ ಘಟಿಕೋತ್ಸವವು ಸೆ.04 ರಂದು ಬೆಳಿಗ್ಗೆ 11 ಗಂ–ಟೆಗೆ ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಜರುಗಲಿದೆ.

ಕರ್ನಾಟಕ ರಾಜ್ಯದ ರಾಜ್ಯಪಾಲರು ಹಾಗೂ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಅಧ್ಯಕ್ಷತೆ ವಹಿಸುವರು.

ನವದೆಹಲಿಯ ಇಂಟರ್‌ಯುನಿವರ್ಸಿಟಿ ಎಕ್ಸಲರೇಟರ್ ನ ನಿರ್ದೇಶಕರಾದ ಪ್ರೊ.ಅವಿನಾಶ್ ಚಂದ್ರ ಪಾಂಡೆ ಅವರು ಘಟಿಕೋತ್ಸವ ಭಾಷಣ ಮಾಡುವರು.

ಸಮಾರಂಭದಲ್ಲಿ ರಾಜ್ಯದ ಉನ್ನತ ಶಿಕ್ಷಣ ಸಚಿವರು ಹಾಗೂ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್, ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಪ್ರೊ.ಎಂ.ಮುನಿರಾಜು, ಕುಲಸಚಿವರಾದ ನಾಗರಾಜು.ಸಿ ಹಾಗೂ ಕುಲಸಚಿವರಾದ(ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ ಸೇರಿದಂತೆ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ ಸದಸ್ಯರು ಉಪಸ್ಥಿತರಿರುವರು ಎಂದು ವಿವಿ ಪ್ರಕಟಣೆ ತಿಳಿಸಿದೆ.

## ಸರ್ವರಿಗೂ ಸಂವಿಧಾನ ಮತ್ತು ಕಾನೂನಿನ ಅರಿವು ಅಗತ್ಯ–ಹಿರಿಯ ನ್ಯಾಯಾಧೀಶರು ಮಹಾಂತೇಶ ದರಗದ.

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ನಗರದ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಸಭಾ ಭವನದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮತ್ತು ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿಯ ಶಿಬಿರಾರ್ಥಿಗಳಿಗೆ ಸಂವಿಧಾನ ಮತ್ತು ಕಾನೂನು ತಿಳುವಳಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.




ಕಾರ್ಯಕ್ರಮವನ್ನು ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಸಂವಿಧಾನವು ಸರ್ವರಿಗೂ ಸಮಪಾಲು ಸಮಬಾಳು ಸಮಾನತೆಯನ್ನು ಸಾರುತ್ತಾ ನಮ್ಮಲ್ಲಿ ಐಕ್ಯತಾ ಮನೋಭಾವ ರಾಷ್ಟ್ರ ಪ್ರೇಮದೊಂದಿಗಿನ ಬದುಕು ಮತ್ತು ಹಕ್ಕು ನೀಡಿದೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ಹಾಗೂ ಅವರ ಸಮಿತಿಯ ಎಲ್ಲಾ ಹಿರಿಯರು ತುಂಬಾ ಶ್ರಮವಹಿಸಿ ಸರ್ವ ಸಮುದಾಯದ ಏಳ್ಗೆಗಾಗಿ ದೇಶದ ಅಭಿವೃದ್ಧಿಗಾಗಿ ರಚಿಸಿದ್ದಾರೆ ನಾವು ಪಾಲಿಸಬೇಕಿದೆ ಎಂದರು. ಕಾನೂನು ಎಲ್ಲರಿಗೂ ಒಂದೇ ಅದರ ತಿಳುವಳಿಕೆಯ ಅಗತ್ಯವಿದೆ ಎಂದರು.

ಇದೇ ವೇಳೆ ಉಪನ್ಯಾಸಕರಾದ ಲಕ್ಷ್ಮೀಕಾಂತ, ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮುಂಡರಗಿಮಠ, ಬಿ.ಎನ್.ಹೊರಪೇಟಿ, ಗೀತಾ, ಗಂಗಾ ಮತ್ತು ಶಿಬಿರಾರ್ಥಿಗಳು ಉಪಸ್ಥಿತಿ ಇದ್ದರು.

## ಹೆಚ್.ಐ.ವಿ. ಏಡ್ಸ್: ಬೈಕ್ ರ್ಯಾಲಿ ಮೂಲಕ ಜಾಗೃತಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಹೆಚ್.ಐ.ವಿ. ಏಡ್ಸ್ ಕುರಿತು ಬೈಕ್ ರ್ಯಾಲಿ ಮೂಲಕ ಕೊಪ್ಪಳದಲ್ಲಿ ಶನಿವಾರದಂದು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಮಟ್ಟದ ತೀವ್ರಗೊಂಡ ಐಇಸಿ ಅಭಿಯಾನ (ಖಟಿಣಜಟಿಜಿಜಜ ಖಇಅ ಅಚಿಟಠಿಚಿರಿಟಿ) ಅಂಗವಾಗಿ "ಬೈಕ್ ರ್ಯಾಲಿ" ಕಾರ್ಯಕಮವನ್ನು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಬೈಕ್ ರ್ಯಾಲಿಗೆ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಎ. ಶಶಿಧರ ಅವರು ಜಿಲ್ಲಾಡಳಿತ ಭವನದ ಆಚರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಕೆ.ಎಸ್. ಆಸ್ಪತ್ರೆಯ ನಿರ್ವಾಹಕ ಪ್ರದೀಪ್ ಸೋಮಲಾಪುರ, ಸನಾತನ ಹಿಂದೂ ಮಹಾಮಂಡಳಿ ಕೊಪ್ಪಳದ ಗೌರವ ಅಧ್ಯಕ್ಷರಾದ ಶೇಖರಪ್ಪ ಮುತ್ತೇನವರ್ ಸೇರಿದಂತೆ ವಿವಿಧ ಸಂಸ್ಥೆಯವರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಬೈಕ್ ರ್ಯಾಲಿಯು ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭಗೊಂಡು ಗಂಜ್ ಸರ್ಕಲ್, ಅಶೋಕ ಸರ್ಕಲ್, ಬಸ್‌ಸ್ಟ್ಯಾಂಡ್ ಮಾರ್ಗವಾಗಿ ಲೇಬರ್ ಸರ್ಕಲ್ ಮುಖಾಂತರ ಗಡಿಯಾರ ಕಂಬ, ಶ್ರೀ ಗವಿಸಿದ್ದೇಶ್ವರ ಪದವಿ ಮಹಾವಿದ್ಯಾಲಯದಿಂದ ಪುನಃ ಜಿಲ್ಲಾಧಿಕಾರಿಗಳ ಕಾರ್ಯಾಲಯದವರೆಗೆ ನಡೆಯಿತು.

ಈ ಬೈಕ್ ರ್ಯಾಲಿಯಲ್ಲಿ 120 ಕ್ಕೂ ಹೆಚ್ಚು ಬೈಕ್ ಸವಾರರು ಬೈಕ್‌ಗಳೊಂದಿಗೆ ಹಾಜರಾಗಿದ್ದರು. ಡ್ಯಾಪ್ಕೂ, ಐಸಿಟಿಸಿ, ಎ.ಆರ್.ಟಿ., ಡಿ.ಎಸ್.ಆರ್.ಸಿ. ಎನ್.ಟಿ.ಇ.ಪಿ. ಸಿಬ್ಬಂದಿಗಳು, ಕೊಪ್ಪಳದ ಸ್ನೇಹಾ ಮಹಿಳಾ ಸಂಘ (ಎಫ್.ಎಸ್.ಡಬ್ಲ್ಯೂ ಮತ್ತು ಎಂ.ಎಸ್.ಎಂ.ಟಿಐ), ಚೈತನ್ಯ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಸಂರಕ್ಷ ಸಂಸ್ಥೆ, ಇನ್ವಾಲ್ವ್ ಲರ್ನಿಗ್ ಸಲ್ಯೂಷನ್ ಫೌಂಡೇಷನ್ ಮತ್ತು ಸನಾತನ ಹಿಂದೂ ಮಹಾಮಂಡಳಿಯ ಯುವಕರು, ವಿವಿಧ ಇಲಾಖೆಯ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

**CITATION**
**IN THE COURT OF THE PRL.CIVIL JUDGE AND JMFC., AT HUMNABAD**
**CRL. MISC. NO.1544/2025**

Petitioners:-

1) Laal Bee Wo late Mainuddin Age 83 Yrs Occu Labour Ro Village Walkhindi Advocate- DINESH YENKUR

2) P-2 Mohammed Ismail So Late Mohammed Moinuddin Age 57 Yrs Occu Labour Ro Walkhindi Now at Bahadurpura Hyderabad Telangana

3) P-3 Salimuddin So Late Mainuddin Age 61 Yr Occu Labour Ro Village Walkhindi

4) P-4 Md. Sarvar So Late Riyazuddin Age 39 Yrs Occu Labour Ro Village Ghodwadi Tq Humnabad

5) P-5 Shaik Ismail Be Wo Late Shamshpoddin Age 50 Yr Ro Walkhindi Now at Alwal Tirumalagiri Bolarum Hydrabad Telangana

Respondent :-

The Registrar of Birth and Death through the Tahsildar Chitaguppa.

Sub:- Petition U/Sec 13(3) of Birth and Death Registration Act 1969

Whereas the above named petitationers have filed the petition under section 13(3) of Birth and Death Registration Act 1969 praying this Honorable court to issue Death certificate of son of petitioner No.1 and borther of the petitioner No.2 and 3, uncle of the petitioner No.4, wife of petitioner No.5 namely; LATE. SHAMASHODDIN S/O MAINODDIN, who died on 30-01-2004 at, Village Walkhindi Tq Chitguppa Dist: Bidar. The petitioners claiming the death certificate of said SHAMASHODDIN S/O MAINODDIN, sutar for transfer of property and other official purpose and home record.

Therefore, it is hereby proclaimed that if any persons have got any objection in this regard , may approach to this court on 06.10.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court ,this the 23-08-2024

**//By order of the court //**
**(Mahananda Mathapati)**
**Chief Ministerial Officer,**
**Prl. Civil Judge and JMFC court**
**Humnabad.**

**CITATION**
**IN THE COURT OF THE PRL.CIVIL JUDGE AND JMFC., AT HUMNABAD**
**CRL. MISC. NO.1545/2025**

Petitioners:-

1) Laal Bee Wo late Mainuddin Age 83 Yrs Occu Labour Ro Village Walkhindi Advocate- DINESH YENKUR

2) P-2 Mohammed Ismail So Late Mohammed Moinuddin Age 57 Yrs Occu Labour Ro Walkhindi Now at Bahadurpura Hyderabad Telangana

3) P-3 Salimuddin So Late Mainuddin Age 61 Yr Occu Labour Ro Village Walkhindi

4) P-4 Md. Sarvar So Late Riyazuddin Age 39 Yrs Occu Labour Ro Village Ghodwadi Tq Humnabad

5) P-5 Shaik Ismail Be Wo Late Shamshpoddin Age 50 Yr Ro Walkhindi Now at Alwal Tirumalagiri Bolarum Hydrabad Telangana

Respondent :-

The Registrar of Birth and Death through the Tahsildar Chitaguppa.

Sub:- Petition U/Sec 13(3) of Birth and Death Registration Act 1969

Whereas the above named petitationers have filed the petition under section 13(3) of Birth and Death Registration Act 1969 praying this Honorable court to issue Death certificate of son of petitioner No.1 and borther of the petitioner No.2 and 3, uncle of the petitioner No.4, wife of petitioner No.5 namely; LATE. Alamoddin S/O Mainoddin, who died on 07-03-2006 at, Village Walkhindi Tq Chitguppa Dist: Bidar. The petitioners claiming the death certificate of said Alamoddin S/O Mainoddin, sutar for transfer of property and other official purpose and home record. Therefore, it is hereby proclaimed that if any persons have got any objection in this regard , may approach to this court on 06.10.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court ,this the 23-08-2024

//By order of the court //
(Mahananda Mathapati)
Chief Ministerial Officer,
Prl. Civil Judge and JMFC court
Humnabad.

# ತಳಗಿಹಾಳ, ಇಲಾಳ 24/7 ನೀರು ಸರಬರಾಜು ಗ್ರಾಮಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ಜಲಜೀವನ್ ಮಿಷನ್ ಹಾಗೂ ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿಯಲ್ಲಿ ಬಾಗಲಕೋಟೆ ತಾಲೂಕಿನ ಬೆಣ್ಣೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಇಲಾಳ ಹಾಗೂ ತಳಗಿಹಾಳ ಗ್ರಾಮಗಳನ್ನು 24/7 ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮಗಳೆಂದು ಘೋಷಣೆ ಮಾಡಲಾಗಿದೆ.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನಿರ್ದೇಶನದ ಮೇರೆಗೆ ಬಾಗಲಕೋಟೆ ತಾಲೂಕಿನ ಬೆಣ್ಣೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಇಲಾಳ ಹಾಗೂ ತಳಗಿಹಾಳ ಗ್ರಾಮಗಳನ್ನು 24/7 ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮವೆಂದು ಆಗಸ್ಟ 30 ರಂದು ಘೋಷಣೆ ಮಾಡಲಾಗಿದ್ದು, ಇದರಿಂದಾಗಿ ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮಗಳೆಂದು ಜಿಲ್ಲೆಯಲ್ಲಿ ಘೋಷಣೆಯಾದ ಮೂರು ಮತ್ತು ನಾಲ್ಕನೇ ಗ್ರಾಮಗಳಾಗಿವೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ, ಈ ಸಂದರ್ಭದಲ್ಲಿ ಮಾತನಾಡಿ, ಎರಡೂ ಗ್ರಾಮದಲ್ಲಿ 24/7 ಕುಡಿಯುವ ನೀರು ಸರಬರಾಜು ಆಗುತ್ತಿರುವುದಿಂದ ನೀರಿನ ಮಿತ ಬಳಕೆ, ನೀರಿನ ಗುಣಮಟ್ಟ, ಕಾರ್ಯಾಚರಣೆ ನಿರ್ವಹಣೆ ಕುರಿತು ಗ್ರಾಮಸ್ಥರ ಮೇಲ್ವಿಚಾರಣೆಯಲ್ಲಿ ನಿರ್ವಹಿಸುವಂತೆ ತಿಳಿಸಿದರು.

ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಹಾಗೂ ಜಿಲ್ಲಾ ನೋಡಲ್ ಅಧಿಕಾರಿ ಮಲ್ಲನಗೌಡ ಬಿರಾದಾರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಚ್.ಕೆ.ಹುಬ್ಬಳ್ಳಿ, ಫೀಡ್ ಬ್ಯಾಕ್ ಫೌಂಡೇಶನ್ ರಾಜ್ಯ ಸಮಾಲೋಚಕ ನಂದಕುಮಾರ್, ಗ್ರಾಮ ನೀರು ನೈರ್ಮಲ್ಯ ಸಮಿತಿ ಅಧ್ಯಕ್ಷರು ಹಾಗೂ ಗ್ರಾಮ ಪಂಚಾಯತಿ ಸದಸ್ಯರು, ಶಾಖಾಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಯೋಜನಾ ವ್ಯವಸ್ಥಾಪಕ ಪರಶುರಾಮ ಗಾಣಿಗೇರ, ಡಿ.ಟಿ.ಎಸ್.ಯು ಸಮಾಲೋಚಕರು, ಪಂಚಾಯತಿ ಸಿಬ್ಬಂದಿ, ಗ್ರಾಮಸ್ಥರು ಉಪಸ್ಥಿತರಿದ್ದರು.

# ಜಿಲ್ಲಾ, ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ದಿನಾಚರಣೆ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವ ಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲು ಉದ್ದೇಶಿಸಲಾಗಿದೆ. ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ 31 ಸಾವಿರ ರೂ., ದ್ವಿತೀಯ 21 ಸಾವಿರ ರೂ. ಮತ್ತು ತೃತೀಯ 11 ಸಾವಿರ ರೂ. ಹಾಗೂ ಜಿಲ್ಲಾ ಮಟ್ಟದಲ್ಲಿ ಪ್ರಥಮ 3 ಸಾವಿರ ರೂ., ದ್ವಿತೀಯ 2 ಸಾವಿರ ರೂ ಮತ್ತು ತೃತೀಯ 1 ಸಾವಿರ ರೂ. ಬಹುಮಾನ ನೀಡಲಾಗುತ್ತದೆ.

ಪ್ರೌಢಶಾಲಾ ವಿಭಾಗದಲ್ಲಿ 1) ಸ್ವಚ್ಛತೆಯ ಪಾಠ-ಗಾಂಧೀಜಿಯವರ ಸಂದೇಶ 2) ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ 3) ಗಾಂಧೀಜಿಯವರ ಸ್ವಾತಂತ್ರ್ಯದ ಕನಸು-ನನ್ನ ಕಲ್ಪನೆ ಎಂಬ ವಿಷಯದ ಬಗ್ಗೆ 700 ದಿಂದ 800 ಪದಗಳಿಗೆ ಮೀರದಂತೆ ಪ್ರಬಂಧ ರಚಿಸಬೇಕು. ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ 1) ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿಯವರ ಹೋರಾಟ 2) ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗಿಕತೆ 3) ಬದಲಾವಣೆ ನನ್ನಿಂದಲೇ ಆರಂಭ-ಗಾಂಧೀಜಿಯವರ ಪಾಠ ಕುರಿತು 900 ದಿಂದ 1000 ಪದಗಳಿಗೆ ಮೀರದಂತೆ ಪ್ರಬಂಧ ರಚಿಸಬೇಕು.

ಪದವಿ, ಸ್ನಾತಕೋತ್ತರ ವಿಭಾಗದಲ್ಲಿ 1) ಗಾಂಧೀಜಿ ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ 2) ಗಾಂಧೀಜಿ ಮತ್ತು ಡಾ.ಬಿ.ಆರ್.ಅಂಬೇಡ್ಕರ-ತತ್ವಗಳ ಹೋಲಿಕೆ 3) ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜ-ಕಾರಣ-ಯುವಕರಿಗೆ ಗಾಂಧೀಜಿಯವರ ಪಾಠ ಎಂಬ ವಿಷಯದ ಮೇಲೆ 1400 ದಿಂದ 1500 ಪದಗಳಿಗೆ ಮೀರದಂತೆ ಪ್ರಬಂಧ ರಚಿಸಬೇಕು. ಪ್ರತಿ ವಿಭಾಗದಲ್ಲಿ ಯಾವುದಾದರು ಒಂದು ವಿಷಯದ ಮೇಲೆ ಪ್ರಬಂಧ ರಚಿಸಬೇಕು.

ಸ್ವರಚಿತ ಪ್ರಬಂಧಗಳನ್ನು ಸೆಪ್ಟೆಂಬರ 6 ರೊಳಗಾಗಿ ಆಯಾ ಶಾಲಾ, ಕಾಲೇಜು ಮುಖ್ಯಸ್ಥರಿಂದ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಗಲಕೋಟೆಗೆ ಸಲ್ಲಿಸಬೇಕು. ಜಿಲ್ಲಾ ಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರು ಮೌಲ್ಯಮಾಪನ ಮಾಡಿ, ರಾಜ್ಯಮಟ್ಟದ ಫಲಿತಾಂಶ ಘೋಷಿಸಲಾಗುವುದು. ಪ್ರತಿ ವಿಭಾಗದಲ್ಲಿನ ಅತ್ಯುತ್ತಮ ಮೂರು ಪ್ರಬಂಧಗಳಿಗೆ ಅಕ್ಟೋಬರ್ 2 ರಂದು ಜಿಲ್ಲಾ ಮಟ್ಟದ ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು.

ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.

ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ, ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ, ಆಧಾರ ಗ್ರಂಥಗಳು, ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಹಳೆಗನ್ನಡ ಸಾಹಿತ್ಯ ಬೋಧನಾ ತರಬೇತಿ ಶಿಬಿರಕ್ಕೆ ಡಿವಿಪಿ ಚಾಲನೆ

# ಸಾಹಿತ್ಯ ಪರಂಪರೆಯ ಅರಿವಿಗೆ ಹಳೆಗನ್ನಡ ಸಾಹಿತ್ಯ ಅಧ್ಯಯನ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ಕನ್ನಡ ನಾಡಿನ ಅಕ್ಷರ ಚರಿತ್ರೆ ಸಾರುವ ಕನ್ನಡ ಸಾಹಿತ್ಯ ಪರಂಪರೆಯ ಅರಿವಿಗೆ ಹಳೆಗನ್ನಡ ಸಾಹಿತ್ಯ ಅಧ್ಯಯನ ಮುಖ್ಯವಾಗಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿಶಾಸ್ತ್ರ ವಿಭಾಗ ಮತ್ತು ಬಾಗಲಕೋಟೆ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಕನ್ನಡ ಉಪನ್ಯಾಸಕರ ಒಕ್ಕೂಟ ಬಾಗಲಕೋಟೆ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಬಾಗಲಕೋಟೆ ಇವರ ಸಹಯೋಗದಲ್ಲಿ ಡಾ.ಡಿ.ಎಲ್.ನರಸಿಂಹಾಚಾರ್ಯ ದತ್ತಿನಿಧಿ ವತಿಯಿಂದ ನಾಲ್ಕು ದಿನಗಳ ಕಾಲ ಬಾಗಲಕೋಟೆ ಜಿಲ್ಲಾ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರ 20ನೇ ಹಳಗನ್ನಡ ಸಾಹಿತ್ಯ ಬೋಧನಾ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡದ ಶ್ರೇಷ್ಠ ವಿದ್ವಾಂಸರಾಗಿದ್ದ ಡಾ.ಡಿ.ಎಲ್.ನರಸಿಂಹಾಚಾರ್ ಅವರ ವ್ಯಾಸಂಗದ ಬಹುಮುಖ್ಯ ನೆಲೆ ಹಳಗನ್ನಡ ಸಾಹಿತ್ಯ. ಆ ಕ್ಷೇತ್ರದಲ್ಲಿ ಅವರದ್ದೇ ಆದ ಹೆಜ್ಜೆ ಗುರುತುಗಳಿವೆ. ಪಾಂಡಿತ್ಯ ಪ್ರಧಾನವಾದ ನೆಲೆಯನ್ನು ಅವರ ಬರಹಗಳಲ್ಲಿ ಕಾಣುತ್ತವೆ. ಯಾವುದೇ ಭಾಷೆಯ ಸಾಹಿತ್ಯ ಸಾಮಾಜೀಕರಣಗೊಂಡರೆ ಮಾತ್ರ ಗತಿಶೀಲ ಗುಣವನ್ನು ಹಾಗೂ ಹೊಸ ಹೊಳವು ಪಡೆಯಲು ಸಾಧ್ಯವಾಗುತ್ತದೆ ಎಂದು ಡಾ.ಪರಮಶಿವಮೂರ್ತಿ ಹೇಳಿದರು.

ಶಿಬಿರ ಉದ್ಘಾಟಿಸಿದ ಬಾಗಲಕೋಟೆ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕ ಮಂಡಲಿಕ ಕಾಂಬಳೆ, ಜಗತ್ತಿನ ಶ್ರೇಷ್ಠ ಭಾಷೆ ಕನ್ನಡವಾಗಿದ್ದು, ಕನ್ನಡ ಬಳಸಿ, ಉಳಿಸಿ ಬೆಳೆಸಬೇಕು. ಇಂದಿನ ಜನಸಾಮಾನ್ಯರಿಗೆ ಹಳೆಗನ್ನಡದ ಅರಿವು ಮುಖ್ಯ. ಕನ್ನಡ ವಿಶ್ವವಿದ್ಯಾಯದ ಹಸ್ತಪ್ರತಿಶಾಸ್ತ್ರ ವಿಭಾಗದವರು ಆಯೋಜಿಸಿರುವ ಈ ಶಿಬಿರದ ಸದುಪಯೋಗವನ್ನು ನಮ್ಮ ಅಧ್ಯಾಪಕರು ಪಡೆದು-ಕೊಂಡು ವಿದ್ಯಾರ್ಥಿಗಳಿಗೆ ಹಳಗನ್ನಡದ ಅಭಿರುಚಿ ಬೆಳೆಸಬೇಕು ಎಂದರು.

ಕರ್ನಾಟಕ ಬಯಲಾಟ ಅಕಾಡೆಮಿ ಅಧ್ಯಕ್ಷ ಡಾ.ಕೆ.ಆರ್.ದುರ್ಗಾದಾಸ ಆಶಯ ನುಡಿ ಹೇಳಿ ಪ್ರಸ್ತುತ ಸಂದರ್ಭದಲ್ಲಿ ಹಳಗನ್ನಡ ಸಾಹಿತ್ಯ ತರಬೇತಿ ಶಿಬಿರ ಅತ್ಯವಶ್ಯಕವಾಗಿದೆ. ಹಳಗನ್ನಡ ಕಬ್ಬಿಣದ ಕಡಲೆಯಲ್ಲ, ಅದು ಪಠಿಸಿದಷ್ಟು ಸರಳವಾಗುತ್ತದೆ ಎಂದರು.

ಅತಿಥಿ ಸರಕಾರಿ ಪ್ರಥಮ ದರ್ಜೆ ಕಾಲೇಜಿ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಮಾತನಾಡಿ, ಕುಮಾರವ್ಯಾಸನ ಕಾವ್ಯವನ್ನು ಹೇಳುವುದರೊಂದಿಗೆ ಹಳಗನ್ನಡ ಕಾವ್ಯದ ಗಟ್ಟಿತನವನ್ನು ನಾವೆಲ್ಲರೂ ಅರಿತು ಉಳಿಸಿಕೊಳ್ಳಬೇಕಾಗಿದೆ ಎಂದರು.

ಕನ್ನಡ ವಿವಿ ಹಸ್ತಪ್ರತಿಶಾಸ್ತ್ರ ವಿಭಾಗದ ಮುಖ್ಯಸ್ಥರು, ಶಿಬಿರದ ನಿರ್ದೇಶಕ ಡಾ.ವೀರೇಶ ಬಡಿಗೇರ ಪ್ರಾಸ್ತಾವಿಕ ಮಾತನಾಡಿ, ಇತ್ತೀಚಿಗೆ ಕನ್ನಡ ಸಾಹಿತ್ಯ ವಲಯದಲ್ಲಿ ಪ್ರಾಚೀನ ಸಾಹಿತ್ಯದ ಅಧ್ಯಯನ ತುಂಬ ಉಪೇಕ್ಷೆಗೆ ಒಳಗಾಗುತ್ತಿದೆ, ಅದಕ್ಕಾಗಿ ಪ್ರಾಚೀನ ಪಠ್ಯಗಳ ಪ್ರಸ್ತುತತೆ, ಕೃತಿವಾಚನ, ಕಥಾನಿರೂಪಣೆ, ಪಾಠಸಮಸ್ಯೆ ಬಿಡಿಸುವುದು, ಕೃತಿ, ಭಾಷೆ, ಶೈಲಿ, ಛಂದಸ್ಸಾದಿಗಳನ್ನು ಹಾಗೂ ಕೃತಿಯ ಸಾಂಸ್ಕೃತಿಕ ಪರಿಸರ ಹಾಗೂ ಅನನ್ಯತೆಯನ್ನು ಗುರುತಿಸುವುದು, ಆ ಮೂಲಕ ಶಿಕ್ಷಕ ಮತ್ತು ವಿದ್ಯಾರ್ಥಿಗಳಲ್ಲಿ ಹಳಗನ್ನಡ ಸಾಹಿತ್ಯವನ್ನು ಓದುವ, ಗ್ರಹಿಸುವ ಮತ್ತು ಆಸಕ್ತಿ ಹೆಚ್ಚಿಸುವ ಉಪಕ್ರಮಗಳನ್ನು ಕೈಗೊಳ್ಳುವುದು ಈ ಶಿಬಿರದ ಆಶಯವಾಗಿದೆ ಎಂದರು. ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಕನ್ನಡ ಉಪನ್ಯಾಸಕರ ಒಕ್ಕೂಟದ ಜಿಲ್ಲಾಧ್ಯಕ್ಷ ಡಾ.ಸಿದ್ಧರಾಮ ಖಾನಾಪೂರ, ಸ್ಥಳಿಯ ಸಂಚಾಲಕ ಡಾ.ಚಂದ್ರಶೇಖರ ಕಾಳನ್ನವರ ವೇದಿಕೆ ಮೇಲೆ ಉಪಸ್ಥಿತರಿದ್ದರು. ವಿವಿಧ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರು ಶಿಬಿರಾರ್ಥಿಗಳಾಗಿ ಪಾಲ್ಗೊಂಡಿದ್ದರು. ಬಸಲಿಂಗಯ್ಯ ಮಠಪತಿ ಪ್ರಾರ್ಥಿಸಿದರು, ಡಾ.ಸಿದ್ಧರಾಮ ಖಾನಾಪೂರ ಸ್ವಾಗತಿಸಿದರು. ಸಂಗಮೇಶ ಬ್ಯಾಳಿ ವಂದಿಸಿದರು.

# ಕಲಾವಿದರ ಮಾಸಾಶನಕ್ಕೆ ಜೀವಿತ ಪ್ರಮಾಣ ಪತ್ರ ಸಲ್ಲಿಕೆಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಈಗಾಗಲೇ ಮಾಸಾಶನ ಪಡೆಯುತ್ತಿರುವ ಕಷ್ಟ ಪರಿಸ್ಥಿತಿಯಲ್ಲಿರುವ ಸಾಹಿತಿ, ಕಲಾವಿದರಿಗೆ ಹಾಗೂ ಮೃತಪಟ್ಟ ಕಲಾವಿದರ ಪತ್ನಿಯರಿಗೆ ನೀಡುವ ಮಾಸಾಶನಕ್ಕೆ ಸಂಬಂದಪಟ್ಟಂತೆ ಪ್ರತಿ 6 ತಿಂಗಳಿಗೊಮ್ಮೆ ಆರ್ಥಿಕ ವರ್ಷದ ಮಾರ್ಚ ಹಾಗೂ ಸೆಪ್ಟೆಂಬರ ಮಾಹೆಯಲ್ಲಿ ಜೀವಿತ ಪ್ರಮಾಣ ಪತ್ರ ಪಡೆದು ವಿಭಾಗೀಯ ಜಂಟಿ ನಿರ್ದೇಶಕರ ಮೂಲಕ ಕೇಂದ್ರ ಕಚೇರಿಗೆ ವರದಿ ಸಲ್ಲಿಸಬೇಕಾಗಿದೆ.

ಇಲಾಖೆಯಿಂದ ಮಾಸಾಶನ ಪಡೆಯುತ್ತಿರುವ ಸಾಹಿತಿ, ಕಲಾವಿದರು ಸೆಪ್ಟೆಂಬರ ಮಾಹೆಯೊಳಗೆ ಆಧಾರ ಕಾರ್ಡ, ಪಿಂಚಣಿ ಪುಸ್ತಕ, ಬ್ಯಾಂಕ್ ಪಾಸ್‌ಬುಕ್ ಹಾಗೂ ಐಡೆಂಟಿಟಿ ಅಳತೆಯ ಪೋಟೋಗಳೊಂದಿಗೆ ಜೀವಿತ ಪ್ರಮಾಣವನ್ನು ಖುದ್ದಾಗಿ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354-200500ಗೆ ಸಂಪರ್ಕಿಸಬಹುದಾಗಿದೆ.

# ಕೊಪ್ಪಳ ಇನ್ನರ್ ವೀಲ್ ಕ್ಲಬ್ : ಗಣೇಶ ಹಬ್ಬದ ಪ್ರಯುಕ್ತ ರಂಗೋಲಿ ಸ್ಪರ್ಧೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ನಗರದ ಗವಿಶ್ರೀ ನಗರದ ಮೂರನೇ ಕ್ರಾಸಿನಲ್ಲಿ ಗಣೇಶ ಹಬ್ಬದ ಪ್ರಯುಕ್ತ ಮಹಿಳೆಯರಿಗೆ ರಂಗೋಲಿ ಸ್ಪರ್ಧೆಯನ್ನು ಕೊಪ್ಪಳ ಇನ್ನರ್ ವೀಲ್ ಕ್ಲಬ್ ಏರ್ಪಡಿಸಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದ ಪ್ರಥಮ, ದ್ವಿತೀಯ, ತೃತೀಯ ಬಹುಮಾನಗಳನ್ನು ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಲಕ್ಷ್ಮಿ ಸಿ.ವಿ.ಚಂದ್ರಶೇಖರ್ ವಿತರಿಸಿದರು.

ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಮಧುಶೆಟ್ಟರ್, ಐಖಓ ಹೇಮಾ ಬಳ್ಳಾರಿ, ಡಿಸ್ಟಿಕ್ ಐಖಓ ಶರಣಮ್ಮ ಪಾಟೀಲ್, ಸಂಪಾದಕಿ ಸುಧಾ ಶೆಟ್ಟರ್, ಇನ್ನರ್ ವೀಲ್ ಕ್ಲಬ್ ಸದಸ್ಯರಾದ ಜ್ಯೋತಿ ಮಟ್ಟಿ, ಸುಜಾತ ಹಲಗೇರಿ, ರತ್ನ ಶೆಟ್ಟರ್, ಇನ್ನು ಅನೇಕ ಸದಸ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಾಲ ಮಂದಿರದ ಮಕ್ಕಳ ಅಭಿವೃದ್ಧಿಗೆ ಶ್ರಮಿಸಿ-ದಿಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ಬಾಲ ಮಂದಿರದ ಮಕ್ಕಳು ಸಮಾಜದಲ್ಲಿ ಉತ್ತಮವಾಗಿ ಬೆರೆಯುವಂತೆ ಮಾಡುವ ಮೂಲಕ ಅವರ ಸಮಗ್ರ ಮತ್ತು ಸರ್ವತೋಮುಖ ಅಭಿವೃದ್ದಿಗೆ ಶ್ರಮಿಸಬೇಕು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರಕಾರಿ ಬಾಲಕರ, ಬಾಲಕಿಯರ ಬಾಲ ಮಂದಿರ ಹಾಗೂ ಮಕ್ಕಳ ಜಾಗೃತಿ ಸಂಸ್ಥೆ ಸಹಯೋಗದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಮಕ್ಕಳ ಸರ್ವತೋಮುಖ ಬೆಳವಣಿಗೆಯ ಕುರಿತು ನಡೆದ ಸಮಾಲೋಚನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ಮಗುವಿನಲ್ಲೂ ಒಂದೊಂದು ಪ್ರತಿಭೆ, ಕಲೆ, ಕೌಶಲ್ಯ ಹಾಗೂ ನೈಪುಣ್ಯತೆ ಇರುತ್ತದೆ. ಅದನ್ನು ಗುರುತಿಸಿ ಅವರು ಸಮಾಜದಲ್ಲಿ ಉತ್ತಮವಾಗಿ ಬೆಳೆಯುವಂತೆ ಮಾಡಬೇಕು. ಪ್ರತಿ ತಿಂಗಳು ಬಾಲ ಮಂದಿರಗಳಿಗೆ ಭೇಟಿ ಮಾಡಿದಾಗ ಮಕ್ಕಳಲ್ಲಿ ಸಾಕಷ್ಟು ಪ್ರಗತಿ ಕಂಡುಬಂದಿದೆ. ಅದೇ ರೀತಿ ಇನ್ನು ಹೆಚ್ಚು ಕಾರ್ಯಗಳು ನಡೆಯಲಿ ಎಂದು ದಿಡ್ಡಿ ಆಶಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಮಕ್ಕಳು ತಮಗೆ ದೊರೆಯಬೇಕಾದ ಸೌಲಭ್ಯಗಳನ್ನು ಪಡೆಯುವ ಮೂಲಕ ಧೈರ್ಯ, ಛಲದಿಂದ ಬದುಕು ಕಟ್ಟಿಕೊಳ್ಳಬೇಕು. ಜಿಲ್ಲಾ ಆಡಳಿತ ಪ್ರತಿ ಹಂತದಲ್ಲಿಯೂ ಬಾಲಮಂದಿರದ ಮಕ್ಕಳ ಜೊತೆಗೆ ಇರುತ್ತದೆ. ಅಗತ್ಯ ಸೌಲಭ್ಯ ಪಡೆಯಲು ಹೆದರಬೇಕಿಲ್ಲ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಬಾಲಮಂದಿರದಲ್ಲಿರುವ ಮಕ್ಕಳಲ್ಲಿ ವಿವಿಧ ಪ್ರತಿಭೆಯಿದ್ದು, ಆ ಪ್ರತಿಭೆಗಳನ್ನು ಹೊರತರುವ ನಿಟ್ಟಿನಲ್ಲಿ ಸಿಬ್ಬಂದಿಗಳು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಶ್ರಮಿಸಬೇಕು ಎಂದರಲ್ಲದೇ, ಬಾಲಮಂದಿರಗಳ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಪ್ರಭಾಕರ ಕೆ, ಮಾತನಾಡಿ, ಸರ್ಕಾರಿ ಬಾಲಮಂದಿರದ ಮಕ್ಕಳಿಗಾಗಿ ಜಿಲ್ಲಾ ಆಡಳಿತದಿಂದ ಸಾಕಷ್ಟು ಸಹಕಾರ ದೊರೆಯುತ್ತಿದ್ದು, ಇಲಾಖೆ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚು ಕಾಳಜಿ ವಹಿಸಿ ಜಿಲ್ಲೆಗೆ ಕೀರ್ತಿ ತರುವ ನಿಟ್ಟಿನಲ್ಲಿ ಕೆಲಸ ಮಾಡಲಿದೆ ಎಂದರು.

ಸರ್ಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕಿ ಜಯಮಾಲಾ ದೊಡಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಮಕ್ಕಳ ಕೇಂದ್ರಿತ ಕೈಪಿಡಿಯನ್ನು ಬಿಡುಗಡೆಗೊಳಿಸಲಾಯಿತು. ಸಭೆಯಲ್ಲಿ ಬೆಂಗಳೂರು ಮಕ್ಕಳ ಜಾಗೃತಿ ಸಂಸ್ಥೆಯ ಪ್ರೀತಿ, ಜಿಲ್ಲಾ ಆರೋಗ್ಯ ಇಲಾಖೆಯ ಶಿವನಗೌಡ ಪಾಟೀಲ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯ ಸಿದ್ದನಗೌಡ ಅರಸಿಕೆರೆ ಸೇರಿದಂತೆ ವಿವಿಧ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರು ಉಪಸ್ಥಿತರಿದ್ದರು.

# ಚಿಕ್ಕಮುಚ್ಚಳಗುಡ್ಡ ಶಾಲೆ ರಾಜ್ಯಮಟ್ಟಕ್ಕೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1-ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕದ ಸಂಯುಕ್ತ ಆಶ್ರಯದಲ್ಲಿ ಯುಜನೋತ್ಸವ-2025 ರ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಈಚೆಗೆ ಜರುಗಿದ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲೆಯ ಬಾಗಲಕೋಟೆ, ಬಾದಾಮಿ, ಬಿಳಗಿ, ಹುನಗುಂದ ತಾಲೂಕಿನ ಸರಕಾರಿ, ಅನುದಾನ, ಅನುದಾನ ರಹಿತ ಪ್ರೌಢ ಶಾಲೆಗಳ 8 ಮತ್ತು 9 ನೇ ತರಗತಿಯ ವಿದ್ಯಾರ್ಥಿಗಳಿಗೆ ಜಿಲ್ಲಾ ಆರೋಗ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಭವನದಲ್ಲಿ ಜರುಗಿದ್ದ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಚಿಕ್ಕಮುಚ್ಚಳಗುಡ್ಡ ಸರಕಾರಿ ಆದರ್ಶ ವಿದ್ಯಾಲಯದ (ಆರ್.ಎಂ.ಎಸ್‌ಎ) ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ದ್ವಿತೀಯ ಸ್ಥಾನವನ್ನು ಹುನಗುಂದ ವಿಜಯ ಮಹಾಂತೇಶ ಬಾಲಕಿಯರ ಪ್ರೌಢಶಾಲೆ ಪಡೆದರೆ, ತೃತೀಯ ಸ್ಥಾನವನ್ನು ನವನಗರದ ಶರಣ ಬಸವೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ಪಡೆದುಕೊಂಡರು. ವಿಜೇತರಿಗೆ ಪ್ರಥಮ 6 ಸಾವಿರ, ದ್ವಿತೀಯ 5 ಸಾವಿರ ಹಾಗೂ ತೃತೀಯ 4 ಸಾವಿರ ರೂ.ಗಳ ನಗದು, ಪ್ರಮಾಣ ಪತ್ರ ಹಾಗೂ ಮೆಡಲ್‌ಗಳನ್ನು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಸುವರ್ಣ ಕುಲಕರ್ಣಿ ಅವರು ವಿತರಿಸಿದರು.



ರಸಪ್ರಶ್ನೆ ಸ್ಪರ್ಧೆಯಲ್ಲಿ ಬಾಗಲಕೋಟೆ, ಬಾದಾಮಿ, ಬೀಳಗಿ, ಹುನಗುಂದ ತಾಲೂಕಿನ ಒಟ್ಟು 41 ಪ್ರೌಢ ಶಾಲೆಯ ಒಟ್ಟು 82 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕದ ಜಿಲ್ಲಾ ಮೇಲ್ವಿಚಾರಕ ಎಂ.ಎಚ್.ಸುಭೇದಾರ ನಡೆಸಿಕೊಟ್ಟರು.

# ಛಾಯಾಗ್ರಾಹಕರ ಅಭಿವೃದ್ಧಿಗೆ ಅಗತ್ಯ ಸಹಕಾರ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಸೆ.1:ಕಾರ್ಯಕ್ರಮಗಳು, ಜೀವನದ ಸವಿ ನೆನಪುಗಳನ್ನು ಶಾಶ್ವತವಾಗಿ ನಮ್ಮ ನೆನಪಿನಲ್ಲಿ ಇರಿಸಲು ಪ್ರಮುಖ ಪಾತ್ರವಹಿಸುವ ಛಾಯಾಗ್ರಾಹಕರ ಅಭಿವೃದ್ಧಿಗೆ ನನ್ನ ಸಹಕಾರ ಸದಾ ಇರುತ್ತದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.



ಕರ್ನಾಟಕ ಛಾಯಾಚಿತ್ರಗ್ರಾಹಕರ ಸಂಘ, ಔರಾದ(ಬಿ) ತಾಲ್ಲೂಕಾ ಫೋಟೊಗ್ರಾಫರ್ ಅಸೋಸಿಯೇಷನ್ ವತಿಯಿಂದ ಔರಾದ(ಬಿ) ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಸೆ.1ರಂದು ಏರ್ಪಡಿಸಿದ್ದ 186ನೇ ವಿಶ್ವ ಛಾಯಾಗ್ರಹಣ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಒಂದು ಛಾಯಾಚಿತ್ರ ಸಾವಿರ ಪದಗಳನ್ನು ಹೇಳುತ್ತದೆ. ಜೀವನದ ಪ್ರತಿ ಶುಭ ಸಂದರ್ಭದಲ್ಲಿಯೂ ಛಾಯಾಗ್ರಾಹಕರು ಅವಶ್ಯಕತೆಯಿದೆ ಎನ್ನುವಷ್ಟು ಛಾಯಾಗ್ರಹಣದ ಮಹತ್ವ ಹೆಚ್ಚಾಗಿದೆ. ಹಿಂದೆ ನಡೆದ ಶುಭ ಸಂದರ್ಭಗಳನ್ನು ಛಾಯಾಚಿತ್ರದ ಮೂಲಕ ನೋಡಬಹುದು. ಸಮಾಜದಲ್ಲಿ ಛಾಯಾಗ್ರಾಹಕರ ಪಾತ್ರ ಹೆಚ್ಚಿನ ಪ್ರಮಾಣದಲ್ಲಿದೆ. ತಾವು ಶಿಸ್ತು, ಸಂಯಮದಿಂದ ಕೆಲಸ ಮಾಡಬೇಕು. ತಮ್ಮ-ತಮ್ಮಲ್ಲೇ ಸ್ಪರ್ಧೆಗೆ ಇಳಿಯದೇ ತಮ್ಮ ಸಂಘಟನೆಯನ್ನು ಬಲಪಡಿಸಿಕೊಂಡು ಎಲ್ಲ ಛಾಯಾಗ್ರಾಹಕರ ಹಿತದೃಷ್ಟಿಯಿಂದ ಕೆಲಸ ಮಾಡಬೇಕೆಂದು ಛಾಯಾಗ್ರಾಹಕರಿಗೆ ಕಿವಿಮಾತು ಹೇಳಿದರು. ಛಾಯಾಗ್ರಾಹಕರ ಹಿತದೃಷ್ಟಿಯಿಂದ ವಯಕ್ತಿಕವಾಗಿ ಮತ್ತು ಸರ್ಕಾರದಿಂದಲೂ ಅವಕಾಶಗಳು ಮತ್ತು ಸೌಲಭ್ಯಗಳನ್ನು ಕಲ್ಪಿಸಲು ಪ್ರಯತ್ನಿಸುತ್ತೇನೆ. ಏನೇ ಸಮಸ್ಯೆಯಿರಲಿ ನಾನು ನಿಮ್ಮೊಂದಿಗಿದ್ದೇನೆ. ಆತ್ಮಗೌರವದಿಂದ ಕೆಲಸ ಮಾಡಿ ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು. ಸಂಘದ ಜಿಲ್ಲಾಧ್ಯಕ್ಷ ಪವನಸಿಂಗ್ ಠಾ-ಕೂರ್ ಮಾತನಾಡಿ, ಹರಿದು ಹಂಚಿಹೋಗಿದ್ದ ಛಾಯಾಗ್ರಾಹಕರನ್ನು ಒಂದುಗೂಡಿಸಿ ಅವರಿಗೆ ಸೌಲಭ್ಯಗಳನ್ನು ಕಲ್ಪಿಸಿಕೊಡುವ ಕೆಲಸ ಸಂಘದಿಂದ ಮಾಡಲಾಗುತ್ತಿದೆ. ಎಲ್ಲ ಛಾಯಾಗ್ರಾಹಕರು ಕಡ್ಡಾಯವಾಗಿ ಸಂಘದಲ್ಲಿ ಹೆಸರು ನೋಂದಾಯಿಸಿ ಸಂಘದ ಲಾಭ ಪಡೆಯಬೇಕು. ಶಿಸ್ತು, ಸೌಜನ್ಯತೆಯನ್ನು ಮೈಗೂಡಿಸಿಕೊಂಡು ವೃತ್ತಿಪರತೆಯಿಂದ ಕೆಲಸ ಮಾಡಬೇಕೆಂದು ಸಲಹೆ ಮಾಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾಲೂಕು ಪಂಚಾಯತ್

ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಕಾರ್ಮಿಕ ಇಲಾಖೆಯ ಶ್ರೀಧರ ಪುರಮಾವರ, ಮುಖಂಡರಾದ ಶಿವರಾಜ ಅಲ್ಮಾಜೆ, ದಯಾನಂದ ಘುಳೆ, ಸಂಘದ ಪ್ರಮುಖರಾದ ನಿಸಾರ್ ಅಹ್ಮದ್, ಮಂಜುನಾಥ ಮೇತ್ರೆ, ಇಮ್ರಾನ್, ಶಿವಕುಮಾರ ಬಿರಾದಾರ, ದೇವರಾಜ ಕೋಳೆಕರ್, ಸತೀಷ ಚಾಂಡೇಶ್ವರೆ,

ರಾಜಕುಮಾರ ಬಿರಾದಾರ, ಬಾಲಾಜಿ ಕೊಳೆಕರ, ಮಲ್ಲಿಕಾರ್ಜುನ ದಾನಾ, ಜಿತೇಂದ್ರ ಸೋನಾಳ, ಶ್ರೀಕಾಂತ ಹೊಂಡೆಕರ, ಶ್ರೀಕಾಂತ ಜೋಶಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಅಮರಸ್ವಾಮಿ ಸ್ಥಾವರಮಠ ನಿರೂಪಿಸಿದರು. ಇದೇ ವೇಳೆ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಹೆಚ್ಚಿನ ಅಂಕಗಳಿಂದ ಉತ್ತೀರ್ಣರಾದ ಮತ್ತು ವೈದ್ಯಕೀಯ, ಎಂಜಿನೀಯರಿಂಗ್ ಸೀಟು ಪಡೆದ ಛಾಯಾಗ್ರಾಹಕರ ಮಕ್ಕಳಿಗೆ ಶಾಸಕರಿಂದ ಸನ್ಮಾನಿಸಲಾಯಿತು.

# ಕೊಲೆ ಆರೋಪಿಯ ಬರ್ಬರ ಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.1: ಕೊಲೆ ಪ್ರಕರಣದಲ್ಲಿ ಆರೋಪಿಯಾಗಿದ್ದ ವ್ಯಕ್ತಿಯನ್ನು ಮಾರಕಾಸ್ತ್ರದಿಂದ ಹೊಡೆದು ಹತ್ಯೆ ಮಾಡಿದ ಘಟನೆ ತಾಲ್ಲೂಕಿನ ಸೀತನೂರಿನ ಹಳ್ಳದ ಸೇತುವೆ ಮೇಲೆ ಸಂಭವಿಸಿದೆ. ಮೃತನಿಗೆ ಶಿವರಾಯ್ ಹಣಮಂತರಾಯ್ ಮಾಲಿಪಾಟೀಲ್ (65) ಎಂದು ಗುರುತಿಸಲಾಗಿದೆ. ಲಕ್ಷ್ಮೀಕಾಂತ್ ತಂದೆ ನಾಗಿಂದ್ರಪ್ಪ ಮಾಂಗ್ ಕೊಲೆ ಮಾಡಿದ ಆರೋಪಿಯಾಗಿದ್ದಾನೆ.

ನಾಗೀಂದ್ರಪ್ಪನಿಗೆ ಕಳೆದ 2008ನೇ ಸಾಲಿನಲ್ಲಿ ಶಿವರಾಯ್ ಮಾಲಿಪಾಟೀಲ್ ಹಾಗೂ ಇತರರು ಕೂಡಿಕೊಂಡು ಕೊಲೆ ಮಾಡಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಶಿವರಾಯ್ ಜೈಲಿಗೆ ಹೋಗಿ ಬಂದಿದ್ದು, ನಾಗೀಂದ್ರಪ್ಪನ ಪುತ್ರ ಲಕ್ಷ್ಮೀಕಾಂತ್ ಶಿವರಾಯ್‌ನಿಗೆ ಕೊಲೆ ಮಾಡಿ ಸೇಡು ತೀರಿಸಿಕೊಳ್ಳುವುದಾಗಿ ಹೇಳುತ್ತಿದ್ದ.

ಕಳೆದ ಭಾನುವಾರ ಬೆಳಿಗ್ಗೆ 8ರ ಸುಮಾರಿಗೆ ಲಕ್ಷ್ಮೀಕಾಂತ್ ತಂದೆ ನಾಗೀಂದ್ರಪ್ಪ ಮಾಂಗ್ ಶಿವರಾಯ್‌ನಿಗೆ ಹಳ್ಳದ ಸೇತುವೆಯ ಮೇಲೆ ಖಡ್ಗದಿಂದ ತಲೆಯ ಲಗಡೆ ಕುತ್ತಿಗೆ ಮೇಲೆ ಹೊಡೆದು ಹತ್ಯೆ ಮಾಡಿದ್ದಾಗಿ ಮೃತನ ಪತ್ನಿ ಪುತ್ರ ಸಿದ್ಧರಾಮ್‌ನಿಗೆ ತಿಳಿಸಿದಳು. ಈ ಕುರಿತು ಹತ್ಯೆಗೆ ಒಳಗಾದ ವ್ಯಕ್ತಿಯ ಪುತ್ರ ದೂರು ಸಲ್ಲಿಸಿದ್ದು, ಫರತಾಬಾದ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಜೋಡೆತ್ತಿನ ಬಂಡಿ ಓಟ:ಶಿರೂರ ಎತ್ತುಗಳು ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.1–ತಾಲೂಕಿನ ಶಿರೂರ ಪಟ್ಟಣದ ಮಳೇರಾಜೇಂದ್ರ ಸ್ವಾಮಿಗಳ ಮಠದಲ್ಲಿ ಶ್ರಾವಣ ಮಾಸದ ಮುಕ್ತಾಯ ಪ್ರಯುಕ್ತ ಭಕ್ತವೃಂದ ಹಮ್ಮಿಕೊಂಡ ಜೋಡು ಎತ್ತಿನ ಕೂಡು ಪುಟ್ಟಬಂಡಿ ಓಟದ ಸ್ಪರ್ಧೆಯಲ್ಲಿ ಶಿರೂರಿನ ಮನೋಜ ಗಾಳಿಯವರ ಜೋಡೆತ್ತುಗಳು ಪ್ರಥಮ ಸ್ಥಾನ ಪಡೆದವು.

ಅತ್ಯಂತ ರೋಚಕವಾಗಿ ನಡೆದ ಈ ಸ್ಪರ್ಧೆಯಲ್ಲಿ ಶಿರೂರಿನ ಮನೋಜ ಗಾಳಿ ಅವರ ಎತ್ತುಗಳು ಪ್ರಥಮ ಸ್ಥಾನದೊಂದಿಗೆ ಮೊದಲ ಬಹುಮಾನ ಪಡೆದರೆ, ಗುಳೇದಗುಡ್ಡ ತಾಲೂಕಿನ ಬೂದಿನಗಡದ ಮೂಕೇಶ್ವರಿ ಜೋಡೆತ್ತುಗಳು ದ್ವಿತೀಯ, ಶಿರೂರಿನ ಸಿದ್ದಪ್ಪ ಗಾಳಿ ಅವರ ಎತ್ತಗಳು ತೃತೀಯ ಮತ್ತು ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಹೊಳೆಹಂಗರಗಿಯ ಮಲ್ಲಪ್ಪ ಮುದ್ದಾಪೂರ ಅವರ ಎತ್ತುಗಳು ಚತುರ್ಥ ಬಹುಮಾನ ಪಡೆದವು. ಸ್ಥಳೀಯ ಶಿವಯೋಗಾಶ್ರಮದ ಸಿದ್ಧಲಿಂಗ ಶ್ರೀಗಳು ಸ್ಪರ್ಧೆಗೆ ಚಾಲನೆ ನೀಡಿ,

ರೈತರು ಇಂತಹ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಖುಷಿ ಪಡುತ್ತಾರೆ. ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಬಂಡಿ ಓಡಿಸುವ ಸ್ಪರ್ಧೆಗಳು ನೋಡುಗರನ್ನು ಆಕರ್ಷಿಸುತ್ತವೆ ಎಂದರು.

ಮುರನಾಳದ ಜಗನ್ನಾಥ ಶ್ರೀಗಳು, ಉಮೇಶ ಮೇಟಿ, ರಂಗಪ್ಪ ಮಳ್ಳಿ, ಸಂಗಣ್ಣ ಹಂಡಿ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ, ಸಿದ್ದಪ್ಪ ಕೋಟಿಕಲ್ಲ, ಮುದುಕಪ್ಪ ಬಿಲ್ಲಾರ, ಸಿದ್ದಪ್ಪ ಹಂಡರಗಲ್ಲ, ಹನಮಂತ ಆಡಿನ,

ಜಗದೀಶ ದೇಸಾನಿ, ಎಸ್.ಬಿ.ಮಾಚಾ, ಎಸ್.ಎಫ್.ಬಾರಡ್ಡಿ, ಶ್ರೀಶೈಲ ಮಲಘಾಣ, ಶಿವು

ಕಾಮರಡ್ಡಿ, ಸಿದ್ದಪ್ಪ ಗಾಳಿ, ಸುರೇಶ ರಾಜೂರ ಮತ್ತಿತರರು ಇದ್ದರು.

# ಬೇಡವಾದ ನವಜಾತ ಶಿಶುವನ್ನು ದತ್ತು ಸಂಸ್ಥೆಗೆ ದಾಖಲಿಸಿ

ರಾಯಚೂರು ಸೆ 01: ಬೇಡವಾದ ನವಜಾತ ಶಿಶುವನ್ನು ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಒಪ್ಪಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಯ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯಲ್ಲಿ ಕಳೆದ ಒಂದು ವಾರದಲ್ಲಿ ಎರಡು ನವಜಾತ ಶಿಶುಗಳನ್ನು ಅಪರಿಚಿತ ವ್ಯಕ್ತಿಗಳು ಹಳ್ಳದ ದಂಡೆಯಲ್ಲಿ ಮತ್ತು ಕ್ಯಾನಲ್ ಪಕ್ಕದಲ್ಲಿ ಎಸೆದು ಹೋಗಿದ್ದು, ಸಾರ್ವಜನಿಕರು ನೀಡಿದ ಮಾಹಿತಿಯ ಆಧಾರದ ಮೇಲೆ ಎರಡು ಮಕ್ಕಳನ್ನು ರಕ್ಷಣೆ ಮಾಡಲಾಗಿದೆ. ಇದು ಅತ್ಯಂತ ಅಮಾನವೀಯ ಕೃತ್ಯವಾಗಿದೆ.

ನವಜಾತ ಶಿಶುಗಳು ತಮಗೆ ಬೇಡವಾದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ:1098ಗೆ ಕರೆ ಮಾಡಿ ಮಾಹಿತಿ ನೀಡಿದಲ್ಲಿ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಗುವನ್ನು ಸ್ವೀಕರಿಸಿ ಸರ್ಕಾರಿ ದತ್ತು ಸಂಸ್ಥೆಗೆ ದಾಖಲು ಮಾಡುತ್ತಾರೆ. ಈ ಪ್ರಕ್ರಿಯೆಯಲ್ಲಿ ನವಜಾತ ಮಗುವಿನ ತಾಯಿ ಪೋಷಕರಿಗೆ ಯಾವುದೇ ವಿಚಾರಣೆಗೆ ಒಳಪಡಿಸಲಾಗುವುದಿಲ್ಲ. ಈ ಬಗ್ಗೆ ಸಾರ್ವಜನಿಕರು ಯಾವುದೇ ಭಯ ಆತಂಕವಿಲ್ಲದೇ ಮಕ್ಕಳ ಸಹಾಯವಾಣಿ ಸಂಖ್ಯೆ 1098ಗೆ ಕರೆ ಮಾಡಿ ಬೇಡವಾದ ಮಗುವನ್ನು ಒಪ್ಪಿಸಬೇಕು. ಸಾರ್ವಜನಿಕರು ಯಾವುದೇ ಕಾರಣಕ್ಕು ಮಕ್ಕಳನ್ನು ಕಸದ ಬುಟ್ಟಿಯಲ್ಲಿ, ರಸ್ತೆ ಬದಿಯಲ್ಲಿ, ತಿಪ್ಪೆ ಗುಂಡಿಯಲ್ಲಿ ಹಾಕುವುದರ ಮೂಲಕ ಮಕ್ಕಳ ಸಾವಿಗೆ ಕಾರಣರಾಗಬಾರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ನವೀನ್‌ಕುಮಾರ ಯು ಅವರು ರಾಯಚೂರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಕೊಲೆ ಮಾಡಿದ ಅಪರಾಧಿಗೆ ಜೀವಾವಧಿ ಶಿಕ್ಷೆ

ರಾಯಚೂರು ಸೆ 01 : ಕೊಲೆ ಮಾಡಿದ ಅಪರಾಧಿಗೆ ರಾಯಚೂರಿನ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಕಲಂ 504, 506 ಮತ್ತು 302 ಆಫ್ ಐಪಿಸಿ ಅಡಿಯಲ್ಲಿ ಜೀವಾವಧಿ ಶಿಕ್ಷೆ ವಿಧಿಸಿದೆ.

ಹೊಲ ಸ್ವಚ್ಛ ಮಾಡಿ ಸಾಗುವಳಿ ಮಾಡಿದ್ದು ಸ್ವಚ್ಛ ಮಾಡಿದ ಕೂಲಿ ಹಣ ವ್ಯತ್ಯಾಸವಾಗಿ ಜಗಳ ಮಾಡಿಕೊಂಡಿದ್ದು, ಅದೇ ವರ್ಷ ಗಣೇಶ ಮೂರ್ತಿ ತರುವ ವಿಚಾರದಲ್ಲಿಯೂ ಇಬ್ಬರ ನಡುವೆ ಜಗಳವಾಗಿ ಆ ಸಮಯದಲ್ಲಿ ಆರೋಪಿತನು ದ್ವೇಷ ಸಾಧಿಸುತ್ತ ದಿನಾಂಕ 12–03–2017ರಂದು ರಾತ್ರಿ 9 ಗಂಟೆ ಸುಮಾರಿಗೆ ಕಬ್ಬಿಣದ ಚಾಕುವಿನಿಂದ ಈ ಪ್ರಕರಣದ ಸಾಕ್ಷಿ ನಂ.6ರ ಮಗನಾದ ಕೆ ಬಸವ ಎಂಬಾತನ ಹೊಟ್ಟೆಗೆ ಚುಚ್ಚಿದಾಗ ರಕ್ತ ಸ್ರಾವವಾಗಿ, ತೀವ್ರ ಸ್ವರೂಪದ ಗಾಯಗೊಂಡು ರಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದು 13–03–2017ರಂದು ಬೆಳಗ್ಗೆ ಮೃತಪಟ್ಟಿದ್ದಾನೆ ಎಂದು ರಮೇಶ ಎಂಬುವರು ಸಲ್ಲಿಸಿದ ಪಿರ್ಯಾದಿ ಆಧಾರದ ಮೇಲೆ ಸಿರವಾರ ಪೊಲೀಸ್ ಠಾಣೆಯ ಆರಕ್ಷಕರು ಪ್ರಕರಣವನ್ನು ದಾಖಲು ಮಾಡಿಕೊಂಡು ಆಗಿನ ಶ್ರೀ ಚಂದ್ರಶೇಖರ ಜಿ., ಸಿಪಿಐ ಮಾನವಿ ಇವರು ಪ್ರಕರಣದ ತನಿಖೆಯನ್ನು ಪೂರೈಸಿ ಆರೋಪಿತನ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ದೋಷಾರೋಪಣೆ ಪತ್ರ ಸಲ್ಲಿಸಿದ್ದರು. ಸಾಕ್ಷಿ ಪುರಾವೆಗಳನ್ನು ಪರಿಶೀಲಿಸಿದ ಮಾನ್ಯ ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಆರೋಪಿತನಾದ ಬೂದೆಪ್ಪ ಈತನು ಕೆ ಬಸವನನ್ನು ಕೊಲೆ ಮಾಡಿದ ಬಗ್ಗೆ ಸಾಕಷ್ಟು ಪುರಾವೆಗಳು ಇವೆ ಎಂದು ಅಭಿಯೋಜನೆಯು ಪ್ರಕರಣವನ್ನು ರುಜುವಾತುಪಡಿಸಿದ್ದಾರೆಂದು ನಿರ್ಣಯಕ್ಕೆ ಬಂದು ಆರೋಪಿಗೆ ಜೀವಾವಧಿ ಶಿಕ್ಷೆ ಮತ್ತು 50,000 ರೂ ದಂಡ ವಿಧಿಸಿ ತೀರ್ಪು ನೀಡಿರುತ್ತಾರೆ. ಸರ್ಕಾರದ ಪರವಾಗಿ ಶ್ರೀ ಮತಿ ಎಂ ಸರ್ವಮಂಗಳ ಸಾರ್ವಜನಿಕರು ಅಭಿಯೋಜಕರು ವಾದ ಮಂಡಿಸಿದ್ದರು ಎಂದು ರಾಯಚೂರು ಸಾರ್ವಜನಿಕ ಅಭಿಯೋಜಕರ ಕಚೇರಿ, 2ನೇ ಅಪರ ಸತ್ರ ನ್ಯಾಯಾಲಯ ರಾಯಚೂರು ಇವರ ಪ್ರಕಟಣೆ ತಿಳಿಸಿದೆ.

# ಅತಿವೃಷ್ಟಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಸಂಸದ ಸಾಗರ್ ಖಂಡ್ರೆ ಭೇಟಿ:ತುರ್ತು ಪರಿಹಾರ ಕ್ರಮಕ್ಕೆ ಸೂಚನೆ

ಬೀದರ,ಸೆ.1: ಬೀದರ್ ಲೋಕಸಭಾ ಸದಸ್ಯರಾದ ಶ್ರೀ ಸಾಗರ್ ಈಶ್ವರ ಖಂಡ್ರೆ ಅವರು ಇಂದು ಭಾಲ್ಕಿ ತಾಲೂಕಿನ ವಿವಿಧ ಭಾಗಗಳಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ, ಸ್ಥಳೀಯ ಜನರ ಸಮಸ್ಯೆಗಳನ್ನು ಆಲಿಸಿ, ಪರಿಶೀಲನೆ ನಡೆಸಿದರು.



ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ಸಾವಿರಾರು ಎಕರೆಯಲ್ಲಿ ಬೆಳೆದು ನಿಂತಿದ್ದ ಸೋಯಾ, ತೊಗರಿ ಸೇರಿದಂತೆ ಹಲವು ಬೆಳೆಗಳು ನಾಶವಾಗಿದೆ. ನೂರಾರು ಮನೆಗಳು ಹಾನಿಗೊಳಗಾಗಿದ್ದು, ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ ದವಸ ಧಾನ್ಯ ನೀರು ಪಾಲಾಗಿದೆ. ಕೆಲವು ಸಂಪರ್ಕ ಸೇತುವೆಗಳು ಕೊಚ್ಚಿಹೋಗಿದ್ದು, ರಸ್ತೆ ಸಂಪರ್ಕ, ವಿದ್ಯುತ್ ಮತ್ತು ನೀರು ಸರಬರಾಜು ಕಡಿತವಾಗಿದೆ. ಜನರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಸಂಸದರು ರೈತರ ಹೊಲಗಳಿಗೆ ಭೇಟಿ ನೀಡಿ, ಜಮೀನಿನಲ್ಲಿ ನೀರು ನಿಂತಿರುವುದು ಮತ್ತು ಪ್ರಮುಖ ಬೆಳೆಗಳಿಗೆ ಉಂಟಾದ ನಷ್ಟವನ್ನು ಸ್ವತಃ ಪರಿಶೀಲಿಸಿದರು. ವಿಪರೀತ ಮಳೆಯಿಂದ ಉಂಟಾದ ಬೆಳೆ ಹಾನಿಯ ಬಗ್ಗೆ ತುರ್ತು ಸಮೀಕ್ಷೆ ನಡೆಸಿ, ರೈತರಿಗೆ ಬೆಳೆ ವಿಮೆ ಕಂಪನಿಗಳಿಂದ ಸೂಕ್ತ ಪರಿಹಾರ ದೊರಕಿಸುವಂತೆ ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮನೆಗಳಿಗೆ ಹಾನಿಯಾದ ಕುಟುಂಬಗಳಿಗೆ ತಕ್ಷಣದ ಪರಿಹಾರ ನಿಧಿ ನೀಡುವಂತೆ, ರಸ್ತೆಗಳು, ಸೇತುವೆಗಳು, ವಿದ್ಯುತ್ ಮತ್ತು ನೀರು ಸರಬರಾಜು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ತುರ್ತಾಗಿ ಪುನಃಸ್ಥಾಪನೆ ಮಾಡುವಂತೆ ಸಂಭಂದಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಆಡಳಿತಾಧಿಕಾರಿಗಳು, ಜನಪ್ರತಿನಿಧಿಗಳು, ಗ್ರಾಮಸ್ಥರು ಹಾಗೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಪ್ರವಾಹ ಪೀಡಿತ ಪ್ರದೇಶಗಳಿಗೆ 50 ಕೋಟಿ ತಕ್ಷಣ ಬಿಡುಗಡೆ:

## ಇನ್ನೂ 100 ಕೋಟಿ ಬಿಡುಗಡೆಗೆ ಮುಖ್ಯಮಂತ್ರಿಗಳಿಗೆ ಮನವಿ: ಸಚಿವ ರಹೀಮ್ ಖಾನ್

ಬೀದರ, ಸೆ.1: ಪೌರಾಡಳಿತ ಮತ್ತುಹಜ್ ಖಾತೆ ಸಚಿವ ರಹೀಮ್‌ಖಾನ್ ಅವರು ಇಂದು ಬೀದರ ತಾಲ್ಲೂಕವ್ಯಾಪ್ತಿಯ ಭಾರಿ ಮಳೆಯಿಂದ ಅತಿವೃಷ್ಟಿ ಪ್ರದೇಶಗಳಾದ ಸಂಗನಳ್ಳಿ, ಇಸ್ಲಾಂಪೂರ, ಇಮಾಮ್‌ಬಾದ್‌ಹಳ್ಳಿ, ಮಾಲೆಗಾಂವ್, ಕಪಲಾಪೂರ, ಅಲಮಸ್‌ಪುರ, ಜಾಂಪಡ, ಅಲ್ಲಾಪೂರ ಹಾಗೂ ನೇಮತಾಬಾದ ಸ್ಥಳಕ್ಕೆ ಭೇಟಿ ಹಾಗೂ ಸ್ಥಳ ಪರಿಶೀಲನೆ ನಡೆಸಿದರು. ಮುಖ್ಯಮಂತ್ರಿಗಳು ತಕ್ಷಣಕ್ಕೆ 50 ಕೋಟಿ ಪರಿಹಾರ ಅನುದಾನ ನೀಡಿದ್ದು ಇನ್ನೂ 100 ಕೋಟಿ ಹೆಣಟಿಜಜಜಿಟಿಜಜಚ್ಚಿನ ಪರಿಹಾರಕ್ಕೆ ಮನವಿ ಮಾಡಲಾಗಿದೆ ಎಂದು ಸಚಿವರು ಹೇಳಿದರು. ಅಲಿಯಂಬರ ಗ್ರಾಮದಲ್ಲಿ ಹಾನಿಗೊಳಗಾದ ಸೇತುವೆಯ ದುರಸ್ತಿಗೆ 5 ಕೋಟಿ ಬಿಡುಗಡೆ ಮಾಡಲಾಗುವುದು.



ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಹಾನಿಗೊಳಗಾದ ರಸ್ತೆ ಸೇತುವೆ ದುರಸ್ತಿ ಕಾರ್ಯ ಶೀಘ್ರವೇ ಕೈಗೊಳ್ಳಲು ಸಚಿವರು ಸೂಚಿಸಿದರು. ಕಳೆದ ಮೂರು ದಿನಗಳಿಂದ ಸತತವಾಗಿ ಹಲವಾರು ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಚಿವರು ಸಪ್ಟೆಂಬರ್ 6 ರಿಂದ ಮತ್ತೆ ಮಳೆ ಪ್ರವಾಹ ಪರಿಶೀಲನಾ ಕಾರ್ಯ ಕೈಗೊಳ್ಳುವುದಾಗಿ ತಿಳಿಸಿದರು.

ಭಾರೀ ಮಳೆಯಿಂದಾಗಿ ರೈತರ ಹೊಲಗಳಲ್ಲಿ ಬೆಳಯಲಾದ ಹೆಸರು, ಉದ್ದು ಸೋಯಾಬೀನ್, ತೋಗರೆ, ಸಂಪೂರ್ಣವಾಗಿ ನಾಶವಾಗಿವೆ ಮತ್ತು ವಿವಿಧ ಸ್ಥಳಗಳಲ್ಲಿ ಅನೇಕ ಮನೆಗಳು ಕುಸಿದಿವೆ. ಪ್ರತಿಯೊಂದು ವಿಪತ್ತು ಮತ್ತು ಹಾನಿಯ ವರದಿ ಮಾಡಲು ಮತ್ತು ರೈತರಿಗೆ ಸಕಾಲದಲ್ಲಿ ಪರಿಹಾರ ನೀಡಲು ಜಂಟಿ ಇಲಾಖಾ ಸಮೀಕ್ಷೆಯನ್ನು ಮಾಡಲು ಅಧಿಕಾರಿಗಳಿಗೆ ನಿರ್ದೇಶಿಸಿದರು. ಬೆಳೆ ಹಾನಿ ಮತ್ತು ಮನೆ ಹಾನಿಗೆ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಅಡಿಯಲ್ಲಿ ತಕ್ಷಣ ಪರಿಹಾರ ನೀಡಲಾಗುವುದು.

ಈ ಸಂದರ್ಭದಲ್ಲಿ ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬೀದರ ತಹಸಿಲ್ದಾರ್ ರವೀಂದ್ರ ಧಾಮಾ, ಕೃಷಿ ಇಲಾಖೆ ಉಪ ನಿರ್ದೇಶಕ ಇಕ್ಬಾಲ್ ಅನ್ಸಾರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಪೊಲೀಸ್ ವಾಹನಕ್ಕೆ ಸಂಸದ ರಾಜಶೇಖರ್ ಹಿಟ್ನಾಳ್ ಚಾಲನೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರ ಅನುದಾನದಲ್ಲಿ ಪೊಲೀಸ್ ಇಲಾಖೆಗೆ ನೀಡಿದ ವಾಹನಕ್ಕೆ ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ ಸೋಮವಾರ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಅವರು ನೂತನ ಪೊಲೀಸ್ ವಾಹನಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಬಸ್‌ಗೆ ಚಾಲನೆ ನೀಡಿದ ಬಳಿಕ ಸಂಸದರು ಸ್ವತಃ ತಾವೇ ಬಸ್ ಚಲಾಯಿಸಿ, ಬಸ್ಸಿನ ಸೌಕರ್ಯದ ಕುರಿತು ಪರಿಸೀಲನೆ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಬಸಾಪೂರ ಗ್ರಾಮದ ಹತ್ತಿರವಿರುವ ಹೊಸ ಜಿಲ್ಲಾ ಪೊಲೀಸ್ ಕ್ವಾಟ್ರಸ್‌ದಿಂದ ಪೊಲೀಸ್ ನೌಕರರ ಮಕ್ಕಳು ಶಾಲೆಗಾಗಿ ಕೊಪ್ಪಳಕ್ಕೆ ಬರಬೇಕಿದ್ದು, ಅಲ್ಲಿ ವಾಹನದ ಸೌಲಭ್ಯದ ಕೊರತೆ ಇರುವ ಕಾರಣ ನಮ್ಮ ನೌಕರರು ಈ ಕ್ವಾಟ್ರಸ್‌ನಲ್ಲಿ ವಾಸಿಸಲು ಹಿಂದೇಟು ಹಾಕುತ್ತಿದ್ದರು. ಈ ಹಿನ್ನೆಲೆಯಲ್ಲಿ ಸಂಸದರಿಗೆ ಪೊಲೀಸರು ಮನವಿ ಸಲ್ಲಿಸಿದ್ದು, ಸಂಸದರು ತಮ್ಮ ಎಂಪಿ ನಿಧಿಯಿಂದ 24 ಲಕ್ಷ ವೆಚ್ಚದಲ್ಲಿ ಸಿಸಿ ಕ್ಯಾಮರ, ಮೈಕ್ ಸಿಸ್ಟಮ್ ಒಳಗೊಂಡಂತೆ ಇತರೆ ಮೂಲ ಸೌಕರ್ಯಗಳ ಜೊತೆಗೆ ಪೊಲೀಸ್ ಇಲಾಖೆಗೆ ಒಂದು ಬಸ್ ಒದಗಿಸಿರುತ್ತಾರೆ. ಇದರಿಂದ ಪೊಲೀಸ್ ನೌಕರರ ಮಕ್ಕಳ ಶಿಕ್ಷಣಕ್ಕೆ ತುಂಬಾ ಅನುಕೂಲವಾಗಲಿದ್ದು, ಸಂಸದರಿಗೆ ಪೊಲೀಸ್ ಇಲಾಖೆಯ ಪರವಾಗಿ ಕೃತಜ್ಞತೆಯನ್ನು ಸಲ್ಲಿಸುತ್ತೇನೆ ಎಂದು ಹೇಳಿದರು. ಈ ಸಂಧರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಹೇಮಂತ್ ಕುಮಾರ್, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಸೇರಿದಂತೆ ಪೊಲೀಸ್ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಂಬಂಧಿಗಳು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.